ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೬

ಪಟ್ಟಿ – ೦೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತ ಮೂರನೇ ಅಧಿವೇಶನ
ಶುಕ್ರವಾರ, ದಿನಾಂಕ : ೧೯ನೇ ಜುಲೈ, ೨೦೨೪

---

## ಸಮೂಹ – V

೧. ಸಮಾಜ ಕಲ್ಯಾಣ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

೩. ಕೃಷಿ ಸಚಿವರು

೪. ಕಾರ್ಮಿಕ ಸಚಿವರು

೫. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೬. ಯೋಜನೆ ಮತ್ತು ಸಾಂಖ್ಯಿಕ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು

---

## ಕಟ್ಟಡ ನಿರ್ಮಾಣ ಕಾರ್ಮಿಕರ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೩ (೫೧೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಎಷ್ಟು ಜನ ಕಟ್ಟಡ ನಿರ್ಮಾಣ ಕಾರ್ಮಿಕರನ್ನು ನೋಂದಣಿ ಮಾಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ಕರ್ನಾಟಕ ಕಾರ್ಮಿಕ ಮಂಡಳಿಯಲ್ಲಿ ಒಟ್ಟು ಎಷ್ಟು ಜನರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನೋಂದಾವಣೆಯಾಗಿರುವ ಕಟ್ಟಡ ಕಾರ್ಮಿಕರಿಲ್ಲದೇ ಬಹಳಷ್ಟು ಕಟ್ಟಡಗಳ ನಿರ್ಮಾಣ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಯಾವ ರೀತಿಯ ಕಠಿಣ ಕ್ರಮಗಳನ್ನು ಕೈಗೊಂಡಿದೆ ;

(ಉ) ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಯಾವ್ಯಾವ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಹಾಗೂ ಹೊಸದಾಗಿ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ?

## ಮೆಟ್ರಿಕ್ ನಂತರದ ಸರ್ಕಾರಿ ವಸತಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫೪ (೫೧೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದಲ್ಲಿರುವ ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಅವುಗಳಲ್ಲಿ ಹಿಂದುಳಿದ ವರ್ಗ, ಎಸ್.ಸಿ, ಎಸ್.ಟಿ ಮತ್ತು ಅಲ್ಪಸಂಖ್ಯಾತರ ವಸತಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ವಸತಿ ನಿಲಯಗಳಿಗೆ ಪ್ರವೇಶ ಪಡೆಯಲು ಆನ್‌ಲೈನ್ ಅರ್ಜಿ ಸಲ್ಲಿಸುವ ಪ್ರಕ್ರಿಯೆ ಜಾರಿಯಾಗಿರುವುದರಿಂದ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ವಸತಿ ನಿಲಯಗಳಲ್ಲಿ ಇರುವಂತಹ ಮಕ್ಕಳಿಗೆ ಯಾವ-ಯಾವ ರೀತಿಯ ಸೌಲಭ್ಯ ಸವಲತ್ತುಗಳನ್ನು ಒದಗಿಸಲಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಹಡ್ಸನ್ ವೃತ್ತದಲ್ಲಿರುವ ಕೃಷಿ ಭವನದ ಆವರಣದಲ್ಲಿ ಕಾನೂನು ಬಾಹಿರ ಚಟುವಟಿಕೆ ನಡೆಯುತ್ತಿರುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೫ (೫೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಹಡ್ಸನ್ ವೃತ್ತದಲ್ಲಿರುವ ಕೃಷಿ ಭವನದ ಆವರಣದಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಶೆಡ್‌ನಲ್ಲಿ ಕಾನೂನು ಬಾಹಿರ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಂಬಂಧ ಸಾರ್ವಜನಿಕರು ನೀಡಿರುವ ದೂರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ಶೆಡ್ಡನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ಒಡೆದು ಹಾಕಲು ಸರ್ಕಾರಕ್ಕಿರುವ ತೊಂದರೆ ಏನು ಮತ್ತು ಯಾವಾಗ ಈ ಶೆಡ್ ಒಡೆದು ಹಾಕಲಾಗುವುದು (ವಿವರ ನೀಡುವುದು)

(ಇ) ನಿಯಮ ಉಲ್ಲಂಘಿಸಿ ಶೆಡ್ ನಿರ್ಮಾಣ ಮಾಡಿದವರ ಮೇಲೆ ಸರ್ಕಾರ ತೆಗೆದುಕೊಂಡ ಕಾನೂನು ಕ್ರಮಗಳೇನು ? (ವಿವರ ನೀಡುವುದು)

## ಘನ ತ್ಯಾಜ್ಯ ವಿಲೇವಾರಿ ಘಟಕಗಳ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೬ (೫೩೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಘನ ತ್ಯಾಜ್ಯ ವಿಲೇವಾರಿ ಘಟಕಗಳಿವೆ ಮತ್ತು ಅದನ್ನು ಯಾರ ಮೂಲಕ ನಿರ್ವಹಣೆಯನ್ನು ಮಾಡಿಸಲಾಗುತ್ತಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯ ಗ್ರಾಮ ಪಂಚಾಯತಿಗಳ ವ್ಯಾಪ್ತಿಗೆ ಬರುವ ಘಟಕಗಳು ಎಷ್ಟು ; (ವಿವರ ನೀಡುವುದು)

(ಇ) ಈ ಘಟಕಗಳ ನಿರ್ವಹಣೆ ಮಾಡಲು ವರ್ಷಕ್ಕೆ ತಗಲುವ ವೆಚ್ಚವೆಷ್ಟು ; ಅದರಲ್ಲಿ ರಾಜ್ಯ ಸರ್ಕಾರದ ಅನುದಾನವೆಷ್ಟು ; ಕೇಂದ್ರ ಸರ್ಕಾರದ ಅನುದಾನವೆಷ್ಟು ;

(ಈ) ಈ ಘಟಕ ನಿರ್ವಹಣೆಗೆ ತಗಲುವ ವೆಚ್ಚವನ್ನು ಯಾವ ಯಾವ ಅನುದಾನದಿಂದ ಬಿಡುಗಡೆ ಮಾಡಲಾಗುತ್ತಿದೆ ಮತ್ತು ಮುಂದಿನ ವರ್ಷಗಳಲ್ಲಿ ಇದರ ನಿರ್ವಹಣೆ ಯಾವ ರೀತಿ ಮಾಡಲಾಗುವುದು ; (ವಿವರ ನೀಡುವುದು)

(ಉ) ತುಮಕೂರು ಜಿಲ್ಲೆಯ ತುರುವೇಕೆರೆ ತಾಲ್ಲೂಕಿನ ಕೊಡಿಗೀಹಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಟಿ. ಹೊಸಹಳ್ಳಿ ಗ್ರಾಮದಲ್ಲಿ ನಿರ್ಮಿಸಿರುವ ತ್ಯಾಜ್ಯ ವಿಲೇವಾರಿ ಘಟಕದಿಂದ ಸಾರ್ವಜನಿಕರಿಗೆ

ತೊಂದರೆ ಆಗುತ್ತಿದ್ದು, ಬೇರೆ ಕಡೆ ಸ್ಥಳಾಂತರಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮೀಣ ಪ್ರಗತಿ ಪಥ ಯೋಜನೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೭ (೫೩೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣ ಪ್ರಗತಿ ಪಥ ಯೋಜನೆ ಯಾವ ಹಂತದಲ್ಲಿದೆ ;

(ಆ) ಸದರಿ ಯೋಜನೆಗೆ ಬಿಡುಗಡೆಯಾದ ಮೊತ್ತವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಗೆ ಒಟ್ಟು ಎಷ್ಟು ವೆಚ್ಚ ಮಾಡಲಾಗುತ್ತಿದೆ ಹಾಗೂ ಇದರ ಹಣಕಾಸು ನಿರ್ವಹಣೆಯನ್ನು ಹೇಗೆ ನಿರ್ವಹಿಸಲಾಗುತ್ತಿದೆ ;

(ಈ) ಗ್ರಾಮೀಣ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಎಷ್ಟು ಬೇಡಿಕೆಗಳು ಸರ್ಕಾರದ ಮುಂದಿವೆ ?

## ಸಿಬ್ಬಂದಿ ಕೊರತೆಯ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೫೮ (೪೭೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಾರ ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಸಿಬ್ಬಂದಿ ವರ್ಗದ ಕೊರತೆ ಹಾಗೂ ಇಲಾಖೆ ಕಾರ್ಯಾಚರಣೆಗೆ ಬೇಕಾಗಿರುವ ಮೂಲಭೂತಸೌಲಭ್ಯ/

ಸೌಕರ್ಯಗಳನ್ನು ಸುವ್ಯವಸ್ಥಿತವಾಗಿ ಒದಗಿಸಿಲ್ಲದ ಕಾರಣ ಯೋಜನಾನುಷ್ಠಾನದಲ್ಲಿ ಎದುರಿಸುತ್ತಿರುವ ಅನಾನುಕೂಲಗಳನ್ನು ಪರಿಹರಿಸುವಲ್ಲಿ ಸರ್ಕಾರದ ಕ್ರಮಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಆ) ಮೂಲಭೂತ ಸೌಲಭ್ಯಗಳನ್ನು ಮತ್ತು ಸೇವೆಯನ್ನು ಶೀಘ್ರವಾಗಿ ಒದಗಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿ ಕೆಲವೊಂದು ಇಲಾಖೆಯನ್ನು ಸೃಷ್ಟಿಸಿದ್ದು, ಸದರಿ ಇಲಾಖೆಗಳಲ್ಲಿ ಮಾನವ ಸಂಪನ್ಮೂಲದ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಂಪನ್ಮೂಲದ ಕೊರತೆಯನ್ನು ಯಾವ ಕಾಲಮಿತಿಯೊಳಗೆ ಸರ್ಕಾರ ಬಗೆಹರಿಸುವುದು ; (ಪೂರ್ಣ ಮಾಹಿತಿ ನೀಡುವುದು)

(ಇ) ಕೋಲಾರ ಜಿಲ್ಲೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು ? (ಅಧಿಕಾರಿ ವೃಂದವಾರು, ಇಲಾಖೆವಾರು, ಸರ್ಕಾರಿ ಮತ್ತು ಹೊರ ಗುತ್ತಿಗೆ ಆಧಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರ ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ಯೋಜನೆಗಳ ಅನುಷ್ಠಾನದ ಬಗ್ಗೆ

**ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೫೫ (೪೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ವಲಯದ ಬಲವರ್ಧನೆಗಾಗಿ ಹಾಗೂ ಬಹು ಸಂಖ್ಯೆಯಲ್ಲಿರುವ ರೈತರುಗಳ ನೆರವಿಗಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ವಿವಿಧ ಪ್ರೋತ್ಸಾಹಕ ಯೋಜನೆಗಳಾವುವು ;

(ಆ) ಆಧುನಿಕ ಮತ್ತು ಸುಲಭವಾದ ಕೃಷಿ ವ್ಯವಸಾಯಕ್ಕಾಗಿ ಪ್ರೋತ್ಸಾಹ ನೀಡುವಲ್ಲಿ ಪರಿಣಾಮಕಾರಿ ಮಾರ್ಗದರ್ಶನಗಳು ಹಾಗೂ ರಾಜ್ಯ ಕೇಂದ್ರ ಸರ್ಕಾರಗಳ ನೆರವಿನ ಯೋಜನೆಗಳ ನೀಡಿಕೆ ಮುಂತಾದ ರೈತ ಸಹಾಯಕ ಕಾರ್ಯಕ್ರಮಗಳು ಯಾವುವು ;

(ಇ) ಕೃಷಿ ಇಲಾಖೆ ಸಿಬ್ಬಂದಿ ವರ್ಗದ ಕೊರತೆ ಹಾಗೂ ಇಲಾಖೆಗೆ ಕಾರ್ಯಾಚರಣೆಗೆ ಬೇಕಾಗಿರುವ ಮೂಲಭೂತಸೌಲಭ್ಯ/ ಸೌಕರ್ಯಗಳನ್ನು ಸುವ್ಯವಸ್ಥಿತವಾಗಿ ಒದಗಿಸಿಲ್ಲದ ಕಾರಣ ಯೋಜನಾನುಷ್ಠಾನದಲ್ಲಿ ಎದುರಿಸುತ್ತಿರುವ ಅನಾನುಕೂಲಗಳನ್ನು ಪರಿಹರಿಸುವಲ್ಲಿ ಸರ್ಕಾರದ ಕ್ರಮಗಳು ಯಾವುವು ; (ಸಂಪೂರ್ಣವಾದ ಮಾಹಿತಿ ನೀಡುವುದು)

(ಈ) ಕೃಷಿಗಾರಿಕೆ ಲಾಭದಾಯಕವನ್ನಾಗಿ ಮಾಡುವಲ್ಲಿ ಹಾಗೂ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಕ್ಷೇತ್ರದಲ್ಲಿ ಜನರು ತೊಡಗಿಸಿಕೊಳ್ಳುವಂತಹ ಪರಿಸ್ಥಿತಿಯ ನಿರ್ಮಾಣ ಉಂಟುಮಾಡುವಲ್ಲಿ ಸರ್ಕಾರದ ಕಾರ್ಯಕ್ರಮಗಳು ಯಾವುವು ? (ವಿಸ್ತೃತವಾದ ಮಾಹಿತಿ ನೀಡುವುದು)

## ಕೃಷಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಹಾಗೂ ಸೆನೇಟ್ ಸದಸ್ಯರ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೦ (೪೮೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೃಷಿ ವಿಶ್ವವಿದ್ಯಾಲಯದಲ್ಲಿರುವ ಸೆನೇಟ್ ಹಾಗೂ ಸಿಂಡಿಕೇಟ್ ಸದಸ್ಯರುಗಳ ಸಂಖ್ಯೆ ಎಷ್ಟು ; ಸದರಿ ಸದಸ್ಯರುಗಳನ್ನು ಯಾವ ಯಾವ ರೀತಿ ಹಾಗೂ ಯಾವ ಯಾವ ಕೋಟಾದಡಿ (Quota) ನೇಮಕ ಮಾಡಿಕೊಳ್ಳಲಾಗುವುದು ; ಸದಸ್ಯರುಗಳನ್ನು ನಾಮನಿರ್ದೇಶನಗೊಳಿಸಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಆ) ಪ್ರಸ್ತುತ ರಾಜ್ಯದ ಕೃಷಿ ವಿಶ್ವವಿದ್ಯಾಲಯದಲ್ಲಿರುವ ಸೆನೇಟ್ ಹಾಗೂ ಸಿಂಡಿಕೇಟ್ ಸದಸ್ಯರುಗಳ ವಿವರ ಹಾಗೂ ಇವರುಗಳಿಗೆ ಯಾವ ಯಾವ ರೀತಿ ಮತ್ತು ಯಾವ ಯಾವ ಕೋಟಾದಡಿ (Quota) ನೇಮಕ ಮಾಡಿಕೊಳ್ಳಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೃಷಿ ವಿಶ್ವವಿದ್ಯಾಲಯದಲ್ಲಿ ಕುಲಸಚಿವರ ನೇಮಕಾತಿಗಿರುವ ಮಾನದಂಡವೇನು ? (ಮಾಹಿತಿ ನೀಡುವುದು)

## ಅಭಿವೃದ್ಧಿ ನಿಗಮ ಹಾಗೂ ವಸತಿ ನಿಲಯಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬೧ (೪೮೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ವಿವಿಧ ಅಭಿವೃದ್ಧಿ ನಿಗಮಗಳು ಯಾವುವು ; ಅವುಗಳಿಂದ ದೊರೆಯುವ ವಿವಿಧ ಸೌಲಭ್ಯಗಳು ಯಾವುವು ; ಅವುಗಳಿಗೆ ಇರುವ ರೂಪುರೇಷೆಗಳೇನು ; (ವಿವಿಧ ನಿಗಮಗಳವಾರು ಸಂಪೂರ್ಣ ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದ ಪರಿಶಿಷ್ಟ ಜಾತಿ ಕಾಲೋನಿಗಳ ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಇತರ ಅಭಿವೃದ್ಧಿ ಕಾಮಗಾರಿಗಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಗೆ ಬರುವ ವಸತಿ ನಿಲಯಗಳೆಷ್ಟು; ಅಲ್ಲಿ ದೊರೆಯುವ ವಿವಿಧ ಸೌಲಭ್ಯಗಳು ಯಾವುವು ; ಅವುಗಳಿಗೆ ಇರುವ ರೂಪುರೇಷೆಗಳೇನು ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕಳೆದ ೨ ವರ್ಷಗಳಿಂದ ಶಿವಮೊಗ್ಗ ಜಿಲ್ಲೆಯಲ್ಲಿರುವ ವಸತಿ ನಿಲಯಗಳಿಗೆ ನಿಗದಿಯಾದ ಅನುದಾನ ಎಷ್ಟು ; ಖರ್ಚು ಮಾಡಿದ ಅನುದಾನವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಮಲೆನಾಡು ಅಭಿವೃದ್ಧಿ ನಿಗಮದ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೨ (೪೮೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಲೆನಾಡು ಅಭಿವೃದ್ಧಿ ನಿಗಮ ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆಯೇ ; ಹೌದಾದಲ್ಲಿ, ಸದರಿ ಮಲೆನಾಡು ಅಭಿವೃದ್ಧಿ ನಿಗಮಕ್ಕೆ ನಾಮನಿರ್ದೇಶನಗೊಂಡ ಅಧ್ಯಕ್ಷರ, ನಿರ್ದೇಶಕರ ಹಾಗೂ ಅಧಿಕಾರಿ ವರ್ಗದವರ ವಿವರ ನೀಡುವುದು ;

(ಆ) ರಾಜ್ಯದ ಮಲೆನಾಡು ಅಭಿವೃದ್ಧಿ ನಿಗಮಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; ಇದರಲ್ಲಿ ಖರ್ಚಾದ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಇ) ಮಲೆನಾಡು ಅಭಿವೃದ್ಧಿ ನಿಗಮದಿಂದ ಮಲೆನಾಡು ಪ್ರದೇಶ ಅಭಿವೃದ್ಧಿಗೆ ಇದುವರೆಗೂ ರೂಪಿಸಿರುವ ಯೋಜನೆಗಳಾವುವು ; ಸದರಿ ಯೋಜನೆಗಳು ಪ್ರಸ್ತುತ ಯಾವ ಹಂತದಲ್ಲಿವೆ ? (ವಿವರ ನೀಡುವುದು)

## ಹಿಂದುಳಿದ ವರ್ಗದಡಿ ಬರುವ ಜಾತಿ ಹಾಗೂ ಉಪ ಜಾತಿಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೩ (೪೮೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಅಡಿಯಲ್ಲಿ ಒಟ್ಟು ಎಷ್ಟು ಜಾತಿ ಹಾಗೂ ಉಪ ಜಾತಿಗಳು ನೋದಾಯಿಸಲ್ಪಟ್ಟಿವೆ ; (ಜಾತಿವಾರು ವಿವರ ನೀಡುವುದು)

(ಆ) ಉಪ ಜಾತಿಗಳನ್ನು ಘೋಷಿಸಲು ಇರುವ ಮಾನದಂಡಗಳೇನು ? (ವಿವರ ನೀಡುವುದು)

## ರೈತರ ಬೆಳೆ ನಷ್ಟ ಪರಿಹಾರದ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೬೪ (೫೦೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಂಗಾರು ಬಿತ್ತನೆಗೆ ತಯಾರಿ ನಡೆದರೂ ಕಳೆದ ಬಾರಿ ಮುಂಗಾರು ಕೈಕೊಟ್ಟು, ಉಂಟಾದ ಬೆಳೆ ನಷ್ಟಕ್ಕೆ ಇಲ್ಲಿಯವರೆಗೂ ಪೂರ್ಣ ಪ್ರಮಾಣದಲ್ಲಿ ಪರಿಹಾರ ಸಿಗದೇ ರೈತರು ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ವರ್ಷ ರಾಜ್ಯದಲ್ಲಿ ಘೋಷಿತವಾದ ಬರಪೀಡಿತ ತಾಲ್ಲೂಕುಗಳ ಸಂಖ್ಯೆ ಎಷ್ಟು ಹಾಗೂ ಬೆಳೆ ನಷ್ಟ ಪರಿಹಾರಕ್ಕೆ ಅರ್ಹರಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೆಳೆ ನಷ್ಟ ಪರಿಹಾರಕ್ಕೆ ಫಲಾನುಭವಿಗಳನ್ನು ಯಾವ ಮಾನದಂಡದನ್ವಯ ಆಯ್ಕೆ ಮಾಡಲಾಗಿದೆ ; ಪ್ರತಿ ಫಲಾನುಭವಿಗಳಿಗೆ ನೀಡಲಾಗುವ ಪರಿಹಾರದ ಮೊತ್ತವೆಷ್ಟು ; ಶೇ.೬೦ ರಿಂದ ೭೦ ರೈತರು ಪಟ್ಟಿಯಲ್ಲಿ ಬಿಟ್ಟುಹೋಗಿದ್ದು, ಪರಿಹಾರ ಪಡೆದವರಿಗಿಂತ ವಂಚಿತರೇ ಹೆಚ್ಚು ಎನ್ನುವ ಅಸಮಾಧಾನಕ್ಕೆ ಸರ್ಕಾರದ ಉತ್ತರವೇನು ;

(ಈ) ಇಲ್ಲಿಯವರೆಗೆ ಎಷ್ಟು ರೈತರಿಗೆ ಬೆಳೆ ನಷ್ಟ ಪರಿಹಾರ ನೀಡಲಾಗಿದೆ ; ಬಾಕಿ ಇರುವ ರೈತರಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ನೀಡಲಾಗುವುದು ?

## ರಾಜ್ಯದಲ್ಲಿನ ಅಂಗನವಾಡಿಗಳ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೩೬೫ (೫೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೂಢಿಗತವಲ್ಲದ ಶಾಲಾ ಪೂರ್ವ ಶಿಕ್ಷಣ ಬಾಲ್ಯಾವಸ್ಥೆಯ ಪಾಲನೆ ಅಪೌಷ್ಠಿಕತೆ ನಿವಾರಣೆ ತಾಯಿ ಮತ್ತು ಮಕ್ಕಳ ಆರೋಗ್ಯ ಗರ್ಭಿಣಿ ಬಾಣಂತಿಯರ ಕಾಳಜಿ ಶಾಲೆ ತೊರೆಯುವಿಕೆ ಮತ್ತು ಮರಣದ ಪ್ರಮಾಣ ಕಡಿಮೆ ಮಾಡುವ ಉದ್ದೇಶ ತಾಯಂದಿರಲ್ಲಿ ತಮ್ಮ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ಅಗತ್ಯಗಳನ್ನು ಸರಿಯಾಗಿ ನೋಡಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚಿಸುವುದು ತಾಯಿ ಮಕ್ಕಳ ಸಮಗ್ರ ಆರೋಗ್ಯ ಕಾಪಾಡುವಲ್ಲಿ ಮಹತ್ತರ ಪಾತ್ರ ವಹಿಸುವ ಅಂಗನವಾಡಿ ಸಮಸ್ಯೆಗಳ ಕುರಿತು ಸರ್ಕಾರ ಗಮನಿಸಿದೆಯೇ ;

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳಿವೆ ; ಅವುಗಳಲ್ಲಿ ಸ್ವಂತ ಕಟ್ಟಡ ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ಹಾಗೂ ಬಾಡಿಗೆ ಕಟ್ಟಡ ಹೊಂದಿರುವ ಅಂಗನವಾಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿಗಳಿಗೆ ಸರ್ಕಾರದಿಂದ ಪ್ರತೀ ತಿಂಗಳು ಸರಿಯಾದ ಸಮಯದಲ್ಲಿ ಬಾಡಿಗೆ ನೀಡಲಾಗುತ್ತಿದೆಯೇ ;

(ಈ) ತಾಯಿ ಮತ್ತು ಮಕ್ಕಳ ಹಿತದೃಷ್ಟಿಯಿಂದ ಹಲವಾರು ಕಾರ್ಯ ನಿರ್ವಹಿಸುವ ಅಂಗನವಾಡಿಗಳಿಗೆ ಅಗತ್ಯ ಸಿಬ್ಬಂದಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ; (ವಿವರ ಒದಗಿಸುವುದು)

(ಉ) ಅಂಗನವಾಡಿಗಳಿಗೆ ಸ್ವಂತ ಕಟ್ಟಡದ ಸಮಸ್ಯೆ, ಬಾಡಿಗೆ ನಿರ್ವಹಣೆ ಸಮಸ್ಯೆ, ವಿದ್ಯುತ್ ಬಿಲ್ ಹೊರೆ ಶುದ್ಧ ಕುಡಿಯುವ ನೀರು ಫ್ಯಾನ್ ಶೌಚಾಲಯ ಮುಂತಾದ ಕನಿಷ್ಠ ಮೂಲಭೂತ ಸೌಕರ್ಯಗಳ ಕೊರತೆ ಮುಂತಾದ ಹಲವಾರು ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರದಿಂದ ಯಾವುದಾದರೂ ಸೂಕ್ತ ಕ್ರಮ ಕೈಗೊಳ್ಳಲಾಗಿದೆಯೇ ? (ಮಾಹಿತಿ ನೀಡುವುದು)

## ಗೃಹಲಕ್ಷ್ಮಿ ಯೋಜನೆಯ ಕುರಿತು

**ಶ್ರೀ ಛಲವಾಡಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೬೬ (೫೪೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಾವಣಿ ಮಾಡಿಕೊಂಡಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ನೋಂದಣಿ ಮಾಡಿಕೊಂಡಿರುವ ಎಲ್ಲಾ ಫಲಾನುಭವಿಗಳಿಗೆ ಹಣ ಪಾವತಿ ಮಾಡಲಾಗಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಗೃಹಲಕ್ಷ್ಮಿ ಯೋಜನೆಯಲ್ಲಿ ನೋಂದಣಿ ಮಾಡಿಕೊಂಡಿರುವ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ; ಸದರಿ ಫಲಾನುಭವಿಗಳಿಗೆ ಬಳಕೆಯಾದ ಮೊತ್ತವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಸದರಿ ಯೋಜನೆಗೆ ಸೇರ್ಪಡೆ ಬಯಸಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಸಲ್ಲಿಕೆಯಾಗಿರುವ ಅರ್ಜಿಗಳನ್ನು ಅನುಮೋದನೆಗೊಳಿಸಲಾಗಿದೆಯೇ ; ಇಲ್ಲವಾದಲ್ಲಿ, ಯಾವ ಕಾರಣಕ್ಕಾಗಿ ಯೋಜನೆಗೆ ಸೇರ್ಪಡೆಗೊಳಿಸಿರುವುದಿಲ್ಲ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಫಲಾನುಭವಿಗಳಿಗೆ ಎಷ್ಟು ತಿಂಗಳಿನಿಂದ ಹಣ ಪಾವತಿ ಬಾಕಿ ಇರುತ್ತದೆ ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ ; ಬಾಕಿ ಉಳಿಸಿಕೊಂಡ ಹಣವನ್ನು ಪಾವತಿ ಮಾಡಲು ಯಾವ ಕ್ರಮ ತೆಗೆದುಕೊಳ್ಳಲಾಗಿದೆ ?

## ಸಮಾಜ ಕಲ್ಯಾಣ ಇಲಾಖೆಯಡಿ ಬರುವ ವಸತಿ ಶಾಲೆಗಳಲ್ಲಿ ಶುಚಿತ್ವದ ಕಿಟ್‌ಗಳನ್ನು ನೀಡದಿರುವ ಬಗ್ಗೆ

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೩೬೭ (೫೪೪೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ವಸತಿ ಶಾಲೆಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೩-೨೪ ಮತ್ತು ೨೦೨೪-೨೫ನೇ ಸಾಲಿನಲ್ಲಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ನೀಡುವ ಶುಚಿತ್ವ ಕಿಟ್‌ಗಳು ಇಲ್ಲಿಯವರೆಗೆ ಇನ್ನೂ ತಲುಪದಿರುವುದು ಸಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ವಿಳಂಬಕ್ಕೆ ಕಾರಣಗಳೇನು; ಒಂದು ವೇಳೆ ವಿತರಿಸಲು ಹಂತದಲ್ಲಿದ್ದಲ್ಲಿ ಯಾವ ಸಮಯದಿಂದ ಕಿಟ್‌ಗಳನ್ನು ವಿತರಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ವಿದ್ಯಾರ್ಥಿಗಳಿಗೆ ಪ್ರತಿ ತಿಂಗಳು ಕಿಟ್‌ಗಳನ್ನು ನೀಡಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗುತ್ತಿದೆ ಏಪ್ರಿಲ್-೨೦೨೩ ರಿಂದ ಇಲ್ಲಿಯವರೆಗೆ ಎಷ್ಟು ವೊತ್ತವನ್ನು ಕಿಟ್‌ಗಳಿಗಾಗಿ ವೆಚ್ಚ ಮಾಡಲಾಗಿದೆ ; ಕಿಟ್‌ನಲ್ಲಿ ಯಾವ ಯಾವ ವಸ್ತುಗಳನ್ನು ಸರಬರಾಜು ಮಾಡಲಾಗುತ್ತದೆ ; ಪ್ರತಿ ವಸ್ತುಗಳಿಗನುಗುಣವಾಗಿ ದರಗಳ ಪತ್ಯೇಕ ಮಾಹಿತಿ ನೀಡುವುದು ;

(ಈ) ಪ್ರಸ್ತುತ ಕಿಟ್‌ಗಳನ್ನು ವಿತರಿಸುವ ಕೆಲಸ ಯಾವ ಹಂತದಲ್ಲಿದೆ ; ಕಿಟ್‌ಗಳನ್ನು ನೀಡಲು ವಿಳಂಬವಾದರೇ ವಿದ್ಯಾರ್ಥಿಗಳಿಗೆ ಶುಚಿತ್ವದ ಕೆಲಸವು ಸವಾಲಾಗಿ ಪರಿಣಮಿಸುವುದಿಲ್ಲವೇ ; ಕಾಲ ಕಾಲಕ್ಕೆ ಕಿಟ್‌ಗಳನ್ನು ಸರಬರಾಜು ಮಾಡದಿರಲು ಕಾರಣಗಳೇನು; ಶೈಕ್ಷಣಿಕ ವರ್ಷ ಮುಗಿದ ಮೇಲೆ ವಿತರಿಸುವ ಕಾರ್ಯ ಮಾಡುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುವುದಿಲ್ಲವೇ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸದರಿ ವಸತಿ ಶಾಲೆಗಳಿಗೆ ಪಠ್ಯಪುಸ್ತಕಗಳನ್ನು ಹಾಗೂ ಇನ್ನಿತರ ವಿದ್ಯಾರ್ಥಿಗಳ ಉಪಯುಕ್ತ ವಸ್ತುಗಳನ್ನು ಸರಿಯಾದ ಸಮಯದಲ್ಲಿ ಸರಬರಾಜು ಮಾಡಲಾಗಿದೆಯೇ ; ಮಾಡಿದ್ದಲ್ಲಿ, ದಾಖಲೆಗಳ ಸಮೇತ ಮಾಹಿತಿ ನೀಡುವುದು ; ಇಲ್ಲದಿದ್ದಲ್ಲಿ ಯಾವ ಕಾರಣಕ್ಕಾಗಿ ವಿಳಂಬ ಮಾಡಲಗುತ್ತಿದೆ ; ವಿಳಂಬ ಧೋರಣೆಯಿಂದ ಮಕ್ಕಳ ಶೈಕ್ಷಣಿಕ ಜೀವನಕ್ಕೆ ತೊಂದರೆ ಮಾಡಿದಂತಾಗುವುದಿಲ್ಲವೇ ?

## ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಅನುದಾನ ಬಿಡುಗಡೆಯ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೬೮ (೫೫೪) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಯಲುಸೀಮೆ ಪ್ರದೇಶಾಭಿವೃದ್ಧಿ ಸಮಿತಿಯ ವ್ಯಾಪ್ತಿಗೆ ಬರುವ ತಾಲ್ಲೂಕುಗಳ ಸಂಖ್ಯೆ ಎಷ್ಟು ; ವಿಧಾನಸಭಾ ಕ್ಷೇತ್ರಗಳ ಸಂಖ್ಯೆ ಎಷ್ಟು ;

(ಆ) ಕಳೆದ ಐದು ವರ್ಷಗಳಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ನಿಧಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ಐದು ವರ್ಷಗಳಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ವತಿಯಿಂದ ಎಷ್ಟು ಮೊತ್ತದ ಕಾಮಗಾರಿ ಕೈಗೊಳ್ಳಲು ಕಾರ್ಯದೇಶ ನೀಡಲಾಗಿದೆ ; (ವರ್ಷವಾರು ಮತ್ತು ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಈ) ಕಳೆದ ಐದು ವರ್ಷಗಳಲ್ಲಿ ಮಂಡಳಿಯ ವತಿಯಿಂದ ಕಾಮಗಾರಿಗಳಿಗೆ ಪಾವತಿ ಮಾಡಲಾದ ಮೊತ್ತವೆಷ್ಟು ; (ವರ್ಷವಾರು ಮತ್ತು ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು)

(ಉ) ಬಿಡುಗಡೆಯಾದ ಅನುದಾನಕ್ಕೆ ಹೆಚ್ಚಿನ ಪ್ರಮಾಣದ ಕಾಮಗಾರಿಗಳಿಗೆ ಕಾರ್ಯದೇಶ ನೀಡಿ, ಕಾಮಗಾರಿ ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಹೆಚ್ಚುವರಿಯಾಗಿ ಕೈಗೊಂಡ ಕಾಮಗಾರಿಯ ಪ್ರಮಾಣವೆಷ್ಟು ;

(ಊ) ಕಾರ್ಯಾದೇಶ ನೀಡಿದ ಕಾರಣ ಗುತ್ತಿಗೆದಾರರು ಕಾಮಗಾರಿ ಕೈಗೊಂಡು ಬಿಲ್ ಪಾವತಿಯಾಗದೆ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾಮಗಾರಿ ಮಾಡಿದ ಗುತ್ತಿಗೆದಾರರಿಗೆ ಹಣ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ?

## ಸಹಾಯಕ ನಿರ್ದೇಶಕರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೬೯ (೫೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಹಾಯಕ ನಿರ್ದೇಶಕರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇವರು ನಿರ್ವಹಿಸುವ ಕೆಲಸಗಳೇನು ;

(ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಮಂಜೂರಾಗಿರುವ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿಯಿರುವ ಸಹಾಯಕ ನಿರ್ದೇಶಕರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ವಿವರ ನೀಡುವುದು)

(ಇ) ಹಲವು ಹುದ್ದೆಗಳು ಖಾಲಿಯಿರುವ ಕಾರಣ ಇಲಾಖೆಯ ಯೋಜನೆ/ಕಾರ್ಯಕ್ರಮಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆಗೆ ತೊಂದರೆಯಾಗುವುದಿಲ್ಲ ;

(ಈ) ಖಾಲಿಯಿರುವ ಸಹಾಯಕ ನಿರ್ದೇಶಕರ ಹುದ್ದೆಗೆ ಯಾವ ಕಾಲಮಿತಿಯಲ್ಲಿ ಬಡ್ತಿ ನೀಡಲಾಗುವುದು ?

## ಕೋರ್ಟ್ ಆದೇಶದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಶಿಕ್ಷಕರ ವೇತನ ಹೆಚ್ಚಳ ಮಾಡುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೭೦ (೫೫೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರಿಗೆ ನೀಡುತ್ತಿರುವ ವೇತನವೆಷ್ಟು ; ಕೋರ್ಟ್ ಆದೇಶದ ಮೇಲೆ ೧೫-೨೦ ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರು ಮತ್ತು ಶಿಕ್ಷಕರು ಅಡುಗೆಯವರು ಮತ್ತು ಸ್ವಚ್ಛತಾ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನವೆಷ್ಟು ;

(ಆ) ಕೋರ್ಟ್ ಆದೇಶದ ಮೇಲೆ ಕಾರ್ಯನಿರ್ವಹಿಸುತ್ತಿರುವ ಪ್ರಾಂಶುಪಾಲರ ಶಿಕ್ಷಕರ ವೇತನ ಹೆಚ್ಚಳದ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವಾಗ ಹೆಚ್ಚಳ ಮಾಡಲಾಗುವುದು ;

(ಇ) ಕೋರ್ಟ್ ಆದೇಶದ ಮೇಲೆ ಮತ್ತು ಹೊರಗುತ್ತಿಗೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕನಿಷ್ಠ ವೇತನ ಸಹ ಪಾವತಿಯಾಗದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರ ವೇತನ ತಾರತಮ್ಯ ನಿವಾರಣೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಕೋರ್ಟ್ ಆದೇಶದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಸೇವಾ ಭದ್ರತೆ ನೀಡುವಂತೆ ಮಾನ್ಯ ಉಚ್ಛ ನ್ಯಾಯಾಲಯ ಆದೇಶಿಸಿದೆಯೇ ; ಆದೇಶಿಸಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮೀಣ ಪ್ರದೇಶದಲ್ಲಿನ ಜನತೆಗೆ ಶುದ್ಧ ಕುಡಿಯುವ ನೀರಿನ ಪೂರೈಕೆ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :-**

೩೭೧ (೫೫೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮಗಳಿಗೆ ಶುದ್ಧ ನೀರು ಪೂರೈಸುವಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳ ಕರ್ತವ್ಯಗಳೇನು ;

(ಆ) ಸದರಿ ಅಧಿಕಾರಿಗಳು ಗ್ರಾಮ ಪಂಚಾಯತ್ತಿಗಳಿಗೆ ನಿಯಮಿತವಾಗಿ ಭೇಟಿ ನೀಡಿ ಗ್ರಾಮ ಪಂಚಾಯತಿಯ ಸಿಬ್ಬಂದಿಗಳಿಗೆ ಶುದ್ಧ ಕುಡಿಯುವ ನೀರಿನ ಪೂರೈಕೆಯ ಬಗ್ಗೆ ಸೂಕ್ತ ತರಬೇತಿ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಇ) ಜೂನ್–೨೦೨೪ರಲ್ಲಿ ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನಲ್ಲಿ ಕಲುಷಿತ ನೀರು ಸೇವಿಸಿ ಹಲವು ಗ್ರಾಮಸ್ಥರು ಅಸ್ವಸ್ತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದದ್ದಲ್ಲಿ, ಇಂತಹ ಘಟನೆ ಮರು ಕಳಿಸದಂತೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಗ್ರಾಮ ಪಂಚಾಯತಿ ವ್ಯಾಪ್ತಿಯ ನೀರು ಸಂಗ್ರಹಣ ಮತ್ತು ಪೂರೈಕೆಯ ಮಾರ್ಗಗಳನ್ನು ಪರಿಶೀಲಿಸಲು ಸರ್ಕಾರ ಆದೇಶಿಸುವುದೇ ;

(ಉ) ಗ್ರಾಮ ಪಂಚಾಯಿತಿಗೆ ಪ್ರತ್ಯೇಕ ತಾಂತ್ರಿಕ ಸಿಬ್ಬಂದಿಯಿಲ್ಲದ ಕಾರಣ ಗ್ರಾಮೀಣ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳನ್ನೇ ಕಲುಷಿತ ನೀರು ಪೂರೈಕೆಗೆ ಸಂಪೂರ್ಣ ಜವಾಬ್ದಾರರನ್ನಾಗಿ ಮಾಡಲಾಗುವುದೇ ?

# ಮಕ್ಕಳ ಮೇಲಿನ ದೌರ್ಜನ್ಯ ಹಾಗೂ ಬಾಲ್ಯ ವಿವಾಹ ಪ್ರಕರಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೨ (೩೧೯) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷದ ಅವಧಿಯಲ್ಲಿ ಎಷ್ಟು ಬಾಲ್ಯ ವಿವಾಹಗಳ ಪ್ರಕರಣಗಳು ನಡೆದಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ೧೮ ವರ್ಷದೊಳಗಿನ ಮಕ್ಕಳ ರಕ್ಷಣೆಗೆ ಇರುವ ಕಾನೂನುಗಳು ಯಾವುವು ;

(ಇ) ಮಕ್ಕಳ ಮೇಲೆ ಆಗುತ್ತಿರುವ ದೌರ್ಜನ್ಯ ಹಾಗೂ ಬಾಲ್ಯ ವಿವಾಹಗಳನ್ನು ತಡೆಗಟ್ಟಲು ಸರ್ಕಾರ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ; ಸದರಿ ಕಾರ್ಯಕ್ರಮಗಳು ಸಾರ್ವಜನಿಕರಿಗೆ ತಲುಪತ್ತಿದೆಯೇ ಎಂಬುದನ್ನು ಗಮನಿಸುತ್ತಿರುವ ಅಧಿಕಾರಿಗಳ ವಿವರ ನೀಡುವುದು ;

(ಈ) ಮಕ್ಕಳ ರಕ್ಷಣೆಗೆ ಇರುವಂತಹ ಕಾನೂನಿನ ಅರಿವನ್ನು ಪ್ರೌಢ ಶಿಕ್ಷಣದಿಂದಲೇ ಮಕ್ಕಳಿಗೆ ಪಾಠಗಳ ಮೂಲಕ ತಿಳಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಉ) ಪ್ರಸ್ತುತ ಇರುವ ಪೋಕ್ಸೊ ಕಾಯ್ದೆ, ಬಾಲ್ಯ ವಿವಾಹ ನಿಷೇಧ ಕಾಯ್ದೆಯಡಿಯಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ; ಇದರಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥವಾಗಿವೆ ; ಎಷ್ಟು ಪ್ರಕರಣಗಳು ಬಾಕಿ ಇದೆ ; ಇಂತಹ ಪ್ರಕರಣಗಳನ್ನು ತ್ವರಿತಗತಿಯಲ್ಲಿ ನಡೆಯುವಂತೆ ಮಾಡಲು ಸರ್ಕಾರ ಕ್ರಮವಹಿಸಿದೆಯೇ ; ಈ ಜವಾಬ್ದಾರಿಯನ್ನು ಯಾವ-ಯಾವ ಅಧಿಕಾರಿಗಳಿಗೆ ವಹಿಸಲಾಗಿದೆ ;

(ಊ) ಬಾಲ್ಯವಿವಾಹ ಮತ್ತು ದೌರ್ಜನ್ಯಗಳನ್ನು ತಡೆಯಲು ಹಾಗೂ ಕ್ರಮ ತೆಗೆದುಕೊಳ್ಳಲು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳನ್ನು ಒಳಗೊಂಡಂತೆ ಬೇರೆ ಬೇರೆ ಇಲಾಖೆಯ ಮುಖ್ಯಸ್ಥರನ್ನು ನೇಮಿಸಲಾಗಿದೆಯೇ ಹಾಗೂ ಅವರು ಕ್ರಮಕೈಗೊಳ್ಳಲು ಅವರಿಗೆ ಅಧಿಕಾರ ಇದೆಯೇ ?

## ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಸಂಗ್ರಹವಾಗಿರುವ ಸೆಸ್ ಹಣದ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೩ (೩೨೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿಯಲ್ಲಿ ಪ್ರಸ್ತುತ ಸಂಗ್ರಹವಾಗಿರುವ ಸೆಸ್ ಹಣವೆಷ್ಟು ;

(ಆ) ಕಳೆದ ಮೂರು ವರ್ಷದಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಧನ ಸಹಾಯದ ರೂಪದಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ;

(ಇ) ಬಡವರ್ಗದ ವಿದ್ಯಾರ್ಥಿನಿಯರ ಶೈಕ್ಷಣಿಕ ಧನಸಹಾಯಕ್ಕಾಗಿ ಕಳೆದ ೪ ವರ್ಷದಿಂದ ಎಷ್ಟು ಅರ್ಜಿಗಳು ಇಲಾಖೆಗೆ ಸ್ವೀಕೃತಗೊಂಡಿದೆ ; ಇದರಲ್ಲಿ, ಎಷ್ಟು ವಿದ್ಯಾರ್ಥಿಗಳಿಗೆ ಧನ ಸಹಾಯ ನೀಡಲಾಗಿದೆ ;

(ಈ) ಮಂಡಳಿಗೆ ಕಾರ್ಮಿಕರ ಶ್ರಮದಿಂದ ಸಂಗ್ರಹವಾಗಿರುವುದು ಹಾಗೂ ಪ್ರಸ್ತುತ ೮,೨೦೦ ರೂಪಾಯಿ ಉಳಿಕೆ ಇರುವುದು ನಿಜವೇ ; ಹಾಗಿದ್ದಲ್ಲಿ, ಸಕಾಲದಲ್ಲಿ ಶೈಕ್ಷಣಿಕ ಧನಸಹಾಯಕ ಹಣ ಬಿಡುಗಡೆ ಮಾಡದಿರಲು ಸರ್ಕಾರಕ್ಕೆ ಇರುವ ತೊಂದರೆಗಳೇನು ?

# ನಕಲಿ ಜಾತಿ ಪ್ರಮಾಣ ಪತ್ರವನ್ನು ನೀಡಿ ಉದ್ಯೋಗ ಪಡೆಯುತ್ತಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭೪ (೩೨೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಇಲಾಖೆ, ನಿಗಮ ಮಂಡಳಿ, ಪ್ರಾಧಿಕಾರ ಹಾಗೂ ಸಂಸ್ಕೃತ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ, ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಉದ್ಯೋಗ ಪಡೆಯುವ ಸಂದರ್ಭದಲ್ಲಿ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರಗಳನ್ನು ಪರಿಶೀಲಿಸುವ ಅಧಿಕಾರಿಗಳು ಯಾರು ; ರಾಜ್ಯದಲ್ಲಿ ಇದುವರೆಗೂ ನಕಲಿ ಜಾತಿ ಪ್ರಮಾಣ ಪತ್ರವನ್ನು ಪಡೆದು ಉದ್ಯೋಗವನ್ನು ಪಡೆದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ವಿವರ ಒದಗಿಸುವುದು)

(ಆ) ಪರಿಶಿಷ್ಟರೆಂದು ಮೇಲ್ವರ್ಗದ ಮಂದಿ ನಕಲು ದಾಖಲೆಗಳನ್ನು ಸೃಷ್ಟಿಸಿ ಕೆಳಸಮುದಾಯದ ಹುದ್ದೆಗಳನ್ನು ಪಡೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ನಕಲಿ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸಿ, ಉದ್ಯೋಗ ಪಡೆದಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; ಅಂತಹವರ ವಿರುದ್ಧ ಯಾವ ಕ್ರಮಕೈಗೊಳ್ಳಲಾಗಿದೆ ; ಇದುವರೆಗೂ ಅಂತಹ ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿದೆ ; ಅದರಲ್ಲಿ ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿದೆ ;

(ಈ) ಇಂತಹ ಪ್ರಕರಣಗಳನ್ನು ಇತ್ಯರ್ಥಪಡಿಸಲು ಇಂತಿಷ್ಟು ದಿನಗಳೆಂಬ ಕಾಲಮಿತಿಯನ್ನು ಸರ್ಕಾರ ಹಾಕಿಕೊಂಡಿದೆಯೇ ; (ಒಟ್ಟು ಜಿಲ್ಲಾವಾರು ಬಾಕಿ ಪ್ರಕರಣಗಳು, ಕ್ರಿಮಿನಲ್ ಮೊಕದ್ದಮೆ ಪ್ರಕರಣಗಳು ಹಾಗೂ ವಜಾಗೊಂಡ ನೌಕರರ ಸಂಪೂರ್ಣ ವಿವರಗಳ ಜಿಲ್ಲಾವಾರು ಮಾಹಿತಿ ನೀಡುವುದು)

( ಉ) ಪರಿಶಿಷ್ಟ ಜಾತಿ/ಪಂಗಡವೆಂದು ನಕಲು ಜಾತಿ ಪ್ರಮಾಣ ಪತ್ರ ಪಡೆದಿರುವ ಸಾಬೀತಾಗಿದ್ದರೂ ಸುಮಾರು ೨೦ ವರ್ಷಗಳಿಂದ ಹಲವಾರು ಪ್ರಕರಣವನ್ನು ವಿವಿಧ ಜಿಲ್ಲಾ ಜಾತಿ ಪರಿಶೀಲನಾ ಸಮಿತಿಗಳಲ್ಲೇ ಇತ್ಯರ್ಥಪಡಿಸದೇ ಬಾಕಿ ಉಳಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕೇಂದ್ರ ಪರಿಹಾರ ಕೇಂದ್ರ ಜಾಗವನ್ನು ಗುತ್ತಿಗೆ ನೀಡಿರುವ ಬಗ್ಗೆ

**ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೩೭೫ (೩೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಟ್ಟಿರುವ ಕೇಂದ್ರ ಪರಿಹಾರ ಕೇಂದ್ರ, ಸುಮ್ಮನಹಳ್ಳಿ, ಇದು ಒಟ್ಟು ಎಷ್ಟು ಎಕರೆ ಪ್ರದೇಶವನ್ನು ಹೊಂದಿದೆ ; ಈ ಜಾಗದಲ್ಲಿ ನಡೆಯುತ್ತಿರುವ ಚಟುವಟಿಕೆಗಳೇನು ; ಇರುವಂತಹ ಜಾಗದಲ್ಲಿ ಯಾವುದಾದರೂ ಸಂಘ ಸಂಸ್ಥೆ ಅಥವಾ ಎನ್‌ಜಿಓ ಗಳಿಗೆ ಇಂತಿಷ್ಟು ಅವಧಿಗೆಂದು ಜಮೀನನ್ನು ಗುತ್ತಿಗೆಗೆ ನೀಡಲಾಗಿದೆಯೇ ; ನೀಡಿದ್ದಲ್ಲಿ, ಇದರ ಒಟ್ಟು ವಿಸ್ತೀರ್ಣವೆಷ್ಟು ; ಈ ಸಂಸ್ಥೆಯ ಪೂರ್ಣ ವಿವರ ಹಾಗೂ ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು ;

(ಆ) ಗುತ್ತಿಗೆ ಪಡೆದುಕೊಂಡ ಸಂಸ್ಥೆಯವರು ಎಷ್ಟು ವಿಸ್ತೀರ್ಣ ಪ್ರದೇಶದಲ್ಲಿ ತಮ್ಮ ಕಾರ್ಯಚಟುವಟಿಕೆ ಮಾಡುತ್ತಿದ್ದಾರೆ ಹಾಗೂ ಅವುಗಳು ಯಾವುವು ; ಉಳಿದಂತಹ ಜಾಗದಲ್ಲಿ ನಡೆಯುತ್ತಿರುವ ಚಟುವಟಿಕೆಗಳೇನು ;

(ಇ) ಜಮೀನನ್ನು ಗುತ್ತಿಗೆ ನೀಡುವಾಗ ಸರ್ಕಾರ ವಿಧಿಸಿರುವ ನೀತಿ-ನಿಯಮಗಳನ್ನು ಪಾಲಿಸದೆ ಉಲ್ಲಂಘನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಸಂಸ್ಥೆಯ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ; ಇದರ ಜವಾಬ್ದಾರಿವಹಿಸಿಕೊಂಡಿರುವಂತಹ ಅಧಿಕಾರಿಗಳು ಯಾರು ; ಅಂತಹ ಅಧಿಕಾರಿಗಳ ಮೇಲೆ ಯಾವುದಾದರೂ ಶಿಸ್ತು ಕ್ರಮ ತೆಗೆದುಕೊಳ್ಳಲಾಗಿದೆಯೇ ;

(ಉ) ಸರ್ಕಾರದ ಜಮೀನನ್ನು ಸರ್ಕಾರದ ಕಾರ್ಯಚಟುವಟಿಕೆಗಳಿಗೆ ಉಪಯೋಗಿಸಿಕೊಳ್ಳುವುದನ್ನು ಬಿಟ್ಟು ಈ ರೀತಿ ಗುತ್ತಿಗೆ ನೀಡುವ ಅನಿವಾರ್ಯತೆಯ ಉದ್ದೇಶಗಳೇನು ?

## ವಿಶೇಷ ಚೇತನರಿಗೆ ಮೀಸಲಾತಿ ಹೆಚ್ಚಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೬ (೫೨೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರ ವಿಶೇಷ ಚೇತನರಿಗೆ ಸರ್ಕಾರಿ ಹುದ್ದೆಗಳಲ್ಲಿ ಇತ್ತೀಚೆಗೆ ಮೀಸಲಾತಿ ಹೆಚ್ಚಳ ಮಾಡಿ ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಪ್ರಮಾಣದಲ್ಲಿ ಮೀಸಲಾತಿ ಹೆಚ್ಚಳ ಮಾಡಲಾಗಿದೆ ;

(ಇ) ಕೇಂದ್ರ ಸರ್ಕಾರದ ಆದೇಶದಂತೆ ರಾಜ್ಯ ಸರ್ಕಾರ ಮೀಸಲಾತಿ ಹೆಚ್ಚಳ ಮಾಡದಿರಲು ಕಾರಣಗಳೇನು ;

(ಈ) ಯಾವ ಕಾಲಮಿತಿಯಲ್ಲಿ ಮೀಸಲಾತಿ ಹೆಚ್ಚಳ ಮಾಡಲಾಗುವುದು ?

## ರಾಜ್ಯದ MDRS, DBRARS, KRCRS, IGRS, ABVRS‡ವಸತಿ ಶಾಲೆಗಳ ಮೂಲಭೂತ ಸೌಕರ್ಯ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೭ (೫೨೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ **MDRS, DBRARS, KRCRS, IGRS, ABVRS** ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಖಾಲಿ ಇರುವ ವಸತಿ ಶಾಲೆಗಳಲ್ಲಿ ಎಷ್ಟು ಶಾಲೆಗಳಿಗೆ ಸ್ವಂತ ಕಟ್ಟಡಗಳಿವೆ; ಸ್ವಂತ ಕಟ್ಟಡವಿಲ್ಲದ ಶಾಲೆಗಳ ಸಂಖ್ಯೆ ಎಷ್ಟು ;

(ಇ) ಎಷ್ಟು ವಸತಿ ಶಾಲೆಗಳಲ್ಲಿ ಪ್ರಾಚಾರ್ಯರು, ಶಿಕ್ಷಕರು, ಮೇಲ್ವಿಚಾರಕರು, ಶುಶ್ರೂಕರ ಹುದ್ದೆಗಳು ಭರ್ತಿಯಾಗಿವೆ ; ಎಷ್ಟು ಹುದ್ದೆಗಳು ಖಾಲಿ ಇವೆ ;

(ಈ) ವಸತಿ ಶಾಲೆಗಳಲ್ಲಿ ಕಂಪ್ಯೂಟರ್ ಲ್ಯಾಬ್ ಮತ್ತು ಶಿಕ್ಷಕರಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ವಿದ್ಯಾರ್ಥಿಗಳು ಕಂಪ್ಯೂಟರ್ ಶಿಕ್ಷಣದಿಂದ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕಂಪ್ಯೂಟರ್ ಶಿಕ್ಷಣ ಯಾವಾಗ ಪ್ರಾರಂಭಿಸಲಾಗುವುದು ?

## ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಸ್ವತ್ತುಗಳನ್ನು ಪಂಚತಂತ್ರ ತಂತ್ರಾಂಶದಲ್ಲಿ ದಾಖಲಿಸುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೮ (೫೩೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರುವ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯುಯಲ್ ಸಮೀಕ್ಷೆ ತ್ವರಿತವಾಗಿ ಮಾಡಿ ಪಂಚತಂತ್ರ ೨.೦ ತಂತ್ರಾಂಶದಲ್ಲಿ ಅಳವಡಿಸಲು ಆದೇಶಿಸಲಾಗಿದೆಯೇ ;

(ಆ) ಸದರಿ ಆದೇಶದ ನಂತರ ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಪಂಚತಂತ್ರ ೨.೦ ತಂತ್ರಾಂಶದಲ್ಲಿ ಅಳವಡಿಸಲಾದ ಆಸ್ತಿಗಳ ಸಂಖ್ಯೆ ಎಷ್ಟು ;

(ಇ) ಬೆಂಗಳೂರು ನಗರ ಜಿಲ್ಲೆಯ ಹಲವು ಗ್ರಾಮ ಪಂಚಾಯಿತಿಗಳು ಹಸಿರು ಪಟ್ಟಿ ವಲಯದ ಕಾರಣ ನೀಡಿ ಹಲವು ವರ್ಷಗಳ ಹಿಂದೆ ಕಟ್ಟಡ/ನಿವೇಶನ ನಿರ್ಮಿಸಿದ ಸರ್ಕಾರದ ಬೀದಿ ದೀಪ, ರಸ್ತೆ,ಕುಡಿಯುವ ನೀರು ಇನ್ನಿತರ ಎಲ್ಲಾ ಸೌಲಭ್ಯ ಪಡೆಯುತ್ತಿದ್ದರೂ, ಪಂಚತಂತ್ರ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ಸೇರ್ಪಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ನಿವೇಶನ/ಕಟ್ಟಡಗಳನ್ನು ತೆರಿಗೆ ನಿರ್ಧರಣೆ ವ್ಯಾಪ್ತಿಗೆ ಸೇರ್ಪಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ವಿದೇಶಿ ವ್ಯಾಸಂಗ ವೇತನ ಸ್ಥಗಿತಗೊಳಿಸಿರುವ ಬಗ್ಗೆ

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೭೯(೫೩೧) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಆರ್ಥಿಕವಾಗಿ ಹಿಂದುಳಿದ ವರ್ಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕಾಗಿ ನೀಡಲಾಗುವ ವಿದೇಶಿ ವ್ಯಾಸಂಗ ವೇತನವನ್ನು ಕಳೆದ ೩ ವರ್ಷಗಳಿಂದ ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು ; (ವಿವರ ನೀಡುವುದು)

(ಆ) ಇದರಿಂದಾಗಿ ಕಳೆದ ೩ ವರ್ಷಗಳಿಂದ ಆರ್ಥಿಕವಾಗಿ ಹಿಂದುಳಿದಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಪ್ರಸಕ್ತ ಶೈಕ್ಷಣಿಕ ಸಾಲಿನಿಂದ ವಿದೇಶಿ ವ್ಯಾಸಂಗ ಮುಂದುವರೆಸಲು ಸರ್ಕಾರ ಕ್ರಮ ಕೈಗೊಳ್ಳವುದೇ ?

## ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯ ವಸತಿ ಶಾಲೆಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೮೦ (೫೫೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಇರುವ ಒಟ್ಟು ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಪ್ರಸ್ತುತ ವಸತಿ ಶಾಲೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಪ್ರತಿ ವಸತಿ ಶಾಲೆಗೆ ಎಷ್ಟು ವಿದ್ಯಾರ್ಥಿಗಳ ಪ್ರವೇಶಾತಿ ನಿಗಧಿಪಡಿಸಲಾಗಿದೆ ; ಪ್ರವೇಶಾತಿ ನಿಗಧಿಪಡಿಸಲು ಇರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಬೋಧಕ ಮತ್ತು ಬೋಧಕೇತರ ನೌಕರರ ಸಂಖ್ಯೆ ಎಷ್ಟು ; ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ;

(ಇ) ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು ; ಬಾಡಿಗೆ ಕಟ್ಟಡ ಹಾಗೂ ಇನ್ನಿತರ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳಿಗೆ ಸ್ವಂತ ಕಟ್ಟಡ ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಪರಿಹರಿಸಲಾಗುವುದು ; ಬಾಡಿಗೆ ಕಟ್ಟಡಗಳಲ್ಲಿ ಸರಿಯಾದ ಕಟ್ಟಡವಿಲ್ಲದ ಕಾರಣ ವಿದ್ಯಾರ್ಥಿಗಳು ಪರದಾಡುತ್ತಿರುವುದು ನಿಜವೇ; ನಿಜವಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ರಾಜ್ಯದಲ್ಲಿನ ಹಲವಾರು ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಮೂಲಭೂತ ಸೌಲಭ್ಯಗಳ ಕೊರತೆಯು ವಿದ್ಯಾರ್ಥಿಗಳ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಲು ತೊಡಕಾಗುವುದಿಲ್ಲವೆ ? ಈ ನಿಟ್ಟಿನಲ್ಲಿ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ? (ವಿವರ ನೀಡುವುದು)

## ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಯ ಸಂಘದಡಿಯಲ್ಲಿನ ನೌಕರರ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೩೮೧ (೫೫೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಇರುವ ಎಲ್ಲಾ ವಸತಿ ಶಾಲೆಗಳಲ್ಲಿ ೨೦೧೧ ರಿಂದ ಇಲ್ಲಿಯ ತನಕ ಮರಣ ಹೊಂದಿದ ಖಾಯಂ ಶಿಕ್ಷಕರ/ನೌಕರರ ಸಂಖ್ಯೆ ಎಷ್ಟು ; ಮರಣ ಹೊಂದಿದದವರ ಕುಟುಂಬಗಳಿಗೆ ಪರಿಹಾರ ನೀಡಲಾಗಿದೆಯೇ ; ನೀಡಿದ್ದಲ್ಲಿ ಈ ಕುರಿತು ಸಂಪುರ್ಣ ಮಾಹಿತಿ ನೀಡುವುದು ಹಾಗೂ ಪರಿಹಾರ ನೀಡದಿದ್ದಲ್ಲಿ, ಯಾವ ಕಾರಣಕ್ಕಾಗಿ ನೀಡಿರುವುದಿಲ್ಲ ; (ಮಾಹಿತಿ ನೀಡುವುದು)

(ಆ) ಮರಣ ಹೊಂದಿದ ಕುಟುಂಬಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡುಲಾಗಿದೆಯೇ ; ಇಲ್ಲಿಯವರೆಗೂ ಅನುಕಂಪದ ಆಧಾರದ ಮೇಲೆ ನೌಕರಿ ಪಡೆಯುಲು ಸಲ್ಲಿಕೆಯಾಗಿರುವ ಒಟ್ಟು ಅರ್ಜಿಗಳ ಸಂಖ್ಯೆ ಎಷ್ಟು ; ಸಲ್ಲಿಕೆಯಾದ ಅರ್ಜಿಗಳ ಪೈಕಿ ಬಾಕಿ ಉಳಿದಿರುವ ಅರ್ಜಿ/ಮನವಿ ಸಂಖ್ಯೆಗಳು ಎಷ್ಟು; ಯಾವ ಕಾರಣಕ್ಕಾಗಿ ಬಾಕಿ ಉಳಿದಿವೆ; ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಮಾಹಿತಿ ನೀಡುವುದು)

(ಇ) ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಸಂಸ್ಥೆಯು ರೂಪಿಸಿರುವ ನಿಯಮಾವಳಿಗಳೇನು ?

## ಕರ್ನಾಟಕ ರಾಜ್ಯ ವಸತಿ ಶಾಲೆಗಳಿಗೆ ಸಮವಸ್ತ್ರ, ಪಠ್ಯ ಪುಸ್ತಕ, ಶೂ ಇತ್ಯಾಧಿಗಳನ್ನು ಸರಬರಾಜು ಮಾಡುವ ಬಗ್ಗೆ

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೮೨ (೫೫೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿಯಲ್ಲಿ ಇರುವ ಎಲ್ಲಾ ವಸತಿ ಶಾಲೆಗಳಿಗೆ ಪ್ರಸಕ್ತ ಸಾಲಿನಲ್ಲಿ ಪಠ್ಯ ಪುಸ್ತಕಗಳನ್ನು ಯಾವಾಗ ತಲುಪಿಸಲಾಗಿದೆ ; (ಜಿಲ್ಲಾವಾರು ದಾಖಲಾತಿಗಳನ್ನೊಳಗೊಂಡ ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿನ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಸೋಪ್ ಕಿಟ್ ವಿತರಿಸಲಾಗಿದೆಯೇ ; ವಿತರಿಸಿದಲ್ಲಿ, ಯಾವಾಗ, ಎಷ್ಟು ಶಾಲೆಗಳಿಗೆ ವಿತರಿಸಲಾಗಿದೆ ; ವಸತಿ ಶಾಲೆಗಳಿಗೆ ಪೂರೈಸುವ ಸೋಪ್ ಕಿಟ್‌ಗೂ, ನೋಟ್ ಬುಕ್, ಸಮವಸ್ತ್ರ ಇತ್ಯಾಧಿಗಳನ್ನು ಹೇಗೆ ಸರಬರಾಜು ಮಾಡಲಾಗುತ್ತಿದೆ ; ಟೆಂಡರ್ ನೀಡಿ ಪೂರೈಸಲಾಗುತ್ತಿದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಒಂದು ವರ್ಷದಿಂದ ವಸತಿ ಶಾಲೆಗಳಲ್ಲಿರುವ ಬಡ ಮಕ್ಕಳಿಗೆ ಸೋಪ್ ಕಿಟ್ ವಿತರಣೆಯಾಗದಿರುವುದು ನಿಜವೇ ; ನಿಜವಿದ್ದಲ್ಲಿ, ಯಾವ ಕಾರಣಕ್ಕಾಗಿ ವಿತರಣೆ ಮಾಡಲಾಗಿಲ್ಲ; ಸದರಿ ಸೋಪ್ ಕಿಟ್‌ಗಾಗಿ ಮೀಸಲಿಟ್ಟ ಹಣವನ್ನು ಯಾವುದಕ್ಕಾಗಿ ಉಪಯೋಗಿಸಲಾಗಿದೆ ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು)

(ಈ) ಸರ್ಕಾರವು ನೀಡುತ್ತಿರುವ ಸೌಲಭ್ಯಗಳು ಸರಿಯಾಗಿ ಬಡ ಮಕ್ಕಳಿಗೆ ಸರಿಯಾದ ಸಮಯಕ್ಕೆ ದೊರಕುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ದೂರುಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಪ್ರತಿಯೊಂದು ವಿವರ ನೀಡುವುದು)

## ರಾಜ್ಯದ ಪುರಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಜ್ಯೂನಿಯರ್ ಪ್ರೋಗ್ರಾಮರ್‌ಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :-**

೩೮೩ (೫೫೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಪುರಸಭೆಗಳ ಸಂಖ್ಯೆ ಎಷ್ಟು ; ಇಲಾಖೆ ರಚಿಸಿರುವ ನೇಮಕಾತಿ ಮತ್ತು ವೃಂದಗಳು ಈ ಪುರಸಭೆಗಳಿಗೆ ಅನ್ವಯವಾಗುತ್ತದೆಯೇ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದ ಪುರಸಭೆಗಳಲ್ಲಿ ಹಲವಾರು ವರ್ಷಗಳಿಂದ ಮಾನ್ಯ ಜಿಲ್ಲಾಧಿಕಾರಿಗಳ ಮೂಲಕ ನೇಮಕಾತಿ ಮತ್ತು ವೃಂದಗಳನ್ವಯ ನೀಡಿರುವ ನಿಯಮದಂತೆ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಜ್ಯೂನಿಯರ್ ಪ್ರೋಗ್ರಾಮರ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಆದೇಶದ ಸಂಪೂರ್ಣ ವಿವರವನ್ನು ನೀಡುವುದು)

(ಇ) ಗ್ರಾಮ ಪಂಚಾಯಿತಿಯ ಠರಾವು ಮೂಲಕ ಆಯ್ಕೆಯಾಗಿ ಜಿಲ್ಲಾ ಪಂಚಾಯಿತಿಯಿಂದ ಅನುಮೋದನೆಗೊಂಡಿರುವ ಸಿಬ್ಬಂದಿಗಳನ್ನು

ತಮ್ಮ ಇಲಾಖೆಯಲ್ಲಿ ವಿಲೀನಗೊಳಿಸಿ ಖಾಯಂ ಸಿಬ್ಬಂದಿ ಸೌಲಭ್ಯಗಳನ್ನು ನೀಡಿರುವುದು ನಿಜವೇ ; (ಮಾಹಿತಿ ನೀಡುವುದು)

(ಈ) ವಿವಿಧ ಹಂತಗಳಲ್ಲಿ ಮಾನ್ಯ ಜಿಲ್ಲಾಧಿಕಾರಿಗಳು ಸ್ವರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಿಸಿರುವ ಜ್ಯೂನಿಯರ್ ಪ್ರೋಗ್ರಾಮರ್‌ಗಳನ್ನು ಖಾಯಂಗೊಳಿಸಲು ಸರ್ಕಾರಕ್ಕೆ ಇರುವ ಕಾನೂನಾತ್ಮಕ ಅಡೆ ತಡೆಗಳೇನು ; ಇವರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಖಾಯಂಗೊಳಿಸಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಿಸಿರುವ ಜ್ಯೂನಿಯರ್ ಪ್ರೋಗ್ರಾಮರ್‌ಗಳಿಗೆ ನೀಡಿರುವ ಸೇವಾ ಭದ್ರತೆ, ವಿಮೆ, ವೇತನ ಇತ್ಯಾಧಿ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ; ನೀಡಲಾಗುತ್ತಿದ್ದಲ್ಲಿ, ಯಾವ ಯಾವ ಸೌಲಭ್ಯವನ್ನು ನೀಡಲಾಗುತ್ತಿದೆ ? (ವಿವರ ನೀಡುವುದು)

## ಕೃಷಿ ಇಲಾಖೆಯಲ್ಲಿರುವ ಫಸಲ್ ಭೀಮಾ ವಿಮಾ ಯೋಜನೆ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೪ (೯೯೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಲ್ಲಿರುವ ಫಸಲ್ ಭೀಮಾ ವಿಮಾ ಯೋಜನೆಯಡಿ ಆಯ್ಕೆಗೊಂಡಿರುವ ಕಂಪನಿಗಳು ಎಷ್ಟು; ಯಾವ

ಮಾನದಂಡಗಳನ್ನು ಅನುಸರಿಸಿ ಆಯ್ಕೆ ಮಾಡಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ನೋಂದಾಯಿತವಾಗಿರುವ ರೈತರ ಸಂಖ್ಯೆ ಎಷ್ಟು; (ಕೊಪ್ಪಳ ಮತ್ತು ಬೀದರ್ ಜಿಲ್ಲೆಯ ತಾಲ್ಲೂಕುವಾರು ರೈತರ ಹೆಸರು, ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ನೋಂದಾಯಿತ ರೈತರ ಬೆಳೆ ಹಾನಿಯಾಗಿದ್ದಲ್ಲಿ ಅವರಿಗೆ ಪಾವತಿಸುವ ವಿಮೆ ಮೊತ್ತ ಎಷ್ಟು; (ಕೊಪ್ಪಳ ಮತ್ತು ಬೀದರ್ ಜಿಲ್ಲೆಯ ತಾಲ್ಲೂಕುವಾರು ವಿವರ ಪಡೆದವರ ವಿವರ ನೀಡುವುದು)

(ಈ) ನೋಂದಾಯಿತ ರೈತರ ಪೈಕಿ ಎಷ್ಟು ರೈತರ ಬೆಳೆ ಹಾನಿಯಾಗಿದೆ; (ಕೊಪ್ಪಳ ಮತ್ತು ಬೀದರ್ ಜಿಲ್ಲೆಯ ತಾಲ್ಲೂಕುವಾರು ರೈತರ ಜೊತೆ ಬೆಳೆವಾರು ವಿವರ ಪಡೆದವರ ವಿವರ ನೀಡುವುದು)

(ಉ) ಈ ಯೋಜನೆಯಡಿ ರೈತರಿಂದ ಸರ್ಕಾರಕ್ಕೆ ಜಮೆ ಆಗಿರುವ ಮೊತ್ತ ಎಷ್ಟು; ರೈತರಿಗೆ ಪಾವತಿಸಿದ ವಿಮೆ ಮೊತ್ತ ಎಷ್ಟು? (ಕೊಪ್ಪಳ ಮತ್ತು ಬೀದರ್ ಜಿಲ್ಲೆ, ತಾಲ್ಲೂಕುವಾರು ವಿವರ ನೀಡುವುದು)

## ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೮೫ (೫೦೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮಂಜೂರಾಗಿರುವ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ ನಿಲಯಗಳೆಷ್ಟು; (ಜಿಲ್ಲಾವಾರು ವಿದ್ಯಾರ್ಥಿಗಳ ಮಂಜೂರಾತಿ ಬಲದೊಂದಿಗೆ ವಿವರ ನೀಡುವುದು)

(ಆ) ಸದರಿ ವಸತಿ ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗಿದೆ; ಪ್ರಸ್ತುತ ಸ್ವಂತ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ ಅಥವಾ ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ ಬಾಡಿಗೆ ಕಟ್ಟಡದಲ್ಲಿ ನಿವೇಶನದಲ್ಲಿ ಇದ್ದರೆ ಕಟ್ಟಡದ ವಿಸ್ತೀರ್ಣ, ಮಹಡಿಗಳು, ಬಾಡಿಗೆ ಹಾಗೂ ಕಟ್ಟಡ ಮಾಲೀಕರ ವಿವರ ನೀಡುವುದು ;

(ಇ) ವಸತಿ ನಿಲಯಗಳು ಪ್ರಾರಂಭವಾಗಿ ಹಲವು ವರ್ಷಗಳು ಗತಿಸಿದರೂ ಸ್ವಂತ ಕಟ್ಟಡಗಳು ನಿರ್ಮಿಸದಿರಲು ಕಾರಣವೇನು; ಇದರಿಂದ ಮೂಲಭೂತ ಸೌಕರ್ಯಗಳಿಲ್ಲದೇ ವಿದ್ಯಾರ್ಥಿಗಳು ಪರಿತಪಿಸುವಂತಾಗುವುದಿಲ್ಲವೇ; ಸದರಿ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಯಾವಾಗ ಕಟ್ಟಿಸಲಾಗುವುದು ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ನಂತರದ ವಸತಿ ನಿಲಯ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೬ (೫೦೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಂಜೂರಾಗಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಸತಿ

ನಿಲಯಗಳೆಷ್ಟು ; (ಜಿಲ್ಲಾವಾರು ವಿದ್ಯಾರ್ಥಿಗಳ ಮಂಜೂರಾತಿ ವಿವರ ನೀಡುವುದು)

(ಆ) ಸದರಿ ವಸತಿ ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗಿದೆ ; ಪ್ರಸ್ತುತ ಸ್ವಂತ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ ಅಥವಾ ಬಾಡಿಗೆ ಕಟ್ಟಡದಲ್ಲಿ ನಡೆಸಲಾಗುತ್ತಿದೆಯೇ ; ಬಾಡಿಗೆ ಕಟ್ಟಡದಲ್ಲಿ ಅಥವಾ ನಿವೇಶನದಲ್ಲಿ ಇದ್ದರೆ ಕಟ್ಟಡದ ವಿಸ್ತೀರ್ಣ, ಮಹಡಿಗಳು, ಬಾಡಿಗೆ ಹಾಗೂ ಕಟ್ಟಡ ಮಾಲೀಕರ ವಿವರ ನೀಡುವುದು ;

(ಇ) ವಸತಿ ನಿಲಯಗಳು ಪ್ರಾರಂಭವಾಗಿ ಹಲವು ವರ್ಷಗಳು ಗತಿಸಿದರೂ ಸ್ವಂತ ಕಟ್ಟಡ ಕಟ್ಟದಿರಲು ಕಾರಣವೇನು : ಇದರಿಂದ ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆಗೊಳಗಾಗುವುದಿಲ್ಲವೇ ; ಸದರಿ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಯಾವಾಗ ನಿರ್ಮಿಸಲಾಗುವುದು ; (ವಿವರ ನೀಡುವುದು)

(ಈ) ವಸತಿ ನಿಲಯಗಳ ನಿರ್ಮಾಣಕ್ಕೆ ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ, ಖಾಸಗಿ ಜಮೀನು ಖರೀದಿ ಮಾಡಲು ಅವಕಾಶವಿದೆಯೇ ; ಹಾಗಿದ್ದಲ್ಲಿ, ಸರ್ಕಾರಿ ಜಮೀನು ಲಭ್ಯವಿಲ್ಲದಿದ್ದಲ್ಲಿ ಖಾಸಗಿ ಜಮೀನು ಖರೀದಿಸಿ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಇರುವ ತೊಂದರೆ ಏನು ; ನಗರ ಪ್ರದೇಶಗಳಲ್ಲಿ ಸರ್ಕಾರಿ ವಸತಿ ನಿಲಯಗಳ ಕಟ್ಟಡ ನಿರ್ಮಾಣ ಮಾಡಲು ಲೇಔಟ್‌ಗಳಲ್ಲಿ ಲಭ್ಯವಿರುವ ಸಿ.ಎ. (ನಾಗರೀಕ ಸೌಲಭ್ಯ) ನಿವೇಶನವನ್ನು ಉಚಿತವಾಗಿ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ; ವಸತಿ ನಿಲಯಗಳು/ಶಾಲಾ/ಕಾಲೇಜುಗಳನ್ನು ನಿರ್ಮಾಣ ಮಾಡಲು ಉಚಿತವಾಗಿ ಸಿ.ಎ. (ನಾಗರೀಕ ಸೌಲಭ್ಯ) ನಿವೇಶನವನ್ನು ನೀಡುವಂತೆ ನಿಯಮಗಳಿಗೆ ತಿದ್ದುಪಡಿ ತಂದು ನೀಡಬಹುದಲ್ಲವೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಯಲ್ಲಿರುವ ಶುದ್ಧ ನೀರಿನ ಘಟಕಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೭ (೪೯೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಗಳಲ್ಲಿ ಮಂಜೂರಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಆ) ಇವುಗಳಲ್ಲಿ ಚಾಲ್ತಿಯಲ್ಲಿರುವ ಮತ್ತು ಸ್ಥಗಿತಗೊಂಡಿರುವ ಶುದ್ಧ ನೀರಿನ ಘಟಕಗಳ ಸಂಖ್ಯೆ ಎಷ್ಟು; (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

(ಇ) ಈ ಶುದ್ಧ ನೀರಿನ ಘಟಕಗಳನ್ನು ನಿರ್ವಹಣೆ ಮಾಡುವ ಇಲಾಖೆ ಅಥವಾ ಸಂಸ್ಥೆ ಯಾವುದು ; ಇವುಗಳನ್ನು ಸರಿಯಾಗಿ ನಿರ್ವಹಣೆ ಮಾಡದೇ ಸ್ಥಗಿತಗೊಂಡಿದ್ದರು ಸರ್ಕಾರವು ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲವೆಂಬ ಗಂಭೀರ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರವು ತೆಗೆದುಕೊಂಡ ಕಠಿಣ ಕ್ರಮಗಳೇನು ? (ವಿವರ ನೀಡುವುದು)

## ಬೀಡಿ ಕಾರ್ಮಿಕರ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೮ (೪೩೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಬೀಡಿ ಕಾರ್ಮಿಕರ ಸಂಖ್ಯೆ ಎಷ್ಟು; ಯಾವ ಯಾವ ಜಿಲ್ಲೆಗಳಲ್ಲಿ ಬೀಡಿ ಕಾರ್ಮಿಕರು ಇದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಬೀಡಿ ಕಾರ್ಮಿಕರ ಸ್ಥಿತಿಗತಿಯನ್ನು ತಿಳಿಯಲು ಹಾಗೂ ಅವರ ಮಕ್ಕಳಿಗೆ ಶಿಕ್ಷಣ ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಬೀಡಿ ಕಾರ್ಮಿಕರು ನಶಿಸಿ ಹೋಗುವ ಹಂತದಲ್ಲಿದ್ದು, ಈ ಕಾರ್ಮಿಕರಿಗೆ ಪುನರ್ ಉದ್ಯೋಗ ಕಲ್ಪಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; (ವಿವರ ನೀಡುವುದು)

(ಈ) ಬೀಡಿ ಉದ್ದಿಮೆಯು ಗುಡಿ ಕೈಗಾರಿಕೆ ಉದ್ದಿಮೆಯಾಗಿದ್ದು, ಬೀಡಿ ಕಟ್ಟುವುದರಿಂದ ಉಂಟಾಗುವ ರೋಗಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕೊಂಕಣಿ ಸಾಹಿತ್ಯ ಅಕಾಡೆಮಿ ಕಾಮಗಾರಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೮೯ (೪೩೭) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ಕಾಮಗಾರಿಯು ಯಾವಾಗ ಪೂರ್ಣಗೊಳ್ಳುವುದು ; ಈ ಕಾಮಗಾರಿಯು ಅನುದಾನದ ಕೊರತೆಯಿಂದ ಪೂರ್ಣಗೊಂಡಿಲ್ಲವೆಂದು ತಿಳಿದುಬಂದಿದ್ದು ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಶಾಲೆಗಳಲ್ಲಿ ಕೊಂಕಣಿ ಭಾಷೆಯನ್ನು ಕಲಿಸಲು ಸರ್ಕಾರ ಕೈಗೊಂಡ ಕ್ರಮವೇನು ; ಪಿ.ಯು.ಸಿ ಹಂತದಲ್ಲಿ ಕೊಂಕಣಿ ಭಾಷೆಯನ್ನು ಕಲಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ; (ವಿವರ ನೀಡುವುದು)

(ಇ) ಕೊಂಕಣಿ ಸಾಹಿತ್ಯ ಅಕಾಡೆಮಿಯಿಂದ ಕಾರ್ಯ ಚಟುವಟಿಕೆಗಳಿಗೆ ನೀಡುವ ಅನುದಾನವನ್ನು ಪ್ರತಿ ವರ್ಷ ರೂ.೩.ಕೋಟಿ ಏರಿಸಲು ಮುಂದಿನ ಬಜೆಟ್‌ಗಳಲ್ಲಿ ಘೋಷಿಸಲು ಕ್ರಮ ಕೈಗೊಳ್ಳುವುದೇ ;

(ಈ) ಕೊಂಕಣಿ ಭಾಷೆಯ ಅಭಿವೃದ್ಧಿ ಮತ್ತು ಸಾಹಿತ್ಯಗಳಿಗೆ ಪ್ರೋತ್ಸಾಹ ನೀಡಲು ಸರ್ಕಾರದ ಇಲಾಖೆಯು ಮುಂದಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಉ) ಸಾಹಿತ್ಯ ಅಕಾಡೆಮಿಗಳ ಅಧ್ಯಕ್ಷರುಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಪ್ರವಾಸ ಕೈಗೊಳ್ಳುವ ಮತ್ತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸರ್ಕಾರಿ ವಾಹನದ ವ್ಯವಸ್ಥೆ ಮಾಡಲು ಇಲಾಖೆ ಕ್ರಮ ಕೈಗೊಳ್ಳಲಿದೆಯೇ ; ಪ್ರಸ್ತುತ ವ್ಯವಸ್ಥೆಯೇನು ? (ವಿವರ ನೀಡುವುದು)

## ಗೃಹಲಕ್ಷ್ಮೀ ಯೋಜನೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೯೦ (೪೩೭೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗೃಹಲಕ್ಷ್ಮೀ ಯೋಜನೆ ಅನ್ವಯ ರಾಜ್ಯದಲ್ಲಿ ಎಷ್ಟು ಕುಟುಂಬಗಳಿಗೆ ರೂ.೨೦೦೦/-ದಂತೆ ವಿತರಿಸಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಗೃಹಲಕ್ಷ್ಮೀ ಯೋಜನೆಯನ್ನು ನಿರಾಕರಿಸಲು ಇರುವ ಮಾನದಂಡಗಳೇನು ; ಯಾವ ಕಾರಣಕ್ಕಾಗಿ ಜನರಿಗೆ ಗೃಹಲಕ್ಷ್ಮೀ ಯೋಜನೆಯನ್ನು ನಿರಾಕರಿಸಲಾಗಿದೆ ; (ವಿವರ ನೀಡುವುದು)

(ಇ) ಗೃಹಲಕ್ಷ್ಮೀ ಯೋಜನೆಯ ಫಲಾನುಭವಿಗಳಿಗೆ ಮಾಹಿತಿ ನೀಡಲು ಸ್ಥಳೀಯವಾಗಿ ಕಛೇರಿಗಳನ್ನು ತೆರೆಯಲಾಗಿದೆಯೇ ? (ವಿವರ ನೀಡುವುದು)

## ಮಲೆನಾಡು ಅಭಿವೃದ್ಧಿಯ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೯೧ (೪೩೯) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ರಲ್ಲಿ ಮಲೆನಾಡು ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು; ಅನುದಾನವನ್ನು ಯಾವ ಮಾನದಂಡದ ಮೇಲೆ ವಿತರಿಸಲಾಗಿದೆ ; (ವಿವರ ನೀಡುವುದು)

(ಆ) ವಿಧಾನ ಪರಿಷತ್ ಶಾಸಕರಿಗೆ ಅನುದಾನ ನೀಡಲಾಗಿದೆಯೇ ; (ವಿವರ ನೀಡುವುದು)

(ಇ) ೨೦೨೦ ರಿಂದ ೨೦೨೪ರವರೆಗೆ ಕೈಗೊಂಡ ಕಾಮಗಾರಿಗಳಾವುವು ಹಾಗೂ ಪೂರ್ಣಗೊಂಡ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಈ) ಬಯಲುಸೀಮೆ ಮಂಡಳಿಯ ೨೦೨೩ರಲ್ಲಿ ನಡೆದ ಅನುದಾನದ ಹಂಚಿಕೆಯಲ್ಲಿ ಉಂಟಾದ ಅವ್ಯವಹಾರದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು ; ಈ ಬಗ್ಗೆ ತನಿಖೆ ನಡೆಸಲಾಗಿದೆಯೇ ? (ವಿವರ ನೀಡುವುದು)

## "ಓಬವ್ವ ಆತ್ಮರಕ್ಷಣೆ ಕಲೆ" ಯೋಜನೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೯೨ (೫೨೦) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಹೆಣ್ಣು ಮಕ್ಕಳ ಆತ್ಮರಕ್ಷಣೆಗಾಗಿ ಜಾರಿಗೆ ಬಂದ "ಓಬವ್ವ ಆತ್ಮರಕ್ಷಣೆ ಕಲೆ" ಯೋಜನೆ ಪ್ರಸ್ತುತ ಯಾವ ಹಂತದಲ್ಲಿ ಇದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಹೆಣ್ಣು ಮಕ್ಕಳ ಆತ್ಮರಕ್ಷಣೆ ಅತಿ ಮುಖ್ಯವಾಗಿದ್ದು, ಈ ಯೋಜನೆಗೆ ಸರ್ಕಾರ ಇಲ್ಲಿಯವರೆಗೆ ಮೀಸಲಿಟ್ಟ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಇಲ್ಲಿಯವರಿಗೆ ರಾಜ್ಯದ ಎಷ್ಟು ವಿದ್ಯಾರ್ಥಿನಿಲಯಗಳಲ್ಲಿ ಈ ಯೋಜನೆಯಿಂದ ವಿದ್ಯಾರ್ಥಿನಿಯರು ತರಬೇತಿ ಪಡೆದಿದ್ದಾರೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ವಿದ್ಯಾರ್ಥಿನಿಲಯಗಳಲ್ಲಿ ವಿದ್ಯಾರ್ಥಿನಿಯರ ರಕ್ಷಣೆಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲುಷಿತ ನೀರಿನ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :-**

೩೯೩ (೫೧೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಲುಷಿತ ನೀರು ಕುಡಿದು ಸಾವಿಗೀಡಾಗುವವರ ಸಂಖ್ಯೆ ಏರಿಕೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಲುಷಿತ ನೀರು ಸೇವನೆಯಿಂದ ಸಾವಿಗೀಡಾದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಲುಷಿತ ನೀರು ಸೇವನೆಯಿಂದ ಮೃತರಾದ ಕುಟುಂಬಗಳಿಗೆ ಸರ್ಕಾರ ಪರಿಹಾರ ನೀಡಿದಿಯೇ ; ನೀಡಿದ್ದಲ್ಲಿ, ಪ್ರಕರಣವಾರು ಸಂಪೂರ್ಣ ವಿವರವನ್ನು ಒದಗಿಸುವುದು ;

(ಈ) ಕಲುಷಿತ ನೀರು ಸರಬರಾಜು ಆಗಲು ಕಾರಣ ಕರ್ತರಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಉ) ಜನರಿಗೆ ಶುದ್ಧ ನೀರು ಒದಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ಒದಗಿಸುವುದು)

## ಕೃಷಿ ಸಮೀಕ್ಷೆಯ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೯೪ (೪೪೪೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕೃಷಿ ಸಮೀಕ್ಷೆ ನಡೆಸಲಾಗಿದೆಯೇ ;ಇಲ್ಲವಾದಲ್ಲಿ,ಕೃಷಿ ಸಮೀಕ್ಷೆ ನಡೆಸಲು ಯಾವ ಕ್ರಮ ಕೈಗೊಳ್ಳಲಾಗಿದೆ ; ಕೃಷಿ ನೀತಿ ಕುರಿತು ಸರ್ಕಾರದ ನಿಲುವೇನು ;

(ಆ) ರಾಜ್ಯದ ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿ ದಾಖಲು ಮಾಡದಿರಲು ಕಾರಣಗಳೇನು ; ರಾಜ್ಯ ಕೃಷಿ ವ್ಯವಸ್ಥೆಯನ್ನು

ತಿಳಿಯಲು ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿ ನಮೂದು ಮಾಡುವುದು ಕಡ್ಡಾಯಗೊಳಿಸಲಾಗಿದೆಯೇ ; ರೈತರ ಪಹಣಿಗಳಲ್ಲಿ ಕೃಷಿ ಮಾಹಿತಿ ನಮೂದು ಮಾಡದಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ರೈತರ ಪಹಣಿಗಳಲ್ಲಿ ಬೆಳೆ ಮಾಹಿತಿಯನ್ನು ನಮೂದು ಮಾಡಲಾಗಿದೆ ; ರಾಜ್ಯದ ರೈತರು ಎಷ್ಟು ಎಕರೆ ಪ್ರದೇಶಗಳಲ್ಲಿ ಯಾವ ಬೆಳೆ ಬೆಳೆದಿರುತ್ತಾರೆ ; ತಂತ್ರಾಂಶದಲ್ಲಿ ರೈತರ ಬೆಳೆಯ ಕುರಿತು ಪಹಣಿಗಳಲ್ಲಿ ದಾಖಲೆಗಳನ್ನು ನಮೂದು ಮಾಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರೈತರ ಜಮೀನುಗಳಿಗೆ ಭೇಟಿ ನೀಡದೆ ಕಛೇರಿಯಲ್ಲೆ ಕುಳಿತು ಗ್ರಾಮ ಲೆಕ್ಕಾಧಿಕಾರಿಗಳು ಬೆಳೆ ಹಾನಿ ಕುರಿತು ಸರ್ಕಾರಕ್ಕೆ ವರದಿ ಸಲ್ಲಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಕಛೇರಿಯಲ್ಲಿಯೇ ಕುಳಿತು ಬೆಳೆ ಹಾನಿ ವರದಿ ಸಲ್ಲಿಸುವ ಇಂತಹ ಗ್ರಾಮ ಲೆಕ್ಕಾಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಪಿ.ಎಂ ಎಫ್ ಎಂ ಇ ಯೋಜನೆ ಫಲಾನುಭವಿಗಳಿಗೆ ಸಹಾಯಧನ ಪಾವತಿಸದಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೫ (೪೫೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಧಾನ ಮಂತ್ರಿಗಳ ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಔಪಚಾರೀಕರಣ (ಪಿ.ಎಂ ಎಫ್ ಎಂ ಇ) ಯೋಜನೆಯ ಉದ್ದೇಶವೇನು ; ಫಲಾನುಭವಿಗಳಿಗೆ ಶೇಕಡ ಎಷ್ಟು ಸಹಾಯಧನ ದೊರೆಯಲಿದೆ ; ಇದರಲ್ಲಿ, ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಪಾಲು ಎಷ್ಟು ;

(ಆ) ಈ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ;

(ಇ) ಸದರಿ ಯೋಜನೆಯಡಿ ೨೦೨೦–೨೧ ರಿಂದ ೨೦೨೪–೨೫ನೇ ಸಾಲಿನವರೆಗೆ ಎಷ್ಟು ಮಂದಿ ಫಲಾನುಭವಿಗಳು ಆಯ್ಕೆಯಾಗಿದ್ದಾರೆ ; ಫಲಾನುಭವಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬಿಡುಗಡೆ ಮಾಡಿರುವ ಹಾಗೂ ಬಿಡುಗಡೆ ಮಾಡಲು ಬಾಕಿ ಇರುವ ಸಹಾಯಧನ ಮೊತ್ತ ಎಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಈ) ರಾಜ್ಯ ಸರ್ಕಾರ ಸಹಾಯಧನ ಬಿಡುಗಡೆ ಮಾಡದಿರುವುದರಿಂದ ಫಲಾನುಭವಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದಲ್ಲಿ, ಸಹಾಯಧನದ ಮೊತ್ತವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ; ಸಹಾಯಧನ ಬಿಡುಗಡೆ ಮಾಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಮಂಡ್ಯ ಪಿಆರ್‌ಇಡಿ ಕಛೇರಿ ಹಣ ದುರಪಯೋಗ ಪ್ರಕರಣ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೬ (೪೫೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ಕಛೇರಿಂಯುಲ್ಲಿ ವಿವಿಧ ಬ್ಯಾಂಕ್ ಖಾತೆಗಳಲ್ಲಿ ಹಣ ದುರಪಯೋಗವಾಗಿರುವ ಪ್ರಕರಣ ಪ್ರಸ್ತುತ ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಇಲಾಖಾ ವಿಚಾರಣೆ ಕೈಗೊಂಡು, ವಿಚಾರಣಾ ವರದಿಯನ್ನು ಎಷ್ಟು ತಿಂಗಳೊಳಗೆ ಸಲ್ಲಿಸಬೇಕಿರುತ್ತದೆ ಸದರಿ ಪ್ರಕರಣದಲ್ಲಿ ಇಲಾಖಾ ವಿಚಾರಣೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಇಲಾಖಾ ವಿಚಾರಣೆಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ಸಂಪೂರ್ಣ ವಿವರ ನೀಡುವುದು)

(ಇ) ಇಲಾಖಾ ವಿಚಾರಣೆಯನ್ನು ಯಾವ ಯಾವ ದಿನಾಂಕಗಳಂದು ನಡೆಸಲಾಗಿರುತ್ತದೆ ಹಾಗೂ ವಿಚಾರಣೆಗೆ ಕರೆದು ಮುಂದೂಡಿದ ದಿನಾಂಕಗಳು ಯಾವುವು ; ಇದಕ್ಕೆ ಕಾರಣಗಳೇನು ; (ದಿನಾಂಕ, ಹಾಜರಾದವರು ಮತ್ತು ಗೈರುಹಾಜರಾದವರ ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಪ್ರಕರಣದಲ್ಲಿ ಆರೋಪಿತ ಅಧಿಕಾರಿ/ನೌಕರರ ಪೈಕಿ ಎಷ್ಟು ಮಂದಿ ಮೃತಪಟ್ಟಿದ್ದಾರೆ ; ಮೃತಪಟ್ಟ ಪ್ರಕರಣಗಳಲ್ಲಿ ಯಾವ

ರೀತಿ ಪ್ರಕರಣವನ್ನು ಇತ್ಯರ್ಥಪಡಿಸಲಾಗುತ್ತದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ದುರುಪಯೋಗವಾದ ಹಣವನ್ನು ಬ್ಯಾಂಕ್‌ಗಳಿಂದ ಹಿಂಪಡೆಯುವ ಸಂಬಂಧ ಗ್ರಾಹಕರ ಪರಿಹಾರ ಆಯೋಗ, ಬೆಂಗಳೂರು ಇಲ್ಲಿ ಯಾವ ಯಾವ ಬ್ಯಾಂಕ್‌ಗಳ ವಿರುದ್ಧ ಎಷ್ಟು ಮೊತ್ತಕ್ಕೆ ದೂರು ದಾಖಲಿಸಲಾಗಿದೆ ; (ಬ್ಯಾಂಕ್‌ವಾರು ವಿವರ ನೀಡುವುದು)

(ಊ) ಸದರಿ ಪ್ರಕರಣ (ವ್ಯಾಜ್ಯ)ದ ಸಲುವಾಗಿ ವಕೀಲರನ್ನು ನೇಮಕ ಮಾಡಿಕೊಳ್ಳಲಾಗಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ವಿವರ ಹಾಗೂ ಅವರಿಗೆ ಈವರೆವಿಗೂ ಪಾವತಿಸಿರುವ ಶುಲ್ಕದ ಮೊತ್ತ ಎಷ್ಟು? (ಸಂಪೂರ್ಣ ಮಾಹಿತಿ ನೀಡುವುದು)

## ಜೆ.ಜೆ.ಎಂ. ಯೋಜನೆ ಕಾಲಾವಧಿ ವಿಸ್ತರಿಸುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೭ (೪೫೫) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಲ ಜೀವನ್ ಮಿಷನ್ (ಜೆಜೆಎಂ) ಯೋಜನೆಗೆ ಇರುವ ಕಾಲಾವಧಿ ಎಷ್ಟು ; ಯೋಜನೆಯ ಕಾಲಾವಧಿ ವಿಸ್ತರಿಸುವ ಬಗ್ಗೆ ಕೇಂದ್ರ ಸರ್ಕಾರದಿಂದ ಆದೇಶ/ಸೂಚನೆ ಬಂದಿದೆಯೇ; ಬಂದಿದ್ದಲ್ಲಿ, ಎಷ್ಟು ವರ್ಷಗಳ ಅವಧಿಗೆ ಯೋಜನೆ ವಿಸ್ತರಿಸಲಾಗುವುದು ;

(ಆ) ಜೆಜೆಎಂ ಯೋಜನೆಯಡಿ ಈವರೆಗೆ ತೆಗೆದುಕೊಂಡಿರುವ, ಪ್ರಗತಿಯಲ್ಲಿರುವ, ಪೂರ್ಣಗೊಂಡ ಮತ್ತು ಪೂರ್ಣಗೊಂಡು ಗ್ರಾಮ ಪಂಚಾಯತಿಗಳಿಗೆ ಹಸ್ತಾಂತರವಾಗಿರುವ ಕಾಮಗಾರಿಗಳು ಎಷ್ಟು ಹಾಗೂ ಈ ಯೋಜನೆಗೆ ಇದುವರೆವಿಗೂ ಭರಿಸಿರುವ ಆರ್ಥಿಕ ವೆಚ್ಚ ಎಷ್ಟು ; (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಇ) ಯೋಜನೆಯಡಿ ಪೂರ್ಣಗೊಂಡು ಹಸ್ತಾಂತರವಾಗಿರುವ ಕಾಮಗಾರಿಗಳನ್ನು ಬಹುತೇಕ ಗ್ರಾಮ ಪಂಚಾಯತ್‌ಗಳು ನಿರ್ವಹಿಸುವಲ್ಲಿ ವಿಫಲವಾಗುತ್ತಿರುವುದು ಹಾಗೂ ನಿರ್ವಹಣೆ ಪರಿಣಿತಿ ಇಲ್ಲದಿರುವುದರಿಂದ ಪೂರ್ಣಗೊಂಡ ಯೋಜನೆಗಳನ್ನು ಹಸ್ತಾಂತರ ಮಾಡಿಕೊಳ್ಳಲು ಗ್ರಾಮ ಪಂಚಾಯತಿಗಳು ಹಿಂಜರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯೋಜನೆಯ ಸಮರ್ಪಕ ನಿರ್ವಹಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಜೆಜೆಎಂ ಯೋಜನೆಯಡಿ ಅಳವಡಿಸಲಾಗುತ್ತಿರುವ ನೀರು ಪೈಪ್ ಲೈನ್ ರಿಪೇರಿ, ಕುಡಿಯುವ ನೀರಿನ ಮೂಲಗಳ ಸ್ವಚ್ಛತೆ ಸೇರಿದಂತೆ ಇನ್ನಿತರೆ ವಿಷಯಗಳಲ್ಲಿ ನೀರುಗಂಟಿಗಳಿಗೆ ಸೂಕ್ತ ತರಬೇತಿ ನೀಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮವೇನು ?

## ಗ್ರಾಮ ಪಂಚಾಯಿತಿ SDAA ಗಳಿಗೆ ಪದೋನ್ನತಿ ನೀಡುವ ಕುರಿತು

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೮ (೪೫೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ೨೫೭೬ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳು ಮಂಜೂರಾಗಿ ಆ ವೃಂದದಲ್ಲಿ ನೌಕರರು ಕರ್ತವ್ಯ ನಿರ್ವಹಿಸುತ್ತಿರುವುದರಿಂದ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳಲ್ಲಿ ಮಂಜೂರಾಗಿರುವ ಪ್ರಥಮ ದರ್ಜೆ ಲೆಕ್ಕ ಸಹಾಯಕ ಮತ್ತು ಲೆಕ್ಕಾಧೀಕ್ಷಕರ ಹುದ್ದೆಗಳನ್ನು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ವೃಂದದಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ಕರ್ನಾಟಕ ರಾಜ್ಯ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ ವೃಂದ ಮತ್ತು ನೇಮಕಾತಿ) ನಿಯಮಗಳು, ೨೦೨೦ಕ್ಕೆ ತಿದ್ದುಪಡಿ ತರಲು ಕ್ರಮವಹಿಸುವಂತೆ ದಿನಾಂಕ:೧೯.೦೮.೨೦೨೨ ರಂದು ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಜರುಗಿದ ಸಭಾ ನಡವಳಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮಗಳೇನು ; (ವಿವರಗಳನ್ನು ಒದಗಿಸುವುದು)

(ಆ) ಜಿಲ್ಲಾ ಪಂಚಾಯಿತಿ/ತಾಲ್ಲೂಕು ಪಂಚಾಯಿತಿಯ ಲೆಕ್ಕ ವಿಭಾಗದಲ್ಲಿ ಹಾಗೂ ಅಧೀನದಲ್ಲಿ ಬರುವ ೨೮ ಇಲಾಖೆಗಳಲ್ಲಿ ಇರುವ ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಶೇ.೫೦ರ ಅನುಪಾತದಂತೆ ಗ್ರಾಮ ಪಂಚಾಯಿತಿಗಳಲ್ಲಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿರುವವರನ್ನು ಪ್ರಥಮ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳಿಗೆ ಮುಂಬಡ್ತಿಗೆ ಪರಿಗಣಿಸಬಾರದೇಕೆ ; ಈ ನಿಟ್ಟಿನಲ್ಲಿ ಆಗಿರುವ ಕ್ರಮಗಳೇನು ;

(ಇ) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಲೆಕ್ಕ ಸಹಾಯಕ ಹುದ್ದೆಯನ್ನು ಸೃಜಿಸಿ ಗ್ರೇಡ್-೨ ಗ್ರಾಮ ಪಂಚಾಯಿತಿಗಳಿಗೆ

ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆಯನ್ನು ಹಾಗೂ ಗ್ರೇಡ್ ೧ ಗ್ರಾಮ ಪಂಚಾಯಿತಿಗಳಿಗೆ ಪ್ರಥಮ ದರ್ಜೆ ಲೆಕ್ಕ ಸಹಾಯಕ ಹುದ್ದೆಯನ್ನು ಸೃಜಿಸುವ ಪ್ರಸ್ತಾವನೆ ಸರ್ಕಾರದ ಯಾವ ಹಂತದಲ್ಲಿದೆ ? (ವಿವರಗಳನ್ನು ನೀಡುವುದು)

## ಸ್ವಾಧಾರ ಗೃಹ ಮತ್ತು ಉಜ್ವಲಾ ಕೇಂದ್ರಗಳನ್ನು ಮುಚ್ಚಿರುವ ಬಗ್ಗೆ

**ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) :-**

೩೯೯ (೪೫೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಕಾರ್ಯನಿರ್ವಹಿಸುತ್ತಿದ್ದ ಸ್ವಾಧಾರ ಗೃಹ ಮತ್ತು ಉಜ್ವಲಾ ಕೇಂದ್ರಗಳ ಸಂಖ್ಯೆ ಎಷ್ಟು ; ಇಲ್ಲಿ ಆಶ್ರಯ/ಪುನರ್ವಸತಿ ಹೊಂದಿದ್ದ ಮಹಿಳೆಯರ ಮತ್ತು ಮಕ್ಕಳ ಸಂಖ್ಯೆ ಎಷ್ಟು ಹಾಗೂ ಈ ಸಂಸ್ಥೆಗಳಿಗೆ ಸರ್ಕಾರ ಪಾವತಿಸಿರುವ ಮೊತ್ತವೆಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸ್ವಾಧಾರ ಗೃಹ ಮತ್ತು ಉಜ್ವಲಾ ಕೇಂದ್ರಗಳು ಕಳೆದ ಮೂರ್ನಾಲ್ಕು ತಿಂಗಳಿಂದ ಬಾಗಿಲು ಮುಚ್ಚಿರುವುದು ನಿಜವೇ; ಇದ್ದಲ್ಲಿ, ಕಾರಣಗಳೇನು ;

(ಇ) ಸ್ವಾಧಾರ ಗೃಹ ಮತ್ತು ಉಜ್ವಲಾ ಕೇಂದ್ರಗಳು ಬಾಗಿಲು ಮುಚ್ಚಿರುವುದರಿಂದ ಇಲ್ಲಿ ಆಶ್ರಯ/ಪುನರ್ವಸತಿ ಪಡೆದಿದ್ದ ಮಹಿಳೆಯರು ಮಕ್ಕಳು ಹಾಗೂ ಇವರ ಕುಟುಂಬಗಳಿಗೆ ಸರ್ಕಾರ ಯಾವ ರೀತಿಯ ಪರ್ಯಾಯ ನೆರವು ಕಲ್ಪಿಸಿದೆ ಹಾಗೂ,

ರಾಜ್ಯದಲ್ಲಿರುವ ರಾಜ್ಯ ಮಹಿಳಾ ನಿಲಯ ಸ್ವೀಕಾರ ಕೇಂದ್ರಗಳ ಸಂಖ್ಯೆ ಎಷ್ಟು ಹಾಗೂ ಇವುಗಳು ಎಲ್ಲೆಲ್ಲಿವೆ ; (ವಿವರ ನೀಡುವುದು)

(ಈ) ಮಿಷನ್ ಶಕ್ತಿ ಯೋಜನೆಯಡಿ 'ಶಕ್ತಿ ಸದನ' ಕೇಂದ್ರವನ್ನು ಅನುಷ್ಠಾನಗೊಳಿಸುತ್ತಿರುವುದರಿಂದ ಯಾವ ಯಾವ ಜಿಲ್ಲೆಗಳಲ್ಲಿ 'ಶಕ್ತಿ ಸದನ' ಕೇಂದ್ರಗಳನ್ನು ಆರಂಭಿಸಲಾಗಿದೆ ಅಥವಾ ಆರಂಭಿಸಲು ಬಾಕಿ ಇದೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಉ) 'ಶಕ್ತಿ ಸದನ'ಗಳನ್ನು ಸರ್ಕಾರವೇ ನೇರವಾಗಿ ನಿರ್ವಹಣೆ ಮಾಡುತ್ತದೆಯೇ ಅಥವಾ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಿರ್ವಹಣೆ ಮಾಡಲಾಗುತ್ತದೆಯೇ ?

## ಕಾರ್ಮಿಕರ ಕನಿಷ್ಠ ವೇತನ ನಿಯಮಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೦ (೫೧೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ರಾಜ್ಯದಲ್ಲಿ ಜಾರಿಯಲ್ಲಿರುವ ಕಾರ್ಮಿಕ ನಿಯಮಗಳು ಯಾವುವು ; ಕಾರ್ಮಿಕರ ಕೆಲಸದ ಕಾಲಾವಧಿಯೆಷ್ಟು ಹೆಚ್ಚುವರಿ (ಓ.ಟಿ) ಕೆಲಸಕ್ಕೆ ಹೆಚ್ಚುವರಿ ಭತ್ಯೆ ನೀಡಲು ಅವಕಾಶವಿದೆಯೇ; ತುಟ್ಟಿಭತ್ಯೆಯು ಯಾರಿಗೆ ಅನ್ವಯವಾಗುತ್ತದೆ ; ರಾಜ್ಯದ ಬೀಡಿ ಕಾರ್ಮಿಕರಿಗೆ ೨೦೧೭ರಲ್ಲಿ ನಿಗಧಿ ಪಡಿಸಿದ ಕನಿಷ್ಠ ವೇತನ ಹಾಗೂ ಗ್ರಾಹಕ ಸೂಚ್ಯಂಕದಂತೆ ತುಟ್ಟಿ ಭತ್ಯೆ ನೀಡಲು ಏನು ಕ್ರಮವಹಿಸಲಾಗಿದೆ ; (ವಿವರ ನೀಡುವುದು)

(ಆ) ಕರ್ನಾಟಕ ರಾಜ್ಯದಲ್ಲಿ ಕನಿಷ್ಠ ವೇತನ ನಿಯಮಗಳು ಯಾವುವು ; ಅವು ಯಾರಿಗೆಲ್ಲ ಅನ್ವಯವಾಗುತ್ತವೆ ; ಯಾವ ಪ್ರಕಾರದ ಕೆಲಸಗಾರರಿಗೆ ಈ ನಿಯಮಗಳು ಅನ್ವಯಿಸುವುದಿಲ್ಲ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಕನಿಷ್ಠ ವೇತನ ನಿಯಮಗಳು ಅನ್ವಯಿಸುವ ಒಟ್ಟು ಕೆಲಸಗಾರರ ಸಂಖ್ಯೆ ಎಷ್ಟು ; ಕನಿಷ್ಠ ವೇತನ ನಿಯಮದಿಂದ ಹೊರಗುಳಿದಿರುವ ಕಾರ್ಮಿಕರ ಸಂಖ್ಯೆ ಎಷ್ಟು; ಸರ್ಕಾರದ ಬಳಿ ಇಂದೀಕರಿಸಿದ (ಅಪ್ಡೇಟೆಡ್) ಅಂಕಿ ಅಂಶಗಳಿವೆಯೇ ; (ವಿವರ ನೀಡವುದು)

(ಈ) ಕನಿಷ್ಠ ವೇತನ ವ್ಯಾಖ್ಯಾನ (ಡೆಫಿನೇಷನ್) ಸಂಕುಚಿತವಾಗಿರುವ ಕಾರಣ ಹೆಚ್ಚು ಸಂಖ್ಯೆಯ ಕಾರ್ಮಿಕರು ಕನಿಷ್ಠ ವೇತನ ಭದ್ರತೆಯಿಂದ ಹೊರಗುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಉ) ಸರ್ಕಾರದ ಇಲಾಖೆಗಳಲ್ಲಿ ಪರ್ಯಾಯ ಹೆಸರಿನಿಂದ ಅಂದರೆ ಅಂಗನವಾಡಿ/ಆಶಾ ಕಾರ್ಯಕರ್ತೆಯರು ಸಹಾಯಕರು, ಬಿಸಿಯೂಟ ಸಿಬ್ಬಂದಿಗಳು, ಅತಿಥಿ ಶಿಕ್ಷಕರು/ಉಪನ್ಯಾಸಕರು, ಹೊರಗುತ್ತಿಗೆ ಸಿಬ್ಬಂದಿಗಳು, ಗೌರವಧನ ಆಧಾರಿತ ಸೇವೆಗಳ ಹೆಸರಿನಲ್ಲಿ ಕಡಿಮೆ ವೇತನ ನಿಗಧಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೆಲವು ಸಂದರ್ಭದಲ್ಲಿ ಕುಶಲ ಕಾರ್ಮಿಕರಿಗೆ/ಸಿಬ್ಬಂದಿಗಳಿಗೆ ಅಕುಶಲ ಕನಿಷ್ಠ ವೇತನಕ್ಕಿಂತ ಕಡಿಮೆ ವೇತನ ನಿಗಧಿಪಡಿಸಿರುವುದರ ಕುರಿತು ಸರ್ಕಾರ ವಹಿಸಿದ ಕ್ರಮಗಳೇನು ; (ವಿವರ ನೀಡುವುದು)

(ಊ) ಸರ್ಕಾರದ ಇಲಾಖೆಗಳಲ್ಲಿ ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನ/ ಗೌರವಧನವನ್ನು ಕ್ರಿಯಾ ಯೋಜನೆ ಲೆಕ್ಕ ಶೀರ್ಷಿಕೆಯಲ್ಲಿ ಮೀಸಲಿಟ್ಟು ಅನುದಾನ ಬಿಡುಗಡೆ/ಕ್ರಿಯಾ ಯೋಜನೆ ಅನುಮೋದನೆ ಇತ್ಯಾದಿಗಳಿಂದಾಗಿ ವೇತನ ಪಾವತಿ ತಡವಾಗುತ್ತಿರುವ ಬಗ್ಗೆ ಸರ್ಕಾರದ ಪರಿಹಾರ ಕ್ರಮಗಳೇನು ? (ವಿವರ ನೀಡುವುದು)

## ಕೃಷಿ ಮಹಾವಿದ್ಯಾಲಯಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೧ (೫೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕೃಷಿ ಮಹಾವಿದ್ಯಾಲಯ ಸ್ಥಾಪನೆಗೆ ಇರುವ ನಿಯಮಗಳೇನು ; ರಾಜ್ಯದಲ್ಲಿರುವ ಕೃಷಿ ಮಹಾವಿದ್ಯಾಲಯಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಸರ್ಕಾರಿ ಹಾಗೂ ಖಾಸಗಿ ಕೃಷಿ ಮಹಾವಿದ್ಯಾಲಯಗಳೆಷ್ಟು; ಇವುಗಳ ನಿರ್ವಹಣೆಗೆ ವಾರ್ಷಿಕವಾಗಿ ಇಲಾಖೆಯಿಂದ ಬಿಡುಗಡೆ ಮಾಡಲಾಗುತ್ತಿರುವ ಮೊತ್ತವೆಷ್ಟು ; (ಮಹಾವಿದ್ಯಾಲಯವಾರು ವಿವರ ನೀಡುವುದು)

(ಆ) ೨೦೧೬ ರಿಂದ ಪ್ರಾರಂಭವಾಗಿದ್ದ ಉಡುಪಿ ಜಿಲ್ಲೆಯ ಬ್ರಹ್ಮಾವರ ಕೃಷಿ ಡಿಪ್ಲೋಮಾ ಕಾಲೇಜನ್ನು ರದ್ದುಗೊಳಿಸಲು ಕಾರಣವೇನು ; ಇದಕ್ಕೆ ಸಂಬಂಧಿಸಿದ ಇಲಾಖಾ ಕಛೇರಿ ಟಿಪ್ಪಣಿಯೊಂದಿಗೆ ಮಾಹಿತಿ ನೀಡುವುದು ;

(ಇ) ಸುಮಾರು ೧,೨೨,೧೩೨ ಹೆಕ್ಟೇರು ಬಿತ್ತನೆ ಪ್ರದೇಶ ಹೊಂದಿರುವ ಉಡುಪಿ ಜಿಲ್ಲೆ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ಕೃಷಿ ಚಟುವಟಿಕೆಗೆ

ಪೂರಕವಾಗಿ, ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರದಲ್ಲಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಈ ಹಿಂದೆ ಇಲಾಖೆಯಿಂದ ಆದೇಶ ಹೊರಡಿಸಲಾಗಿದೆಯೇ ; ಈ ಆದೇಶದಂತೆ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು; ಯಾವ ಕಾಮಗಾರಿಗಳಿಗೆ ಈ ಅನುದಾನಗಳನ್ನು ಬಳಸಲಾಗಿದೆ; ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಯಾರು ಹಾಗೂ ಈವರೆಗೆ ಪಾವತಿಸಿದ ಮೊತ್ತವೆಷ್ಟು ; (ಮಾಹಿತಿ ನೀಡುವುದು)

(ಈ) ಈ ಹಿಂದೆ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಇಲಾಖೆಯಿಂದ ಹೊರಡಿಸಿರುವ ಆದೇಶವನ್ನು ಏಕಾಏಕಿ ಹಿಂಪಡೆಯಲು ಕಾರಣವೇನು; ಈಗಿರುವ ಸಂಪನ್ಮೂಲವನ್ನು ಬಳಸಿ ಹೆಚ್ಚುವರಿ ಸಿಬ್ಬಂದಿ ಹಾಗೂ ೫ ಕೋಟಿ ಅನುದಾನದೊಂದಿಗೆ ಕೃಷಿ ಮಹಾವಿದ್ಯಾಲಯ ಸ್ಥಾಪಿಸಲು ಕೆಳದಿ ಶಿವಪ್ಪ ನಾಯಕ ವಿಶ್ವವಿದಾಲಯವು ನೀಡಿರುವ ವರದಿಯು ಇಲಾಖೆಯಲ್ಲಿ ಸ್ವೀಕೃತವಾಗಿದೆಯೇ ; ಈ ವರದಿಯ ಆಧಾರದ ಮೇಲೆ ಉಡುಪಿ ಹಾಗೂ ಕರಾವಳಿ ಜಿಲ್ಲೆಗಳ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೃಷಿ ಮಹಾವಿದ್ಯಾಲಯ ಸ್ಥಾಪಿಸಬಹುದಾಗಿದ್ದು, ಈ ಕುರಿತು ಸರ್ಕಾರದ ನಿಲುವೇನು ; ಈ ಕುರಿತ ಕಡತಗಳು/ಪ್ರಕ್ರಿಯೆ ಯಾವ ಹಂತದಲ್ಲಿ ಇವೆ ? (ಮಾಹಿತಿ ನೀಡುವುದು)

## ಅಂಗನವಾಡಿ ಕಾರ್ಯಕರ್ತರ ಬಗ್ಗೆ

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೨ (೫೧೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬರುವ ಅಂಗನವಾಡಿಗಳನ್ನು ಉನ್ನತೀಕರಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಈಗಾಗಲೇ ಹಲವು ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಗಳನ್ನು ಪ್ರಾರಂಭಿಸುತ್ತಿದ್ದು; ಅಂಗನವಾಡಿ ಕಾರ್ಯಕರ್ತರಿಗೆ ಸೇವಾ ಭದ್ರತೆ ಕಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಅಂಗನವಾಡಿ ಕೇಂದ್ರದ ಹತ್ತಿರದ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆಯನ್ನು ಪ್ರಾರಂಭಿಸುವುದರಿಂದ ಅಂಗನವಾಡಿಗಳು ಕ್ರಮೇಣವಾಗಿ ಪ್ರಾಮುಖ್ಯತೆಯನ್ನು ಕಳೆದುಕೊಳ್ಳುವ ಸಂಭವವಿದ್ದು ಈ ಕುರಿತು ಸರ್ಕಾರದ ನಿಲುವೇನು ; ಅಂಗನವಾಡಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಚ್ಚು ವಿದ್ಯಾರ್ಹತೆ ಹೊಂದಿದ ಅಂಗನವಾಡಿ ಕಾರ್ಯಕರ್ತರನ್ನು ಆಯಾಯ ಪ್ರದೇಶದ ಶಾಲೆಗಳ ಪೂರ್ವ ಪ್ರಾಥಮಿಕ ತರಗತಿಗಳಿಗೆ ಬೋಧಿಸಲು ನೇಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)

(ಇ) ಅಂಗನವಾಡಿಗೆ ಬರುವ ಮಕ್ಕಳಿಗೆ ತರಕಾರಿ ಖರೀದಿಸಲು ಹಣವನ್ನು ನೀಡದಿರಲು ಕಾರಣವೇನು ಹಾಗೂ ಗರ್ಭಿಣಿ ಬಾಣಂತಿಯರಿಗೆ ನೀಡುವ ಪೌಷ್ಟಿಕ ಆಹಾರದ ತರಕಾರಿ ವೆಚ್ಚವನ್ನು ಕಡಿಮೆ ಮಾಡಲು ಕಾರಣವೇನು ; (ವಿವರ ನೀಡುವುದು)

(ಈ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಖೆಯ ಅಧಿಕಾರಿ ಸಿಬ್ಬಂದಿಗಳಿಗೆ ಕಾರ್ಯಕರ್ತರಿಗೆ ನೀಡಬೇಕಾದ ವೇತನ/ ಗೌರವಧನವನ್ನು ಕ್ರಿಯಾ ಯೋಜನೆ ಹಾಗೂ ಇತರ ಲೆಕ್ಕ ಶೀರ್ಷಿಕೆಯಲ್ಲಿ ಮೀಸಲಿಟ್ಟು ಅನುದಾನ ಬಿಡುಗಡೆ/ಕ್ರಿಯಾ ಯೋಜನೆ ಅನುಮೋದನೆ ಇತ್ಯಾದಿ ತಡವಾಗಿ ವೇತನ ಪಾವತಿ ತಡವಾಗುತ್ತಿರುವ ಬಗ್ಗೆ ಸರ್ಕಾರದ ಪರಿಹಾರ ಕ್ರಮಗಳೇನು ; (ವಿವರ ನೀಡುವುದು)

(ಉ) ಅಂಗನವಾಡಿ ಮತ್ತು ಸಹಾಯಕರು ಮತ್ತು ಕಾರ್ಯಕರ್ತರ ಸಮಸ್ಯೆಗಳ ಕುರಿತು ಸರ್ಕಾರ ಗಮನಹರಿಸಿದೆಯೇ ; ಸರ್ಕಾರದ ವಿವಿಧ ಯೋಜನೆಗಳನ್ನು ಮತ್ತು ಅವುಗಳ ಮಾಹಿತಿಯನ್ನು ಹಾಗೂ ಸಾರ್ವಜನಿಕರಿಗೆ ತಲುಪಿಸುವ ಕಾರ್ಯಕರ್ತರಿಗೆ ಪ್ರೋತ್ಸಾಹಧನ ನೀಡಲು ಸರ್ಕಾರ ಬಯಸಿದೆಯೇ ? (ವಿವರ ನೀಡುವುದು)

## ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ತ್ರಿಸ್ತರ ಪಂಚಾಯತ್ ವ್ಯವಸ್ಥೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೩ (೫೧೬) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ತ್ರಿಸ್ತರ ಸ್ಥಳೀಯ ಸಂಸ್ಥೆಗಳಾದ ಜಿಲ್ಲಾ ಪಂಚಾಯತ್ ತಾಲ್ಲೂಕು ಪಂಚಾಯತ್ ಮತ್ತು ಗ್ರಾಮ ಪಂಚಾಯತ್‌ಗಳ ಕಾರ್ಯನಿರ್ವಹಣೆ ಕುರಿತು ಪ್ರಾರಂಭವಾದಾಗಿನಿಂದ ಚಾಲ್ತಿಯಲ್ಲಿರುವ ನಿಯಮಗಳು ಯಾವುವು; ಅವುಗಳನ್ನು ಯಾವಾಗ ತಿದ್ದುಪಡಿ ಹಾಗೂ ಸ್ಥಳೀಯ ಪರಿಸ್ಥಿತಿಗೆ ಅನುಗುಣವಾಗಿ ಬದಲಾಯಿಸಲಾಗಿದೆ ; (ವರ್ಷವಾರು ವಿವರಗಳನ್ನು ನೀಡುವುದು)

(ಆ) ಈ ತ್ರಿಸ್ತರ ಸ್ಥಳೀಯ ಸಂಸ್ಥೆಗಳ ಅಧಿಕಾರಿ/ಸಿಬ್ಬಂದಿಗಳಿಗೆ ಅನುಪಾತ ಅಥವಾ ಮಾದರಿಯನ್ನು ಯಾವಾಗ ನಿರ್ಧರಿಸಲಾಗಿತ್ತು ಮತ್ತು ಯಾವಾಗ ಅದನ್ನು ಬದಲಾಯಿಸಲಾಗಿತ್ತು ಹಾಗೂ ಹೆಚ್ಚಿಸಲಾಗಿತ್ತು ;

ಈಗಿನ ಪರಿಸ್ಥಿತಿಗೆ ಮತ್ತು ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ೩೦ ವರ್ಷಗಳ ಹಿಂದೆ ನಿಗಧಿಪಡಿಸಿದ ಸಿಬ್ಬಂದಿ ಮಾದರಿಯನ್ನು ಬದಲಾಯಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; (ವಿವರ ನೀಡುವುದು)

(ಇ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಎಲ್ಲಾ ವಿಷಯಗಳನ್ನು ಸೇರಿಸಿಕೊಂಡು ಮಾಡಿದ ಸುಸಜ್ಜಿತವಾದ ಪಂಚತಂತ್ರ ತಂತ್ರಾಂಶದ ಸರ್ವರ್ ತೊಂದರೆಯನ್ನು ಸರಿಪಡಿಸಲು ಏನು ಕ್ರಮ ಕೈಗೊಂಡಿದೆ; ಈ ಹಿನ್ನಲೆಯಲ್ಲಿ ಸರ್ವರ್ ವಿಫಲವಾದಾಗ ಆನ್‌ಲೈನ್ ಸೇವೆಗಳನ್ನು ಹಾಗೂ ಸಾಮಾನ್ಯ ಸಭೆಯ ನಡವಳಿಗಳನ್ನು ಮತ್ತು ಫೋಟೋಗಳನ್ನು ಅಪ್ಲೋಡ್ ಮಾಡಲು ಎರಡು ದಿನ ಅಥವಾ ೪೮ ಗಂಟೆಗಳ ಅವಕಾಶ ನೀಡಿ ಸದರಿ ವ್ಯವಸ್ಥೆಯನ್ನು ಸರಿಪಡಿಸಲು ಕಾರ್ಯಕ್ರಮ ರೂಪಿಸಿದೆಯೇ ; (ವಿವರ ನೀಡುವುದು)

(ಈ) ಪಂಚಾಯತ್ ರಾಜ್ ಇಲಾಖೆಯು ಗ್ರಾಮ ಪಂಚಾಯತಿಗಳ ಮೇಲೆ ಬೇರೆ ಇಲಾಖೆಯ ಕೆಲಸಗಳನ್ನು ವಹಿಸದಂತೆ ಇಲಾಖೆ ಆದೇಶ ನೀಡಿದ್ದು, ಸಂಯೋಜನೆಯೊಂದಿಗೆ ಮಾಡಬೇಕಾದ ಕೆಲಸಗಳನ್ನು ಗ್ರಾಮ ಪಂಚಾಯಿತಿಗೆ ಸಂಯೋಜನೆ ಮಾತ್ರ ಮಾಡುವಂತೆ ಹಾಗೂ ಅದರ ಉಳಿದ ನಿರ್ವಹಣಾ ಪೂರ್ಣ ಹೊಣೆಯನ್ನು ಆಯಾಯ ಇಲಾಖೆಗಳಿಗೆ ವಹಿಸಲು ಸೂಕ್ತ ಆದೇಶ ಮಾಡಲಾಗುತ್ತಿದೆಯೇ ? (ವಿವರ ನೀಡುವುದು)

## ಪಂಚಾಯಿತಿ ಸದಸ್ಯರ ಸೌಲಭ್ಯದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೪ (೪೯೦) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಹಾಗೂ ಅವುಗಳಲ್ಲಿರುವ ಸದಸ್ಯರುಗಳ ಸಂಖ್ಯೆ ಎಷ್ಟು ;

(ಆ) ಪಂಚಾಯಿತಿ ಸದಸ್ಯರುಗಳಿಗೆ ಅನುಕೂಲವಾಗುವಂತೆ ಕೂಡಲೇ ಉಚಿತ ಬಸ್‌ಪಾಸ್ ಹಾಗೂ ಆರೋಗ್ಯ ವಿಮಾ ಯೋಜನೆ ಜಾರಿಗೆ ತರಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು ?

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೫ (೪೯೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೂಲಭೂತ ಸೌಲಭ್ಯಗಳಾದ ಗಾಳಿ ಬೆಳಕಿಲ್ಲದೆ, ವಿದ್ಯುತ್ ಸೌಕರ್ಯ ಕುಡಿಯುವ ನೀರು ಶೌಚಾಲಯಗಳಿಲ್ಲದೆ ಚಿಕ್ಕ ಚಿಕ್ಕ ಖಾಸಗಿ ಕೊಠಡಿಗಳಲ್ಲಿ ಹಾಗೂ ತಗಡಿ/ಶೀಟಿನ ಕೇಂದ್ರಗಳಲ್ಲಿ ನಡೆಸಲಾಗುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಸರ್ಕಾರವು ಕೂಡಲೇ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಕೈಗೊಳ್ಳುವ ಕ್ರಮವೇನು ;

(ಇ) ಸ್ವಂತ ಕಟ್ಟಡವನ್ನು ನಿರ್ಮಿಸುವವರೆಗೆ ಎಲ್ಲಾ ಅಂಗನವಾಡಿ ಕೇಂದ್ರಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗದಂತೆ ನೋಡಿಕೊಳ್ಳಲು ಸರ್ಕಾರ ಕೈಗೊಳ್ಳಲು ಕ್ರಮವೇನು ?

## ಗ್ರಂಥಾಲಯ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೬ (೪೯೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಎಷ್ಟು ಗ್ರಾಮ ಪಂಚಾಯತ್ ಕಛೇರಿಗಳಲ್ಲಿ ಗ್ರಂಥಾಲಯಗಳನ್ನು ತೆರೆಯಲಾಗಿದೆ ;

(ಆ) ಎಷ್ಟು ಗ್ರಾಮ ಪಂಚಾಯಿತಿಗಳಲ್ಲಿ ಗ್ರಂಥಾಲಯ ಸೌಲಭ್ಯವಿರುವುದಿಲ್ಲ ;

(ಇ) ಕೂಡಲೇ ಎಲ್ಲಾ ಗ್ರಾಮ ಪಂಚಾಯಿತಿ ಹಾಗೂ ಹೆಚ್ಚು ಜನರಿರುವ ಗ್ರಾಮಗಳಲ್ಲಿ ಗ್ರಂಥಾಲಯ ತೆರೆಯಲು ಸರ್ಕಾರ ಕೈಗೊಳ್ಳುವ ಕ್ರಮವೇನು ;

(ಈ) ಗ್ರಂಥಾಲಯ ತೆರೆಯಲು ಸರ್ಕಾರ ಹಾಲಿ ಅನುಸರಿಸುತ್ತಿರುವ ಮೊದಲ ಹಂತದ ಕ್ರಮವೇನು ?

## ಬೆಳೆ ನಷ್ಟದ ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೦೭ (೪೯೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಒಂದು ವರ್ಷದಲ್ಲಿ ಮೈಸೂರು ಹಾಗೂ ಚಾಮರಾಜ ನಗರ ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಎಷ್ಟು ಬೆಳೆ ನಾಶವಾಗಿದೆ ಹಾಗೂ ಎಷ್ಟು ಆತ್ಮಹತ್ಯೆ ಪ್ರಕರಣಗಳು ದಾಖಲಾಗಿವೆ ;

(ಆ) ಈ ಆತ್ಮಹತ್ಯೆಗೆ ಹಿಂದಿನ ವರ್ಷದ ತೀವ್ರ ಬರಗಾಲ ಬೆಳೆಹಾನಿ ಹಾಗೂ ಸಾಲದ ಹೊರೆ ಬೆಳೆಗೆ ಉತ್ತಮ ಬೆಲೆ ಇಲ್ಲದೆ ಇರುವುದು ಪ್ರಮುಖ ಕಾರಣವಲ್ಲವೆ ;

(ಇ) ಮೇಲ್ಕಂಡ ಸಮಸ್ಯೆ ನಿವಾರಣೆಗೆ ಸರ್ಕಾರ ರಾಜ್ಯದ ರೈತರ ಸಾಲಮನ್ನಾ ಮಾಡಲು ಕ್ರಮ ಕೈಗೊಳ್ಳುವುದೆ ;

(ಈ) ಈ ಬಗ್ಗೆ ರಾಜ್ಯ ಸರ್ಕಾರ ಕೈಗೊಂಡಿರುವ ಇತರೆ ಪರಿಣಾಮಕಾರಿ ಕಾರ್ಯಕ್ರಮಗಳಾವುವು ?

## ಕಳಪೆ ಆಹಾರ ಸರಬರಾಜು ಬಗ್ಗೆ

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೦೮ (೪೯೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು-ಚಾಮರಾಜನಗರ ಜಿಲ್ಲೆಯ ಹಾಸ್ಟೆಲ್‌ಗಳಲ್ಲಿ ಕಳಪೆ ಆಹಾರ ಸರಬರಾಜಿನಿಂದ ಅನಾರೋಗ್ಯ ಹಾಗೂ ಅಸ್ವಸ್ಥತೆಗೆ ತುತ್ತಾದ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಈ ರೀತಿಯ ಅನಾರೋಗ್ಯ ಅಸ್ವಸ್ಥತೆಗೆ ಕಾರಣಗಳೇನು ಹಾಗೂ ಅಸ್ವಸ್ಥ ಹಾಗೂ ಅನಾರೋಗ್ಯ ಮಕ್ಕಳಿಗೆ ನೀಡಿರುವ ಪರಿಹಾರಗಳಾವುವು ;

(ಇ) ಹಾಸ್ಟೆಲ್‌ಗಳಿಗೆ ಕಳಪೆ ಆಹಾರ ಪೂರೈಸಿದ ಗುತ್ತಿಗೆದಾರರು ಹಾಗೂ ಮೇಲಾಧಿಕಾರಿಗಳು ಹಾಗೂ ಕಳಪೆ ಆಹಾರ ಸಿದ್ಧಪಡಿಸುವವರ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮವೇನು ?

## ಚಿತ್ರದುರ್ಗದಲ್ಲಿ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಿದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೮೯ (೫೩೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಾರ್ಮಿಕ ಇಲಾಖೆ ವತಿಯಿಂದ ಚಿತ್ರದುರ್ಗ ಜಿಲ್ಲೆಯಲ್ಲಿನ ಕಾರ್ಮಿಕರಿಗೆ ಆರೋಗ್ಯ ತಪಾಸಣೆ ನಡೆಸಲಾಗಿದೆಯೇ ; ಹಾಗಿದ್ದಲ್ಲಿ, ಯಾವಾಗ ಎಷ್ಟು ಕಾರ್ಮಿಕರಿಗೆ ಆರೋಗ್ಯ ತಪಾಸಣೆ ಮಾಡಲಾಗಿದೆ ; (ಹೆಸರು ಸಮೇತ ವಿವರ ನೀಡುವುದು)

(ಆ) ಆರೋಗ್ಯ ತಪಾಸಣೆ ನಡೆಸಲು ಒಬ್ಬ ಕಾರ್ಮಿಕನಿಗೆ ಎಷ್ಟು ಹಣ ಸರ್ಕಾರದ ವತಿಯಿಂದ ಭರಿಸಲಾಗಿದೆ ? (ವಿವರ ನೀಡುವುದು)

## ರಾಜ್ಯದ ಅಂಗನವಾಡಿ ಕಟ್ಟಡಗಳ ಪರಿಸ್ಥಿತಿಯ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೯೦ (೫೩೬) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಅಂಗನವಾಡಿ ಕೇಂದ್ರಗಳಲ್ಲಿ ಸ್ವಂತ ಕಟ್ಟಡಗಳ ಮತ್ತು ಬಾಡಿಗೆ ಕಟ್ಟಡಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಅಂಗನವಾಡಿ ಕಟ್ಟಡಗಳು ಹಾಳಾಗಿ ದುರಸ್ಥಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದರೆ, ಅಂಗನವಾಡಿ ಕೇಂದ್ರಗಳನ್ನು ದುರಸ್ಥಿಪಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ ಯಾವ ಕಾಲಮಿತಿಯೊಳಗೆ ಅಂಗನವಾಡಿ ಕಟ್ಟಡಗಳನ್ನು ದುರಸ್ಥಿಪಡಿಸಲಾಗುವುದು ; (ಸಂಪೂರ್ಣ ವಿವರ ಒದಗಿಸುವುದು)

(ಉ) ಅಂಗನವಾಡಿ ಕಟ್ಟಡಗಳ ನಿರ್ವಹಣೆಯನ್ನು ಸರ್ಕಾರ ಹೇಗೆ ಮಾಡುತ್ತದೆ ಮತ್ತು ನಿರ್ವಹಣೆಗೆ ಸರ್ಕಾರ ಎಷ್ಟು ಹಣ ವೆಚ್ಚ ಮಾಡುತ್ತಿದೆ ? (ವಿವರ ಒದಗಿಸುವುದು)

## ರೈತರಿಗೆ ನೀಡುವ ಬಿತ್ತನೆ ಬೀಜದ ಗುಣಮಟ್ಟ ಮತ್ತು ಮೌಲ್ಯಮಾಪನದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೧ (೫೩೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಿತ್ತನೆ ಬೀಜದ ಗುಣಮಟ್ಟದ ಮೌಲ್ಯಮಾಪನದ ಕುರಿತು ಇಲಾಖೆ ವತಿಯಿಂದ ರೈತರ ಹಿತ ಕಾಪಾಡಲು ಸರ್ಕಾರ ಯಾವ ರೀತಿ ಕ್ರಮ ವಹಿಸುತ್ತಿದೆ ; (ವಿವರ ಒದಗಿಸುವುದು)

(ಆ) ರಾಜ್ಯದಲ್ಲಿ ಒಟ್ಟು ಎಷ್ಟು ನೊಂದಾಯಿತ ಬಿತ್ತನೆ ಬೀಜ ಉತ್ಪಾದನೆ ಮಾಡುವ ಸಂಸ್ಥೆಗಳಿವೆ ; (ನೊಂದಾಯಿತ ಪ್ರತಿ ಸಂಸ್ಥೆಗಳ ವಿವರ ಒದಗಿಸುವುದು)

(ಇ) ಸರ್ಕಾರದ ವತಿಯಿಂದ ಬಿತ್ತನೆ ಬೀಜ ಕೊಡುವ ವ್ಯವಸ್ಥೆ ಇದೆಯೇ; ಹಾಗಿದ್ದಲ್ಲಿ ಯಾವ ರೀತಿ ವಿತರಣೆ ಮಾಡಲಾಗುತ್ತಿದೆ ; (ವಿವರ ಒದಗಿಸುವುದು)

(ಈ) ರೈತರಿಗೆ ವಿತರಣೆ ಮಾಡುವ ಬಿತ್ತನೆ ಬೀಜಗಳಿಗೆ ಬೆಲೆ ನಿಗದಿ ಮಾಡುವಲ್ಲಿ ಇರುವಂತಹ ಮಾನದಂಡಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಗ್ರಾಮ ಪಂಚಾಯತಿಯ ಸಿಬ್ಬಂದಿಗಳ ವಿವರ ಹಾಗೂ ಕಲುಷಿತ ನೀರಿನ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೨ (೨೩೪) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಗ್ರಾಮ ಪಂಚಾಯತಿಗಳಿವೆ ; (ವಿವರ ಒದಗಿಸುವುದು)

(ಆ) ರಾಜ್ಯದ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳು ಮತ್ತು ಹೊರಗುತ್ತಿಗೆ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಗ್ರಾಮ ಪಂಚಾಯತಿಯಲ್ಲಿ ನೀರು ಗಂಟಿಗಳಿಗೆ ನೀಡುತ್ತಿರುವ ವೇತನ ಎಷ್ಟು ಮತ್ತು ಸದರಿಯವರಿಗೆ ಸರಿಯಾದ ಸಮಯದಲ್ಲಿ ವೇತನ ನೀಡಲಾಗುತ್ತಿದೆಯೇ ;

(ಈ) ರಾಜ್ಯದಲ್ಲಿ ಕಲುಷಿತ ನೀರಿನಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು ; ಕಲುಷಿತ ನೀರಿನಿಂದ ಮರಣ ಹೊಂದಿದವರಿಗೆ ಪರಿಹಾರ ಧನ ನೀಡಲಾಗಿದೆಯೇ ; ಹಾಗಿದ್ದಲ್ಲಿ, ನೀಡಲಾಗಿರುವ ಪರಿಹಾರದ ಮೊತ್ತವೆಷ್ಟು; (ವಿವರ ಒದಗಿಸುವುದು)

(ಉ) ಜಲ ಜೀವನ್ ಮಿಷನ್ ಅಡಿಯಲ್ಲಿ ರಾಜ್ಯದ ಅನುಪಾತದ ಎಷ್ಟು ಮೊತ್ತ ಬಿಡುಗಡೆಯಾಗಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದ ಅನುದಾನ ಮತ್ತು ಯೋಜನೆಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೩ (೫೩೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೩-೨೪ನೇ ಸಾಲಿನಲ್ಲಿ ಬಯಲುಸೀಮೆ ಅಭಿವೃದ್ಧಿ ಪ್ರಾಧಿಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು ; ಸದರಿ ಅನುದಾನವನ್ನು ಯಾವ ಯಾವ ಕಾಮಗಾರಿಗಳಿಗೆ ವಿತರಣೆ ಮಾಡಲಾಗಿದೆ ;

(ಆ) ಈ ಹಿಂದಿನ ಯೋಜನೆಗಳು ಯಾವುವು. ಈ ಯೋಜನೆಗಳಲ್ಲಿ ಅನುಮೋದನೆಗೊಂಡ ಕಾಮಗಾರಿಗಳು ಯಾವುವು ; ಕಾಮಗಾರಿಗೆ ಬಿಡುಗಡೆಯಾದ ಮೊತ್ತವೆಷ್ಟು ; (ಯೋಜನೆವಾರು ಹಾಗೂ ಕಾಮಗಾರಿವಾರು ಮಾಹಿತಿ ನೀಡುವುದು)

(ಇ) ಬಯಲುಸೀಮೆ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳ ಮೇಲೆ ಆರೋಪವೇನಾದರು ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಜರುಗಿಸಲಾಗಿದೆ ? (ವಿವರ ಒದಗಿಸುವುದು)

## ಕೃಷಿ ಭಾಗ್ಯ ಯೋಜನೆ ಮರು ಜಾರಿಗೊಳಿಸಿರುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೪ (೪೭೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಆಯವ್ಯಯದಲ್ಲಿ ಘೋಷಿಸಿರುವಂತೆ ಮರು ಜಾರಿಗೊಳಿಸಲಾಗಿದ್ದ ಕೃಷಿ ಭಾಗ್ಯ ಯೋಜನೆಯಡಿ ಜೂನ್-೨೦೨೪ ಅಂತ್ಯಕ್ಕೆ ಎಷ್ಟು ತಾಲ್ಲೂಕುಗಳಲ್ಲಿ ಕೃಷಿ ಭಾಗ್ಯ ಪ್ಯಾಕೇಜ್ ಘಟಕಗಳನ್ನು ಅನುಷ್ಠಾನಗೊಳಿಸಲಾಗಿದೆ ;

(ಆ) ಈ ಯೋಜನೆಯಡಿ ಎಷ್ಟು ಜಿಲ್ಲೆಗಳನ್ನು ಒಣ ಹವಾಮಾನ ವಲಯಗಳು ಎಂದು ಗುರುತಿಸಲಾಗಿದೆ ;

(ಇ) ಈ ಯೋಜನೆಗೆ ರಾಜ್ಯ ಸರ್ಕಾರವು ಮೀಸಲಿಟ್ಟಿರುವ ಅನುದಾನವೆಷ್ಟು ? (ಮಾಹಿತಿ ನೀಡುವುದು)

## ಗೊಲ್ಲಹಟ್ಟಿಗಳಲ್ಲಿ ವಾಸಿಸುವ ನಾಗರಿಕರಿಗೆ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೫ (೪೪೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಹಲವು ಜಿಲ್ಲೆಗಳಲ್ಲಿ ವಿಶೇಷವಾಗಿ ತುಮಕೂರು, ಚಿತ್ರದುರ್ಗ, ಹಾಸನ, ಬಳ್ಳಾರಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಹಾವೇರಿ ಜಿಲ್ಲೆಗಳಲ್ಲಿ ಇರುವ ಗೊಲ್ಲರಹಟ್ಟಿಗಳಲ್ಲಿ ವಾಸಿಸುವ ನಾಗರಿಕರಿಗೆ

ಮೂಲಭೂತ ಸೌಕರ್ಯಗಳು ಇಲ್ಲದೇ ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗೊಲ್ಲರಹಟ್ಟಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯ ಯೋಜನೆಗಳು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಗೊಲ್ಲರಹಟ್ಟಿಗಳನ್ನು ಕಂದಾಯ ಗ್ರಾಮವಾಗಿ ಪರಿವರ್ತಿಸಲಾಗುವುದೇ ? (ವಿವರ ನೀಡುವುದು)

## ರಾಜ್ಯದ ಗೊಲ್ಲ ಸಮುದಾಯದ ನಿಗಮಕ್ಕೆ ಅಧ್ಯಕ್ಷರನ್ನು ನೇಮಿಸುವ ಬಗ್ಗೆ

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೬ (೪೭೭) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ತುಮಕೂರು, ಚಿತ್ರದುರ್ಗ, ದಾವಗಾಗೆರೆ, ಹಾಸನ ಮುಂತಾದ ಜಿಲ್ಲೆಗಳಲ್ಲಿ ಈಗಲೂ ಸಹ ಕಾಡುಗೊಲ್ಲ ಸಮುದಾಯಕ್ಕೆ ಸೇರಿದ ಗೊಲ್ಲರಹಳ್ಳಿಗಳಲ್ಲಿ ಋತುಮತಿಯಾದಾಗ ಮಹಿಳೆಯರು ನಾನಾ ಸಮಸ್ಯೆಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಗೊಲ್ಲರಹಟ್ಟಿಗಳಲ್ಲಿ ಇಂದಿಗೂ ಮೂಡನಂಬಿಕೆ ಆಚರಣೆಯಲ್ಲಿದ್ದು, ಇಂತಹ ಅವೈಜ್ಞಾನಿಕ ಮತ್ತು ಅನಿಷ್ಠ ಪದ್ಧತಿ ಆಚರಣೆಯಿಂದ ಮಹಿಳೆಯರು ತೀವ್ರವಾದಂತಹ ಸಂಕಷ್ಟಕ್ಕೆ ಒಳಗಾಗುತ್ತಿರುವುದು

ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಮೂಡನಂಬಿಕೆ ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಹಾಗಿದ್ದಲ್ಲಿ, ಈ ಸಮುದಾಯದವರು ವೈಜ್ಞಾನಿಕ ಮತ್ತು ವೈಚಾರಿಕೆ ಜೀವನ ನಡೆಸಲು ಸರ್ಕಾರ ಯಾವ ಜಾಗೃತಿ ಕ್ರಮಗಳನ್ನು ಜರುಗಿಸಿದೆ ಮತ್ತು ಆ ಜಾಗೃತಿ ಕಾರ್ಯಕ್ರಮಗಳು ಯಾವುವು ?

## ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರಿಗೆ ವಿವಿಧ ಯೋಜನೆಗಳ ಕುರಿತು

**ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೭ (೪೮೯) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ನೋಂದಾಯಿತ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರು ಇದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ನೋಂದಾಯಿತ ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರದ ವತಿಯಿಂದ ಕೈಗೊಂಡಿರುವ ವಿವಿಧ ಯೋಜನೆಗಳಾವುವು ; (ವಿವರ ನೀಡುವುದು)

(ಇ) ನೋಂದಾಯಿತ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಈ ಹಿಂದೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುತ್ತಿದ್ದು, ಈ ಶೈಕ್ಷಣಿಕ ವರ್ಷದಲ್ಲಿ ಎಷ್ಟು ಕಾರ್ಮಿಕರ ಮಕ್ಕಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ತೊಗರಿ ಬೆಳೆಗೆ 'ಜಿಐ' ಟ್ಯಾಗ್ ದೊರಕಿರುವ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೧೮ (೫೫೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಜಿಲ್ಲೆಯ ಪ್ರಮುಖ ಬೆಳೆಯಾದ ತೊಗರಿಗೆ 'ಜಿಐ' ಟ್ಯಾಗ್ ದೊರಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದರಿಂದ ತೊಗರಿ ಬೆಳೆಗಾರರಿಗೆ ಆಗುವ ಲಾಭವೇನು ; (ವಿವರ ನೀಡುವುದು)

(ಆ) ತೊಗರಿ ಬೆಳೆಗಾರರಿಗೆ ಉತ್ತೇಜನ ನೀಡಲು ಸರ್ಕಾರ ಯಾವುದಾದರು ವಿಶೇಷ ಯೋಜನೆ ಘೋಷಣೆ ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ ?

## ಆರ್.ಡಿ.ಪಿ.ಆರ್ ಇಲಾಖೆಯಿಂದ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :-**

೪೧೯ (೪೬೭) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ಹೊಸಕೋಟೆ ವಿಧಾನಸಭಾ ಕ್ಷೇತ್ರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಇದುವರೆವಿಗೂ ಮಂಜೂರಾಗಿರುವ ಅನುದಾನದ ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕ್ಷೇತ್ರಕ್ಕೆ ಯಾವ ಯಾವ ಯೋಜನೆಯಡಿಯಲ್ಲಿ ಅನುದಾನವನ್ನು ಮಂಜೂರು ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕಳೆದ ಒಂದು ವರ್ಷದಿಂದ ಈ ಕ್ಷೇತ್ರಕ್ಕೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮಂಜೂರಾಗಿರುವ ಅನುದಾನದಲ್ಲಿ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹೊಸಕೋಟೆ ತಾಲ್ಲೂಕಿನ ಅಂಗನವಾಡಿಗಳ ಕೊಠಡಿ ಬಗ್ಗೆ

**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೦ (೪೬೮) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೊಸಕೋಟೆ ತಾಲ್ಲೂಕಿನಲ್ಲಿರುವ ಅಂಗನವಾಡಿ ಕೇಂದ್ರಗಳಲ್ಲಿ ಸ್ವಂತ ಕಟ್ಟಡಗಳಿರುವ ಕೇಂದ್ರಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡ ಇಲ್ಲದಿರುವ ಅಂಗನವಾಡಿ ಕಟ್ಟಡಗಳ ಸಂಖ್ಯೆ ಎಷ್ಟು ;

(ಆ) ಈ ಕ್ಷೇತ್ರದಲ್ಲಿ ಅಂಗನವಾಡಿ ಕೇಂದ್ರಗಳ ಕಟ್ಟಡ ಇಲ್ಲದಿರುವುದರ ಬಗ್ಗೆ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ ? (ಮಾಹಿತಿ ನೀಡುವುದು)

## ರೈತರಿಗೆ ಬೆಳೆ ವಿಮೆ ನೀಡದಿರುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೨೧ (೩೧೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿನ ರೈತರ ನೆರವಿಗೆ ಬರಬೇಕಾದ ಬೆಳೆ ವಿಮೆ ಬಾರದೆ ರೈತರು ಸಂಕಷ್ಟಕ್ಕೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರಾಜ್ಯದಲ್ಲಿ ಬೆಳೆ ವಿಮೆ ಪಡೆಯುತ್ತಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ರೈತರಿಗೆ ಶೇ.೮೦–೯೦ ರಷ್ಟು ಬೆಳೆ ಹಾನಿಯಾದರೂ ಬೆಳೆವಿಮೆ ಪರಿಹಾರ ಸಿಗುತ್ತಿಲ್ಲವೆಂದು ರೈತರು ಬೀದಿಗಿಳಿದು ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರೈತರಿಗೆ ರಾಜ್ಯ ಸರ್ಕಾರ ಬೆಳೆವಿಮೆ ನೀಡದಿರಲು ಕಾರಣವೇನು ;

(ಇ) ಇಲ್ಲಿಯವರೆಗೆ ಎಷ್ಟು ಜನ ರೈತರಿಗೆ ಬೆಳೆವಿಮೆ ತಲುಪಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಈ) ಬೆಳೆವಿಮೆ ಪರಿಹಾರ ಘೋಷಿಸಲು ಇನ್ನೂ ಎಷ್ಟು ಕಾಲಾವಧಿ ಬೇಕಾಗುತ್ತದೆ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ವಿಜಯಪುರ ಜಿಲ್ಲೆಯಲ್ಲಿ ರಸ್ತೆ ಅಭಿವೃದ್ಧಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೪೨೨ (೪೪೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ರಸ್ತೆಗಳ ಅಭಿವೃದ್ಧಿಗೆ ೨೦೨೩–೨೪ ನೇ ಸಾಲಿನಲ್ಲಿ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ; ಆ ಪೈಕಿ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಎಷ್ಟು ಕಿಲೋ ಮೀಟರ್ ರಸ್ತೆ ಅಭಿವೃದ್ಧಿ ಪಡಿಸಲಾಗಿದೆ ; ಎಷ್ಟು ಕಿಲೋ ಮೀಟರ್ ರಸ್ತೆ ಅಭಿವೃದ್ಧಿ ಪಡಿಸಲು ಬಾಕಿ ಇವೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಕಿ ಉಳಿದಿರುವ ರಸ್ತೆಗಳ ಕಾಮಗಾರಿಗಳನ್ನು ಯಾವ ಕಾಲಮಿತಿಯೊಳಗಾಗಿ ಪೂರ್ಣಗೊಳಿಸಲಾಗುವುದು ?

## ವಿಜಯಪುರ ಜಿಲ್ಲೆಯಲ್ಲಿನ ಕಾರ್ಮಿಕರ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೪೨೩ (೪೪೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ಎಷ್ಟು ಕಾರ್ಮಿಕರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸರ್ಕಾರದಿಂದ ಕಾರ್ಮಿಕರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ; (ವಿವರ ನೀಡುವುದು)

(ಇ) ಎಷ್ಟು ಜನ ಕಾರ್ಮಿಕರು ಸರ್ಕಾರದಿಂದ ದೊರೆಯುವ ಸೌಲಭ್ಯ ಪಡೆಯಲು ಅರ್ಹರಿದ್ದಾರೆ ; ಎಷ್ಟು ಜನ ಕಾರ್ಮಿಕರು ಅನರ್ಹರಿದ್ದಾರೆ ? (ತಾಲ್ಲೂಕುವಾರು ವಿವರ ನೀಡುವುದು)

## ವಿಜಯಪುರ ಜಿಲ್ಲೆಗೆ ಬಂದಿರುವ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೪೨೪ (೪೪೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲೆಯಲ್ಲಿ ೨೦೨೩-೨೪ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯ ಯೋಜನೆಗಳಡಿಯಲ್ಲಿ ಧನ ಸಹಾಯ ಪಡೆಯಲು ಎಷ್ಟು ಫಲಾನುಭವಿಗಳು ಅರ್ಜಿ ಸಲ್ಲಿಸಿದ್ದಾರೆ ; (ವಿವರ ನೀಡುವುದು)

(ಆ) ಅರ್ಜಿ ಸಲ್ಲಿಸಿದ ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; ಸದರಿಯವರುಗಳಿಗೆ ಪಾವತಿಸಿರುವ ಒಟ್ಟು ಮೊತ್ತ ಎಷ್ಟು ; ಇನ್ನೂ ಎಷ್ಟು ಅರ್ಜಿಗಳು ಬಾಕಿ ಇವೆ ; (ವಿವರ ನೀಡುವುದು)

(ಇ) ವಿಜಯಪುರ ಜಿಲ್ಲೆಗೆ ೨೦೨೩-೨೪ನೇ ಸಾಲಿನ ಯೋಜನೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ ?

## ವಿಜಯಪುರ ಜಿಲ್ಲೆಯಲ್ಲಿ ರಾಸಾಯನಿಕ ಗೊಬ್ಬರ ಬಳಸಿ ವ್ಯವಸಾಯ ಮಾಡುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೪೨೫ (೪೪೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಜಿಲ್ಲಾ ವ್ಯಾಪ್ತಿಯಲ್ಲಿ ರೈತರು ರಾಸಾಯನಿಕ ಗೊಬ್ಬರ ಬಳಸಿ ವ್ಯವಸಾಯ ಮಾಡುತ್ತಿರುವುದರಿಂದ ಭೂಮಿಯು ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಭೂಮಿಯು ಸವಳು ಬರಡು ಭೂಮಿಯಾಗುತ್ತಿರುವುದನ್ನು ತಪ್ಪಿಸಲು ರೈತರಿಗೆ ಬದಲಿ ವ್ಯವಸಾಯ ನೀತಿಯನ್ನು ರೂಪಿಸಲು ಸರ್ಕಾರವು ಏನಾದರೂ ಕಾರ್ಯಕ್ರಮ ಹಮ್ಮಿಕೊಂಡಿದೆಯೇ ;

(ಇ) ಶಾಶ್ವತವಾಗಿ ರಾಸಾಯನಿಕ ಗೊಬ್ಬರ ಬಳಸುವುದನ್ನು ನಿಷೇಧಿಸಿ ಸಾವಯವ ಕೃಷಿಯಿಂದ ವ್ಯವಸಾಯ ಮಾಡಲು ರೈತರಿಗೆ ಸಲಹೆ ನೀಡಲು ಸರ್ಕಾರ ಏನಾದರು ಕ್ರಮ ಕೈಗೊಳ್ಳುವುದೇ ?

## "ಮಾತೃಪೂರ್ಣ" ಯೋಜನೆಯಲ್ಲಿ ತರಕಾರಿ ಖರೀದಿಸಲು ಪ್ರತಿ ಗರ್ಭಿಣಿಗೆ ಕೇವಲ ೬೦ ಪೈಸೆ ನಿಗದಿಪಡಿಸಿರುವ ಬಗ್ಗೆ

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೬ (೪೭೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಗರ್ಭಿಣಿ ಮತ್ತು ಶಿಶುಗಳ ಅಪೌಷ್ಠಿಕತೆ ನಿವಾರಣೆ ಸಲುವಾಗಿ ಪೌಷ್ಠಿಕಾಂಶವುಳ್ಳ ಆಹಾರ ನೀಡುವ 'ಮಾತೃಪೂರ್ಣ' ಯೋಜನೆಯಡಿ ತರಕಾರಿ ಖರೀದಿಸಲು ಪ್ರತಿ ಗರ್ಭಿಣಿಗೆ ಕೇವಲ ೬೦ ಪೈಸೆ ನಿಗದಿಪಡಿಸಿರುವ ಸರ್ಕಾರದ ಅವೈಜ್ಞಾನಿಕ ಕ್ರಮದಿಂದ ಯೋಜನೆಯ ಅನುಷ್ಠಾನಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತರಕಾರಿ ಖರೀದಿಸಲು ಪ್ರತಿ ಗರ್ಭಿಣಿಗೆ ಕೇವಲ ೬೦ ಪೈಸೆ ನಿಗದಿಪಡಿಸಿರುವ ಈ ಅವೈಜ್ಞಾನಿಕ ಕ್ರಮಕ್ಕೆ ಕಾರಣಗಳೇನು ;

(ಇ) ಪ್ರತಿ ಗರ್ಭಿಣಿಗೆ ತರಕಾರಿ ಖರೀದಿಸಲು ಸೂಕ್ತ ಹಾಗೂ ವಾಸ್ತವವಾಗಿ ಬೇಕಾಗಿರುವ ಮೊತ್ತವನ್ನು ನಿಗದಿಪಡಿಸಿ ಆ ಮೂಲಕ ಅಪೌಷ್ಟಿಕತೆ ಹೋಗಲಾಡಿಸಲು ಕೈಗೊಂಡಿರುವ ಈ ಮಹತ್ವಪೂರ್ಣ ಯೋಜನೆಯ ಪರಿಣಾಮಕಾರಿ ಅನುಷ್ಠಾನದಲ್ಲಿ ಇನ್ನು ಮುಂದೆ ಯಾವುದೇ ವ್ಯತ್ಯಯವಾಗದಂತೆ ಸರ್ಕಾರ ಕೂಡಲೇ ಸೂಕ್ತ ಕ್ರಮ ವಹಿಸುವುದೇ ?

## ಭೂ ಪರಿವರ್ತಿತ ೯/೧೧ ವಿನ್ಯಾಸ ನಕ್ಷೆ ಅನುಮೋದನೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೭ (೪೬೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂ ಪರಿವರ್ತಿತ ೯/೧೧ ವಿನ್ಯಾಸ ನಕ್ಷೆ ಅನುಮೋದನೆಯ ಅಧಿಕಾರವನ್ನು ಗ್ರಾಮ ಪಂಚಾಯಿತಿಗಳಿಂದ ಕಸಿದು ಯೋಜನಾ ಪ್ರಾಧಿಕಾರಕ್ಕೆ ನೀಡಿರುವುದರಿಂದ ಗ್ರಾಮೀಣ ಭಾಗದ ಬಡಜನತೆ ಮನೆ, ಕಟ್ಟಡ ನಿರ್ಮಾಣ, ಬ್ಯಾಂಕ್ ಸಾಲ ಪಡೆಯುವ ಉದ್ದೇಶದಿಂದ ಭೂ ಪರಿವರ್ತನೆ ವಿನ್ಯಾಸ ನಕ್ಷೆಗಾಗಿ ದೂರದ ಪಟ್ಟಣಗಳಿಗೆ ಅಲೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಗ್ರಾಮ ಪಂಚಾಯಿತಿಗಳಿಗೆ ಬಂದಿರುವ ಅರ್ಜಿಗಳನ್ನು ಯೋಜನಾ ಪ್ರಾಧಿಕಾರಕ್ಕೆ ಅನುಮೋದನೆಗಾಗಿ ಕಳುಹಿಸಿಕೊಟ್ಟರೂ ಸಮರ್ಪಕ ದಾಖಲೆಗಳ ಕೊರತೆಯ ಕಾರಣ ನೀಡಿ ಅರ್ಜಿಗಳನ್ನು ಮತ್ತೆ ಗ್ರಾಮ ಪಂಚಾಯಿತಿಗಳಿಗೆ ವಾಪಸ್ ಕಳುಹಿಸುವುದು ಹಾಗೂ ಪ್ರಾಧಿಕಾರಗಳಲ್ಲಿ ಸಿಬ್ಬಂದಿ ಕೊರತೆ ಇರುವುದರಿಂದ ನಿಗದಿತ ಸಮಯದೊಳಗೆ ಸ್ಥಳ ಪರಿಶೀಲನೆ ಮಾಡಲು ಕೂಡ ಸಾಧ್ಯವಾಗದೆ ದೀರ್ಘಕಾಲದ ವಿಳಂಬಕ್ಕೆ ಕಾರಣವಾಗುತ್ತಿರುವ ಈ ಪ್ರಕ್ರಿಯೆ ಬದಲಿಸುವ ಕುರಿತು ಸರ್ಕಾರ ಇದುವರೆವಿಗೂ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಅವೈಜ್ಞಾನಿಕ, ಅವಾಸ್ತವಿಕ ಆದೇಶವನ್ನು ಬದಲಾಯಿಸಿ ಆ ಮೂಲಕ ಗ್ರಾಮೀಣ ಭಾಗದ ಬಡಜನತೆಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲಾಗುವುದು ?

## ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಲ್ಲಿನ ಅನುದಾನ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೪೨೮ (೪೬೨) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಕಲ್ಯಾಣಕ್ಕಾಗಿ ೨೦೨೩–೨೪ ನೇ ಸಾಲಿನಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು ;

(ಆ) ಸದರಿ ಅನುದಾನದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಕ್ಕಳಿಗೆ ಒದಗಿಸಿರುವ ವಿವಿಧ ಸೌಲಭ್ಯಗಳು ಯಾವುವು; ಪ್ರತೀ ಸೌಲಭ್ಯಕ್ಕೆ ವಿನಿಯೋಗಿಸಿರುವ ಅನುದಾನದ ವಿವರಗಳೇನು ;

(ಇ) ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ ೨೦೨೩–೨೪ ನೇ ಸಾಲಿನಲ್ಲಿ ವಿನಿಯೋಗಿಸಿರುವ ಅನುದಾನವೆಷ್ಟು; ಸದರಿ ಸಾಲಿನಲ್ಲಿ ಶೈಕ್ಷಣಿಕ ಧನ ಸಹಾಯ ಪಡೆದ ಮಕ್ಕಳ ಸಂಖ್ಯೆ ಎಷ್ಟು ;

(ಈ) ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ಮಕ್ಕಳ ಶೈಕ್ಷಣಿಕ ಧನ ಸಹಾಯಕ್ಕಾಗಿ ೨೦೨೩-೨೪ನೇ ಸಾಲಿನಲ್ಲಿ ಧನ ಸಹಾಯಕ್ಕಾಗಿ ಅರ್ಜಿ ಸಲ್ಲಿಸಿದ್ದು, ಇದುವರೆಗೂ ಧನ ಸಹಾಯ ದೊರೆಯದಿರುವ ಪ್ರಕರಣಗಳೆಷ್ಟು? (ವಿವರ ನೀಡುವುದು)

## ಬಿತ್ತನೆ ಬೀಜಗಳ ದರ ಏರಿಕೆ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :-**

೪೨೯ (೪೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಿತ್ತನೆ ಬೀಜಗಳ ದರ ಗಣನೀಯವಾಗಿ ಏರಿಕೆ ಆಗಿರುವುದರಿಂದ ರೈತಾಪಿ ವರ್ಗ ಸಂಕಷ್ಟಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬಿತ್ತನೆ ಬೀಜಗಳ ದರ ಗಣನೀಯವಾಗಿ ಏರಿಕೆ ಆಗಿರುವುದಕ್ಕೆ ಕಾರಣಗಳೇನು ;

(ಇ) ಬಿತ್ತನೆ ಬೀಜಗಳ ಮಾರಾಟ ದರಗಳನ್ನು ನಿಗಧಿಪಡಿಸಲು ಪ್ರಸ್ತುತ ಅನುಸರಿಸುತ್ತಿರುವ ಮಾನದಂಡ ಹಾಗೂ ನಿಯಮಗಳೇನು ; (ವಿವರ ನೀಡುವುದು)

(ಈ) ತೀವ್ರ ಸಂಕಷ್ಟದಲ್ಲಿರುವ ರಾಜ್ಯದ ರೈತರಿಗೆ ನೆರವಾಗುವ ದೃಷ್ಟಿಯಿಂದ ಗಣನೀಯವಾಗಿ ಏರಿಕೆ ಆಗಿರುವುದು ಬಿತ್ತನೆ ಬೀಜಗಳ ದರವನ್ನು ಕಡಿಮೆ ಮಾಡಲು ಸರ್ಕಾರ ಈ ಕೂಡಲೇ ಕ್ರಮವಹಿಸುವುದೇ ?

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆ ನೆನೆಗುದಿಗೆ ಬಿದ್ದಿರುವ ಕುರಿತು

**ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು) :–**

೪೩೦ (೪೭೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆ ನೆನೆಗುದಿಗೆ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳು ಪ್ರಾರಂಭವಾಗಿ ೧೫ ದಿನ ಕಳೆದಿದ್ದರೂ, ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆ ಇನ್ನೂ ನೆನೆಗುದಿಗೆ ಬಿದ್ದಿರಲು ಕಾರಣಗಳೇನು ;

(ಇ) ಶೈಕ್ಷಣಿಕ ವರ್ಷ ಆರಂಭಗೊಂಡು, ತರಗತಿಗಳು ಈಗಾಗಲೇ ಪ್ರಾರಂಭವಾಗಿದ್ದರೂ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸದಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ಮಾರಕವಾಗುವುದನ್ನು ತಪ್ಪಿಸಲು ಸರ್ಕಾರ ಸಕಾಲದಲ್ಲಿ ಕ್ರಮ ವಹಿಸಿಲ್ಲದಿರುವುದಕ್ಕೆ ಕಾರಣಗಳೇನು ;

(ಈ) ಯಾವ ಕಾಲಮಿತಿಯೊಳಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೇರಿದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಹಾಸ್ಟೆಲ್‌ಗಳ ಪ್ರವೇಶ ಪ್ರಕ್ರಿಯೆನ್ನು ಪೂರ್ಣಗೊಳಿಸಿ ಅರ್ಹ ವಿದ್ಯಾರ್ಥಿಗಳಿಗೆ ಸೌಲಭ್ಯ ಕಲ್ಪಿಸಲಾಗುವುದು ?

# ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಕಲ್ಯಾಣ ನಿಧಿಯಲ್ಲಿರುವ ಹಣದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೧ (೩೦೦) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನಿಧಿಯಲ್ಲಿ ಸಂಗ್ರಹವಾಗಿರುವ ಹಣ ಎಷ್ಟು ; ಈ ನಿಧಿಯಲ್ಲಿರುವ ಹಣವನ್ನು ಯಾವ್ಯಾವ ಉದ್ದೇಶಕ್ಕೆ ಬಳಕೆ ಮಾಡಿಕೊಂಡು ಬರಲಾಗಿದೆ ;

(ಆ) ಕಳೆದ ೩ ವರ್ಷದಿಂದ ಯಾವ ಉದ್ದೇಶಕ್ಕೆ ಎಷ್ಟು ಹಣ ವೆಚ್ಚ ಮಾಡಲಾಗಿದೆ ; (ವರ್ಷವಾರು ವಿವರ ನೀಡುವುದು)

(ಇ) ಕಾರ್ಮಿಕರ ಮಕ್ಕಳಿಗೆ ವಿತರಿಸಲು ಮಂಡಳಿ ಎಷ್ಟು ಲ್ಯಾಪ್‌ಟಾಪ್‌ಗಳನ್ನು ಖರೀದಿಸಿದೆ ; ಪ್ರತೀ ಲ್ಯಾಪ್‌ಟಾಪ್ ಖರೀದಿಗೆ ನೀಡಿರುವ ಹಣ ಎಷ್ಟು ; ಲ್ಯಾಪ್‌ಟಾಪ್ ಖರೀದಿಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ತನಿಖೆ ನಡೆಸಿದೆಯೇ ;

(ಈ) ರಾಜ್ಯ ಉಚ್ಚ ನ್ಯಾಯಾಲಯ ಮಂಡಳಿಯಲ್ಲಿರುವ ಹಣದ ಬಳಕೆ ಕುರಿತು ಬೇಸರ ವ್ಯಕ್ತಪಡಿಸಲು ಕಾರಣಗಳೇನು; ಕಟ್ಟಡ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಸಹಾಯ ಮಾಡಲು ನಿರಾಕರಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಧನ ಸಹಾಯ ನಿರಾಕರಿಸಿದ ಅಧಿಕಾರಿಯ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ವಾರಕ್ಕೊಮ್ಮೆ ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ್‌ಗಳಿಗೆ ಭೇಟಿ ನೀಡಿದ ಸಿ.ಇ.ಓ. ಗಳ ವಿರುದ್ಧ ಕೈಗೊಂಡ ಕ್ರಮಗಳು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೨ (೩೦೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ವಾರಕ್ಕೊಮ್ಮೆ ಕಡ್ಡಾಯವಾಗಿ ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಕಛೇರಿಗಳಿಗೆ ಭೇಟಿ ನೀಡಬೇಕೆಂದು ಆದೇಶ ಹೊರಡಿಸಲಾಗಿದೆಯೇ ; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಸರ್ಕಾರದ ಸೂಚನೆಯನ್ನು ಪಾಲಿಸಿ ಎಷ್ಟು ಜನ ಸಿ.ಇ.ಓ ಗಳು ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಕಛೇರಿಗಳಿಗೆ ಭೇಟಿ ನೀಡಿದ್ದಾರೆ ; (ಮಾಹೆಯಾನ ವಿವರ ನೀಡುವುದು)

(ಇ) ಸಿ.ಇ.ಓ ಗಳು ತಾಲ್ಲೂಕು ಪಂಚಾಯತಿ ಹಾಗೂ ಗ್ರಾಮ ಪಂಚಾಯತಿ ಕಛೇರಿಗಳಿಗೆ ಭೇಟಿ ನೀಡಿದಾಗ ಬಂದಿರುವ ದೂರುಗಳೆಷ್ಟು; ಈ ಪೈಕಿ ಎಷ್ಟು ದೂರುಗಳಿಗೆ ಪರಿಹಾರ ಕಲ್ಪಿಸಲಾಗಿದೆ; ಇದನ್ನು ಜಾರಿಗೊಳಿಸಿದ ನಂತರದಲ್ಲಿ ಆಗಿರುವ ಸುಧಾರಣೆಗಳೇನು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸರ್ಕಾರದ ಸೂಚನೆಯನ್ನು ಪಾಲಿಸದ ಎಷ್ಟು ಸಿ.ಇ.ಓ ಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

# ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ಒದಗಿಸುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೩ (೩೦೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡದಲ್ಲಿ ಮತ್ತು ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ಕಲ್ಪಿಸುವ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳೇನು; ಇದಕ್ಕೆ ಅಗತ್ಯವಿರುವ ಹಣ ಎಷ್ಟು ; ಕಳೆದ ಒಂದು ವರ್ಷದಿಂದ ಎಷ್ಟು ಅಂಗನವಾಡಿ ಕೇಂದ್ರಗಳಿಗೆ ಸ್ವಂತ ಕಟ್ಟಡ ಹೊಂದಲು ಅನುದಾನ ಬಿಡುಗಡೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಅಂಗನವಾಡಿ ಕೇಂದ್ರಗಳಿಗೆ ಮಂಜೂರಾಗಿರುವ ಹಾಗೂ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) ಖಾಲಿ ಹುದ್ದೆಗಳ ಭರ್ತಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಲಿ ನೀಡುತ್ತಿರುವ ಗೌರವ ಧನ ಎಷ್ಟು; ಗೌರವ ಧನದ ಜೊತೆಗೆ ನೀಡುತ್ತಿರುವ ಇನ್ನಿತರೆ ಸೌಲಭ್ಯಗಳು ಯಾವುವು; ಗೌರವಧನ ಹೆಚ್ಚಳ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ರೈತರ ಆತ್ಮಹತ್ಯೆ ತಡೆಯಲು ಕ್ರಮ ಕೈಗೊಳ್ಳುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೪ (೩೦೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡಿರುವ ರೈತರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಆತ್ಮಹತ್ಯೆ ಮಾಡಿಕೊಂಡ ಎಷ್ಟು ರೈತ ಕುಟುಂಬಗಳಿಗೆ ಪರಿಹಾರ ಧನ ನೀಡಲಾಗಿದೆ; ನೀಡಿರುವ ಪರಿಹಾರದ ಮೊತ್ತ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ರೈತರ ಆತ್ಮಹತ್ಯೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ರೂಪಿಸಿರುವ ಯೋಜನೆಗಳು ಯಾವುವು ?

## ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ಅನುದಾನ ಬಿಡುಗಡೆಯಾಗದಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೫ (೪೫೭) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಲ್ಲಿ ಬಯಲುಸೀಮೆ ಅಭಿವೃದ್ಧಿ ಮಂಡಳಿಗೆ ಸರ್ಕಾರದಿಂದ ಬಿಡುಗಡೆ ಮಾಡಬೇಕಾದ ಹಾಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; ಈ ಅನುದಾನದಲ್ಲಿ ಮಂಡಳಿಯಿಂದ ಯಾವ ಯಾವ ಶಾಸಕರುಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; ಈ ಅನುದಾನಕ್ಕನುಗುಣವಾಗಿ

ಶಾಸಕರುಗಳಿಂದ ಕಾಮಗಾರಿಗಳ ಪ್ರಸ್ತಾವನೆಗಳು ಸ್ವೀಕೃತವಾಗಿವೆಯೇ; ಸ್ವೀಕೃತವಾಗಿರುವ ಪ್ರಸ್ತಾವನೆಗಳಿಗೆ ಹಣ ಬಿಡುಗಡೆ ಮಾಡಲಾಗಿದೆಯೇ ; (ವರ್ಷವಾರು ಮತ್ತು ಕ್ಷೇತ್ರವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬಯಲುಸೀಮೆ ಅಭಿವೃದ್ಧಿ ಮಂಡಳಿಯಿಂದ ಅನುದಾನವನ್ನು ಬಿಡುಗಡೆ ಮಾಡಲು ವಿಳಂಬ ಮಾಡುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಕೃಷಿಕರು ವಿದ್ಯುತ್ ಸಂಪರ್ಕ ಪಡೆಯಲು ತಗಲುವ ವೆಚ್ಚಗಳಿಗೆ ಸಹಾಯಧನ ನೀಡುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೬ (೪೫೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಮತ್ತು ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಳ್ಳಲು ತಗಲುವ ವೆಚ್ಚಗಳನ್ನು ರೈತರೇ ಭರಿಸುತ್ತಿದ್ದು, ಇಂಧನ ಇಲಾಖೆಯಿಂದ ವಿಧಿಸುತ್ತಿರುವ ದರಗಳು ಬಹಳ ತುಟ್ಟಿಯಾಗಿರುವುದರಿಂದ ಬಡ ವರ್ಗದ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಮತ್ತು ವಿದ್ಯುತ್ ಪರಿವರ್ತಕಗಳನ್ನು ಅಳವಡಿಸಿಕೊಳ್ಳಲು ತಗಲುವ ವೆಚ್ಚಗಳಿಗೆ ಕೃಷಿ ಇಲಾಖೆಯಿಂದ ಸಹಾಯಧನ ನೀಡುವಂತಹ ಯೋಜನೆಯನ್ನು ಜಾರಿಗೆ ತರುವ ಚಿಂತನೆ ಸರ್ಕಾರಕ್ಕಿದೆಯೇ ? (ಮಾಹಿತಿ ನೀಡುವುದು)

## ಆರ್.ಡಿ.ಡಬ್ಲ್ಯೂ.ಎಸ್.ಡಿ. ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೭ (೪೫೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯ ಅನುದಾನದಡಿ ಗ್ರಾಮೀಣ ಭಾಗದಲ್ಲಿ ಕೈಗೊಳ್ಳುತ್ತಿರುವ ಕಾಮಗಾರಿಗಳು ಯಾವುವು ; (ವಿವರ ನೀಡುವುದು)

(ಆ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು; ಈ ಕಾಮಗಾರಿಗಳಿಗೆ ಮಂಜೂರಾದ ಹಾಗೂ ಖರ್ಚಾದ ಅನುದಾನವೆಷ್ಟು ; ಈ ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಇ) ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ನಿರ್ವಹಿಸಲಾಗುತ್ತಿರುವ ಕಾಮಗಾರಿಗಳ

ಅನುಷ್ಠಾನವು ಬಹಳ ಕುಂಠಿತವಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೆನೆಗುದಿಗೆ ಬಿದ್ದಿರುವ ಕಾಮಗಾರಿಗಳನ್ನು ಜರೂರಾಗಿ ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಗಂಗಾ ಕಲ್ಯಾಣ ಯೋಜನೆ ಕುರಿತು

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೩೮ (೪೬೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಮನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ವಿವಿಧ ಇಲಾಖೆಗಳಡಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆಸಲಾದ ಕೊಳವೆ ಬಾವಿಗಳೆಷ್ಟು; ಇದಕ್ಕಾಗಿ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಆ) ಕೊರೆಸಲಾದ ಕೊಳವೆ ಬಾವಿಗಳಲ್ಲಿ ವಿಫಲವಾದ ಹಾಗೂ ಸಫಲವಾದ ಕೊಳವೆ ಬಾವಿಗಳೆಷ್ಟು ; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಯೋಜನೆಯಲ್ಲಿ ಕೊರೆಸಿದ ಕೊಳವೆ ಬಾವಿಗಳಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟರ್ ಜೋಡಿಸಿ ವಿದ್ಯುಚ್ಛಕ್ತಿ ಒದಗಿಸಲಾಗಿದೆ ; (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

(ಈ) ಉಳಿದ ಕೊಳವೆ ಬಾವಿಗಳಿಗೆ ಯಾವ ಕಾಲಮಿತಿಯೊಳಗೆ ಮೋಟರ್ ಜೋಡಿಸಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ? (ಫಲಾನುಭವಿಯ ಹೆಸರು ಮತ್ತು ವಿಳಾಸದೊಂದಿಗೆ ತಾಲ್ಲೂಕುವಾರು ವಿವರ ನೀಡುವುದು)

## ನೀಟ್, ಜೆಇಇ ಮತ್ತು ಸಿಇಟಿ ತರಬೇತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೩೯ (೩೦೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸಮಾಜ ಕಲ್ಯಾಣ ಇಲಾಖೆವತಿಯಿಂದ ನಡೆಸಲ್ಪಡುವ ವಸತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ನೀಟ್, ಜೆಇಇ ಮತ್ತು ಸಿಇಟಿ ತರಬೇತಿ ನೀಡಲಾಗುತ್ತಿದೆಯೇ ; ಈ ತರಬೇತಿಯನ್ನು ಎಷ್ಟು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಪಡೆದುಕೊಳ್ಳುತ್ತಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ವಸತಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳಿಗೆ ನೀಟ್, ಜೆಇಇ ಮತ್ತು ಸಿಇಟಿ ತರಬೇತಿಯನ್ನು ಯಾವ ಸಂಸ್ಥೆಯ ಮೂಲಕ ನೀಡಲಾಗುತ್ತಿದೆ ; ಸದರಿ ಸಂಸ್ಥೆಯು ನೀಟ್, ಜೆಇಇ ಮತ್ತು ಸಿಇಟಿ ಶಿಕ್ಷಣ ಸಂಸ್ಥೆಗಳಿಗೆ ಆಯ್ಕೆಯಾಗಿರುತ್ತಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಇಲಾಖಾ ಪ್ರಧಾನ ಕಾರ್ಯದರ್ಶಿಗಳ ಸೂಚನೆಯ ಮೇರೆಗೆ ಒರ್ವ ವ್ಯಕ್ತಿ ಹಾಗೂ ಸಂಸ್ಥೆಗೆ ಅನ್ವಯವಾಗುವ ನಿಟ್ಟಿನಲ್ಲಿ ನೀಟ್, ಜೆಇಇ ಮತ್ತು ಸಿಇಟಿ ಪರೀಕ್ಷೆಗೆ ಹಾಜರಾಗುವ ತರಬೇತಿ ನೀಡುವ

ಸಂಸ್ಥೆಯು ಆಯ್ಕೆಗಾಗಿ ಟೆಂಡರ್ ನಿಯುಮಾವಳಿಗಳನ್ನು ಬದಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಈ) ಇಲಾಖಾ ಪ್ರಧಾನ ಕಾರ್ಯದರ್ಶಿಗಳು ತಮ್ಮ ಆತ್ಮೀಯರ ಅಥವಾ ತಮಗೆ ಬೇಕಾದವರ ಸಂಸ್ಥೆಯೇ ಆಯ್ಕೆಯಾಗಬೇಕು ಎನ್ನುವ ಕಾರಣಕ್ಕಾಗಿ ಟೆಂಡರ್ ನಿಯಮಗಳನ್ನು ಬದಲಾಯಿಸುವಂತೆ ಸೂಚಿಸಿರುವ ಆರೋಪದ ಕುರಿತ ಸರ್ಕಾರದ ನಿಲುವೇನು; ಈ ಭ್ರಷ್ಟಾಚಾರಕ್ಕೆ ಕಾರಣಕರ್ತರು ಯಾರು ? (ವಿವರ ನೀಡುವುದು)

## ರೈತರ ಪರಿಹಾರದಲ್ಲಿ ಅಕ್ರಮ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೦ (೩೦೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರೈತ ಸಂಪರ್ಕ ಕೇಂದ್ರಗಳಲ್ಲಿ ಸಂಗ್ರಹವಾಗುವ ಸೇವಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡದೇ ಭ್ರಷ್ಟಾಚಾರವೆಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಭ್ರಷ್ಟಾಚಾರವೆಸಗಿದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; ಇವರುಗಳ ವಿರುದ್ಧ ಕ್ರಿಮಿನಲ್ ಕೇಸು ದಾಖಲು ಮಾಡಲಾಗಿದೆಯೇ ;

(ಆ) ಬಡ ರೈತರಿಗೆ ಪರಿಹಾರ ವಿತರಣೆಯಲ್ಲಿಯೂ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಚಿಕ್ಕಮಗಳೂರು ಜಿಲ್ಲೆ ಕಡೂರು ತಾಲ್ಲೂಕಿನ ಚೌಳ ಹಿರಿಯೂರು ಹೋಬಳಿಯ ಕಲ್ಕೆರೆ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ೬ ಕೋಟಿಗೂ ಹೆಚ್ಚು ಮೊತ್ತದ ಅವ್ಯವಹಾರವಾಗಿದ್ದು, ಇದಕ್ಕೆ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ? (ವಿವರ ನೀಡುವುದು)

## ಹಾಸ್ಟೆಲ್‌ನಲ್ಲಿ ನೀಡುವ ಆಹಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೧ (೩೦೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡ/ಪರಿಶಿಷ್ಟ ಜಾತಿಯ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಯಾವ ರೀತಿಯ ಆಹಾರ ವ್ಯವಸ್ಥೆಯನ್ನು ಮಾಡಲಾಗಿದೆ; ಊಟ ಮತ್ತು ತಿಂಡಿಗಳನ್ನು ತಯಾರಿಸಲು ಯಾವ ಯಾವ ವಸ್ತುಗಳನ್ನು ಸರ್ಕಾರ ಹಾಸ್ಟೆಲ್‌ಗಳಿಗೆ ಸರಬರಾಜು ಮಾಡುತ್ತಿದೆ ; (ವಸ್ತುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಪರಿಶಿಷ್ಟ ಪಂಗಡ/ಪರಿಶಿಷ್ಟ ಜಾತಿಯ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸಲು ಎಷ್ಟು ಪ್ರಮಾಣದಲ್ಲಿ ಯಾವ ಯವ ವಸ್ತುಗಳನ್ನು ಖರೀದಿಸಲಾಗುತ್ತದೆ; (ವಸ್ತುವಾರು ವಿವರ ನೀಡುವುದು)

(ಇ) ಪರಿಶಿಷ್ಟ ಪಂಗಡ/ಪರಿಶಿಷ್ಟ ಜಾತಿಯ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸುವ ಆಹಾರ ಮತ್ತು ಇತರ ವಸ್ತುಗಳನ್ನು ಸರ್ಕಾರವು ಖರೀದಿಸುವಾಗ ಪ್ರತಿ ಕೆ.ಜಿ/ಅಥವಾ ಪ್ರತಿ ವಸ್ತುವಿಗೆ

ನಿಗದಿಪಡಿಸಲಾದ ದರವೆಷ್ಟು ? (ಸರಬರಾಜುದಾರರು ಮತ್ತು ಸಾಗಾಣಿಕೆದಾರರ ಹೆಸರು ಮತ್ತು ಸಂಪೂರ್ಣ ವಿವರದೊಂದಿಗೆ ವಸ್ತುವಾರು ವಿವರ ನೀಡುವುದು)

## ಹಾಸ್ಟೆಲ್‌ನಲ್ಲಿ ನೀಡುವ ಆಹಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೨ (೩೦೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ಯಾವ ರೀತಿಯ ಆಹಾರ ವ್ಯವಸ್ಥೆಯನ್ನು ಮಾಡಲಾಗಿದೆ; ಊಟ ಮತ್ತು ತಿಂಡಿಗಳನ್ನು ತಯಾರಿಸಲು ಯಾವ ಯಾವ ವಸ್ತುಗಳನ್ನು ಹಾಸ್ಟೆಲ್‌ಗಳಿಗೆ ಸರಬರಾಜು ಮಾಡುತ್ತಿದೆ ; (ವಸ್ತುವಾರು ವಿವರ ನೀಡುವುದು)

(ಆ) ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸಲು ಎಷ್ಟು ಪ್ರಮಾಣದಲ್ಲಿ ಯಾವ ಯಾವ ವಸ್ತುಗಳನ್ನು ಖರೀದಿಸಲಾಗುತ್ತದೆ ; (ವಸ್ತುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಹಾಸ್ಟೆಲ್‌ಗಳ ವಿದ್ಯಾರ್ಥಿಗಳಿಗೆ ವಿತರಿಸುವ ಆಹಾರ ಮತ್ತು ಇತರ ವಸ್ತುಗಳನ್ನು ಸರ್ಕಾರವು ಖರೀದಿಸುವಾಗ ಪ್ರತಿ ಕೆ.ಜಿ/ಅಥವಾ ಪ್ರತಿ ವಸ್ತುವಿಗೆ ನಿಗದಿಪಡಿಸಲಾದ ದರವೆಷ್ಟು ? (ಸರಬರಾಜುದಾರರು ಮತ್ತು ಸಾಗಾಣಿಕೆದಾರರ ಹೆಸರು ಮತ್ತು ಸಂಪೂರ್ಣ ವಿವರದೊಂದಿಗೆ ವಸ್ತುವಾರು ವಿವರ ನೀಡುವುದು)

## ಲ್ಯಾಪ್‌ಟಾಪ್ ಖರೀದಿ ಕುರಿತು

**ಶ್ರೀ ಎಸ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೪೩ (೩೦೬) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯು ಮಾರುಕಟ್ಟೆ ದರಕ್ಕಿಂತ ದುಪ್ಪಟ್ಟು ದರಕ್ಕೆ ಲ್ಯಾಪ್‌ಟಾಪ್ ಖರೀದಿಸಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ; ಈ ಅಕ್ರಮಕ್ಕೆ ಕಾರಣರಾದ ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆಯೇ ; (ವಿವರ ನೀಡುವುದು)

(ಆ) ೭೦೦೦ ಲ್ಯಾಪ್‌ಟಾಪ್‌ಗಳನ್ನು ಯಾವ ಕಾರಣಕ್ಕೆ ಖರೀದಿಸಲಾಗಿರುತ್ತದೆ ; (ವಿವರ ನೀಡುವುದು)

(ಇ) ೭೦೦೦ ಲ್ಯಾಪ್‌ಟಾಪ್ ಗಳನ್ನು ಕಾರ್ಮಿಕರ ಮಕ್ಕಳಿಗೆ ವಿತರಿಸಲು ಖರೀದಿಸಿದಲ್ಲಿ, ಯಾವ ಫಲಾನುಭವಿಗಳಿಗೆ ವಿತರಿಸಲಾಗಿದೆಯೋ ಅವರ ಆಧಾರ್ ಕಾರ್ಡ್ ವಿವರದೊಂದಿಗೆ ಸಮಗ್ರ ಮಾಹಿತಿ ನೀಡುವುದು ;

(ಈ) ಈ ಹಗರಣಕ್ಕೆ ಕಾರಣರಾದವರ ಮೇಲೆ ಕ್ರಿಮಿನಲ್ ಪ್ರಕರಣ ದಾಖಲು ಮಾಡದಿರಲು ಕಾರಣವೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ತೆರೆದ ತಂಗುದಾಣಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೪೪ (೫೬೦) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ತೆರೆದ ತಂಗುದಾಣಗಳ ಸಂಖ್ಯೆ ಎಷ್ಟು ;

(ಆ) ಪ್ರಾರಂಭದಿಂದ ಇಲ್ಲಿಯವರೆಗೂ ಪ್ರತಿ ತಂಗುದಾಣಗಳಿಗೆ ಕರೆತಂದ ಮಕ್ಕಳ ಸಂಖ್ಯೆ ಎಷ್ಟು; ಈ ತಂಗುದಾಣಗಳು ಜಿಲ್ಲೆಯಲ್ಲಿ ಯಾವ ಅಧಿಕಾರಿಯ ಅಧೀನದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತವೆ ; ಸದರಿ ಅಧಿಕಾರಿಯ ಪದನಾಮ ಸಹಿತ ವಿವರ ನೀಡುವುದು ;

(ಇ) ತೆರೆದ ತಂಗುದಾಣಗಳಿಗೆ ಪ್ರತಿ ವರ್ಷ ಸರ್ಕಾರ ನೀಡುತ್ತಿರುವ ಅನುದಾನ ಎಷ್ಟು ; (ಪ್ರಾರಂಭದಿಂದ ಇಲ್ಲಿಯವರೆಗಿನ ಸಮಗ್ರ ಮಾಹಿತಿ ನೀಡುವುದು ;

(ಈ) ಸರ್ಕಾರಕ್ಕೆ ಅಂಕಿ-ಅಂಶಗಳ ತಪ್ಪು ಮಾಹಿತಿ ನೀಡಿ, ನಕಲಿ ದಾಖಲಾತಿಗಳನ್ನು ಸೃಷ್ಟಿದ ತಂಗುದಾಣಗಳ ಸಂಖ್ಯೆ ಎಷ್ಟು ; ಅಂತಹವರ ಮೇಲೆ ಯಾವ ರೀತಿಯ ಕ್ರಮ ಕೈಗೊಂಡಿದೆ ? (ವಿವರ ನೀಡುವುದು)

## ಬಳ್ಳಾರಿ ಜಿಲ್ಲಾ ಬಾಲ ಭವನ ನಿರ್ಮಾಣಕ್ಕೆ ಶೀಘ್ರ ಕ್ರಮಕೈಗೊಳ್ಳುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೪೫ (೪೬೪) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಳ್ಳಾರಿ ಜಿಲ್ಲಾ ಬಾಲ ಭವನದ ಸ್ವಂತ ಕಟ್ಟಡ ನಿರ್ಮಾಣದ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ಬಳ್ಳಾರಿ ಜಿಲ್ಲಾ ಬಾಲ ಭವನಕ್ಕೆ ಸರ್ಕಾರವು ಭೂಮಿಯನ್ನು ನೀಡಿದ್ದಲ್ಲಿ ಖಾಸಗಿ ಸಂಸ್ಥೆಗಳು ಸಿ.ಎಸ್.ಆರ್ ನಿಧಿಯಲ್ಲಿ ಕಟ್ಟಡ ನಿರ್ಮಾಣಕ್ಕೆ ತಯಾರಿದ್ದು ಈ ಬಗ್ಗೆ ಸರ್ಕಾರ ಗಮನ ಹರಿಸುವುದೇ ; (ಮಾಹಿತಿ ನೀಡುವುದು)

(ಇ) ಸಿರಗುಪ್ಪ ರಸ್ತೆಯಲ್ಲಿನ ಸರ್ವೆ ನಂ.೩೭೬/೧ ಇಲಾಖೆಯ ೪.೫ ಎಕರೆ ಜಾಗವಿದ್ದು ಇಲ್ಲಿ ಬಾಲ ಭವನ ನಿರ್ಮಾಣಕ್ಕೆ ಜಿಲ್ಲಾ ಬಾಲ ಭವನ ಸಮಿತಿಯವರು ಶಿಫಾರಸ್ಸು ಮಾಡಿ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಕಳುಹಿಸಿದ್ದು, ಇದರ ಪ್ರಗತಿ ಯಾವ ಯಂತದಲ್ಲಿದೆ ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಭಾಗ್ಯಲಕ್ಷ್ಮಿ ಯೋಜನೆಯು ಸಮರ್ಪಕವಾಗಿ ಅನುಷ್ಠಾನವಾಗದಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೪೬ (೪೬೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಹೆಣ್ಣು ಮಕ್ಕಳಿಗೆ ನೀಡಲಾಗುತ್ತಿದ್ದ ಭಾಗ್ಯಲಕ್ಷ್ಮಿ ಯೋಜನೆಯನ್ನು ಮುಂದುವರೆಸಲಾಗಿದೆಯೇ ಹಾಗಿದ್ದಲ್ಲಿ, ಯಾರ ಮೂಲಕ ಯಾವ ರೀತಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ಮಾಹಿತಿ ನೀಡುವುದು)

(ಆ) ಭಾಗ್ಯಲಕ್ಷ್ಮಿ ಯೋಜನೆಯುಡಿಯುಲ್ಲಿ ಪ್ರಸ್ತುತ ಸಾಲಿನಲ್ಲಿ ಇಲ್ಲಿಯವರೆಗೂ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಎಷ್ಟು ಅರ್ಜಿಗಳು ಅರ್ಹವಾಗಿವೆ; ಅವುಗಳಿಗೆ ಬಾಂಡ್‌ಗಳನ್ನು ನೀಡಲಾಗಿದೆಯೇ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಈ ಭಾಗ್ಯಲಕ್ಷ್ಮಿ ಯೋಜನೆಯಡಿಯಲ್ಲಿ ಸಲ್ಲಿಕೆಯಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಬಾಂಡ್‌ಗಳನ್ನು ವಿತರಿಸಿರುವ ಮತ್ತು ವಿತರಸದೇ ಇರುವವರ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಈ) ಈ ಭಾಗ್ಯಲಕ್ಷ್ಮಿ ಯೋಜನೆಯಲ್ಲಿ ಒಂದು ಅರ್ಹ ಹೆಣ್ಣು ಮಗುವಿಗೆ ಸರ್ಕಾರ ನೀಡುತ್ತಿರುವ ಹಣ ಎಷ್ಟು ಹಾಗೂ ಆ ಮಗು ವಯಸ್ಸಿಗೆ ಬಂದಾಗ ಸಿಗುವ ಹಣ ಎಷ್ಟು ; (ಮಾಹಿತಿ ನೀಡುವುದು)

(ಉ) ಈ ಭಾಗ್ಯಲಕ್ಷ್ಮಿ ಯೋಜನೆಗೆ ಸರ್ಕಾರ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಒಟ್ಟು ಅನುದಾನ ಎಷ್ಟು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿನ ಅಂಗವಿಕಲರುಗಳಿಗೆ ಹೆಚ್ಚಿನ ಸೌಲಭ್ಯದೊಂದಿಗೆ ದುರುಪಯೋಗ ತಡೆಯುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೪೭ (೪೭೫) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಂಗವಿಕಲರುಗಳ ಸಂಖ್ಯೆಯ ಲೆಕ್ಕವನ್ನು ಮಾಡಲಾಗಿದೆಯೇ ; ಹಾಗಿದ್ದಲ್ಲಿ, ಜಿಲ್ಲಾವಾರು ಅಂಗವಿಕಲರುಗಳು ಮತ್ತು ಅವರುಗಳು ಹೊಂದಿರುವ ಶೇಕಡವಾರು ಅಂಗವಿಕಲತೆಯ ವಿವರಗಳ ಮಾಹಿತಿಯನ್ನು ನೀಡುವುದು ;

(ಆ) ಈ ಅಂಗವಿಕಲರುಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ನೀಡಲಾಗುವ ಸವಲತ್ತುಗಳಾವುವು ; (ಸರ್ಕಾರಿ ಆದೇಶಗಳ ಪ್ರತಿಗಳೊಂದಿಗೆ ಮಾಹಿತಿ ನೀಡುವುದು)

(ಇ) ಶೇ 40 ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವವರಿಗೆ ಹೆಚ್ಚಿನ ಸವಲತ್ತುಗಳನ್ನು ನೀಡಲು ಅಂಗವಿಕಲರ ಕಲ್ಯಾಣ ಇಲಾಖೆಯ ಪ್ರಯತ್ನಗಳೇನು; ಈ ಬಗ್ಗೆ ಸರ್ಕಾರಕ್ಕೆ ಯಾವುದಾದರೂ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ ; (ಮಾಹಿತಿ ನೀಡುವುದು)

(ಈ) ಅಂಗವಿಕಲರ ಮೀಸಲಾತಿಯಲ್ಲಿ ಲಭ್ಯವಿರುವ ವಿವಿಧ ಕೋಟಾದಡಿಯಲ್ಲಿ ಶ್ರವಣ ವೈಕಲ್ಯದ ಪ್ರಕರಣಗಳಲ್ಲಿ ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರದ ಕ್ರಮಗಳೇನು ? (ಮಾಹಿತಿ ನೀಡುವುದು)

## ಕೆ.ಕೆ.ಆರ್.ಡಿ.ಬಿ ಮಂಡಳಿಯಿಂದ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಹೆಚ್ಚು ಒತ್ತು ನೀಡುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

ಳಳಲ (ರ್೯೫) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೆ.ಕೆ.ಆರ್.ಡಿ.ಬಿ ಮಂಡಳಿಯಿಂದ ಕಳೆದ ಮೂರು ವರ್ಷಗಳಲ್ಲಿ ಆ ಭಾಗದ ಎಷ್ಟು ಜಿಲ್ಲೆಗಳಲ್ಲಿ ಎಷ್ಟು ಶಾಲಾ ಕಟ್ಟಡಗಳ ನಿರ್ಮಾಣ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ಶಾಲಾ ಕಟ್ಟಡಗಳ ನಿರ್ಮಾಣ/ಅಭಿವೃದ್ಧಿಗೆ ನೀಡಲಾದ ಅನುದಾನ ಎಷ್ಟು ; ಇವುಗಳಲ್ಲಿ ಎಷ್ಟು ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ ; ಅವುಗಳ ಹೆಸರು ಕೈಗೊಂಡ ಕಾಮಗಾರಿಗಳು ಖರ್ಚು ಮಾಡಲಾದ ವೆಚ್ಚ ವಿವರಗಳನ್ನು ತಾಲ್ಲೂಕುವಾರು ಮಾಹಿತಿಯೊಂದಿಗೆ ಒದಗಿಸುವುದು ;

(ಇ) ಕೆ.ಕೆ.ಆರ್.ಡಿ.ಬಿ ಅನುದಾನವನ್ನು ಹೆಚ್ಚಿನ ಭಾಗ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಲು ಮತ್ತು ಶಾಲೆಗಳಿಗೆ ಮೂಲ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ? (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು)

## ರಾಜ್ಯದಲ್ಲಿ ನಶಿಸಿ ಹೋಗುತ್ತಿರುವ ಕಲೆ, ಸಂಸ್ಕೃತಿಗಳನ್ನು ಉಳಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :-**

೪೪೯ (೪೬೬) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಾಂಪ್ರದಾಯಕವಾಗಿ ಕುಸ್ತಿ ಕಲಿಸುವ ಗರಡಿ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನಶಿಸಿ ಹೋಗುತ್ತಿರುವ ಈ ಸಾಂಪ್ರದಾಯಕ ಕುಸ್ತಿ ಗರಡಿ ಮನೆಗಳಿಗೆ ಸರ್ಕಾರದಿಂದ ನೀಡುತ್ತಿರುವ ಸಹಾಯ/ಸೌಲಭ್ಯಗಳೇನು ; (ಮಾಹಿತಿ ನೀಡುವುದು)

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ರಾಜ್ಯದಲ್ಲಿ ನಶಿಸಿ ಹೋಗುತ್ತಿರುವ ಈ ಕಲೆಗಳನ್ನು ಉಳಿಸಲು ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

# ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ಸಿಬ್ಬಂದಿಯ ನೇಮಕಾತಿ ಹಾಗೂ ಆರ್‌ಡಿಪಿಆರ್ ಸ್ನಾತಕೋತ್ತರ ಅಧ್ಯಯನ ಮಾಡಿದ ವಿದ್ಯಾರ್ಥಿಗಳಿಗೆ ಆರ್‌ಡಿಪಿಆರ್ ಇಲಾಖೆಯಲ್ಲಿ ನೇಮಕಾತಿ ಬಗ್ಗೆ

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :-

೪೫೦ (೫೨೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ, ಇದು ಯಾವ ವರ್ಷ ಕಾರ್ಯಾರಂಭ ಮಾಡಿದೆ ;

(ಆ) ಈ ಒಂದು ವಿಶ್ವವಿದ್ಯಾಲಯಕ್ಕೆ ಮಂಜೂರಾದ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ಮತ್ತು ಖಾಯಂ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಎಷ್ಟು ಹುದ್ದೆಗಳಿಗೆ ಹಾಗೂ ಯಾವಾಗ ಅನುಮತಿ ನೀಡಿದೆ ; (ಮಾಹಿತಿ ನೀಡುವುದು)

(ಇ) ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯದಲ್ಲಿ ಖಾಯಂ ಆಧಾರದ ಮೇಲೆ ಹುದ್ದೆ ತುಂಬಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ ; ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ ;

(ಈ) ಗ್ರಾಮೀಣ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕವಾಗಿ/ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಉ) ಈ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕ ಆಧಾರದ ಮೇಲೆ ನೇಮಕಗೊಂಡು ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ

ಖಾಯಂ ಆಧಾರದ ಮೇಲೆ ನೇಮಕ ಮಾಡಿಕೊಳ್ಳುವ ಸಂದರ್ಭದಲ್ಲಿ ವಯೋಮಿತಿ ಸಡಿಲಿಕೆ ಹಾಗೂ ವೇಟೇಜ್ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ; (ಮಾಹಿತಿ ನೀಡುವುದು)

(ಊ) ಗ್ರಾಮೀಣ ವಿಶ್ವವಿದ್ಯಾಲಯದಲ್ಲಿ ಆರ್‌ಡಿಪಿಆರ್ ಸ್ನಾತಕೋತ್ತರ ಪದವಿ ಪಡೆದ ವಿದ್ಯಾರ್ಥಿಗಳಿಗೆ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಹಾಗೂ ಎನ್‌ಆರ್‌ಎಲ್‌ಎಮ್ ಮತ್ತು ಮನರೇಗಾ ಯೋಜನೆಗಳಲ್ಲಿ ನೇಮಕಾತಿ ಮಾಡಿಕೊಳ್ಳುವಲ್ಲಿ ಆದ್ಯತೆ ನೀಡುವ ಕುರಿತು ರಚನೆಯಾದ ಸಮಿತಿ, ಸರ್ಕಾರಕ್ಕೆ ವರದಿ ಸಲ್ಲಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ರಾಜ್ಯದಲ್ಲಿರುವ ಬಾಲಾಪರಾಧಿಗಳ ಸಂಖ್ಯೆ ಹಾಗೂ ಆ ಪ್ರಕರಣಗಳು ಬಾಕಿ ಉಳಿದಿರುವ ಬಗ್ಗೆ

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೪೫೧ (೫೨೨) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ದಾಖಲಾದ ಬಾಲಾಪರಾಧಿಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಆ) ಇತ್ತೀಚೆಗೆ ಕೆಲವೊಂದು ದಿನಪತ್ರಿಕೆಗಳಲ್ಲಿ ಬಾಲಾಪರಾಧಿಗಳ ವಿಚಾರಣೆ ಕಾಲಮಿತಿ ಒಳಗೆ ಮುಗಿಯದಿರುವುದರಿಂದ, ಬಾಲ ಮಂದಿರಗಳೆಲ್ಲವೂ "ಹೌಸ್‌ಫುಲ್' ಆಗಿರುತ್ತವೆ ಎಂದು ವರದಿ ಆಗಿರುವುದು ನಿಜವೇ ; (ವಿವರ ನೀಡುವುದು)

(ಇ) ಬಾಲಾಪರಾಧಿಗಳ ವಿಚಾರಣೆ ನಡೆಸಲು ಎಲ್ಲಾ ಜಿಲ್ಲೆಗಳಲ್ಲಿ ಬಾಲ ನ್ಯಾಯ ಮಂಡಳಿ ಹಾಗೂ ಮಕ್ಕಳ ಕಲ್ಯಾಣ ಸಮಿತಿ ಪರಿಪೂರ್ಣವಾಗಿ ರಚನೆ ಆಗಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಮಕ್ಕಳ ಕಲ್ಯಾಣ ಸಮಿತಿ ಪರಿಪೂರ್ಣವಾಗಿ ರಚನೆ ಆಗದ ಕಾರಣ, ಸಾಕಷ್ಟು ಪ್ರಕರಣಗಳು ಬಾಕಿ ಉಳಿದಿವೆಯೆಂದು ಮತ್ತು ನ್ಯಾಯಯುತವಾಗಿ ನಿರ್ಣಯಗಳು ಆಗುತ್ತಿಲ್ಲವೆಂದು ಆಪಾದನೆಗಳಿರುವುದು ನಿಜವೇ ? (ಮಾಹಿತಿ ನೀಡುವುದು)

## ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿಗಳ ಅನುಷ್ಠಾನದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೨ (೪೫೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಗೆ ೨೦೨೦ ರಿಂದ ಇಲ್ಲಿಯವರೆಗೆ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಈಗಾಗಲೇ ಅಳವಡಿಸಲಾಗಿರುವ ಮತ್ತು ಅಳವಡಿಸಲು ಬಾಕಿ ಇರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; (ಸಂಪೂರ್ಣ ವಿವರವನ್ನು ತಾಲ್ಲೂಕುವಾರು ನೀಡುವುದು)

(ಇ) ಕೊಳವೆ ಬಾವಿಯನ್ನು ಕೊರೆಯುವ ಗುತ್ತಿಗೆಯನ್ನು ಯಾವ ಕಂಪನಿಗೆ ನೀಡಲಾಗಿದೆ ;

(ಈ) ಆಯಾ ಜಿಲ್ಲೆಯ ಕೊಳವೆ ಬಾವಿಗಳನ್ನು ಕೊರೆಯುವ ಗುತ್ತಿಗೆಯನ್ನು ಆಯಾ ಜಿಲ್ಲೆಯ ಗುತ್ತಿಗೆದಾರರಿಗೆ ವಹಿಸುವ ಯೋಜನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಕೇಂದ್ರ ಸರ್ಕಾರದ "ಜಲ ಜೀವನ್ ಮಿಷನ್" ಯೋಜನೆಯ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೩ (೪೫೧) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ "ಜಲ ಜೀವನ್ ಮಿಷನ್" ಯೋಜನೆಯಡಿಯಲ್ಲಿ ಕೊಡಗು ಜಿಲ್ಲೆಯ ಎಷ್ಟು ಮನೆಗಳಿಗೆ ನಲ್ಲಿ (ಕೊಳಾಯಿ) ಸಂಪರ್ಕದ ಮೂಲಕ ನೀರನ್ನು ಒದಗಿಸಲಾಗಿದೆ ;

(ಆ) ಸದರಿ ಯೋಜನೆಯಡಿಯಲ್ಲಿ ಕೊಡಗು ಜಿಲ್ಲೆಗೆ ಮಂಜೂರಾಗಿರುವ ಅನುದಾನ, ವಿನಿಯೋಗಿಸಲಾಗಿರುವ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯ ಗುತ್ತಿಗೆಯನ್ನು ಯಾವ ಕಂಪನಿಗೆ ನೀಡಲಾಗಿದೆ ; ಗುತ್ತಿಗೆಯನ್ನು ಪಡೆಯಲು ಇರುವ ಮಾನದಂಡಗಳೇನು ; ಗುತ್ತಿಗೆ ಪಡೆಯಲು ಸಲ್ಲಿಕೆಯಾಗಿರುವ ಪ್ರಸ್ತಾವನೆಗಳು ಎಷ್ಟು ;

(ಈ) ಒಂದು ಮನೆಗೆ ನಲ್ಲಿ ಸಂಪರ್ಕ ಒದಗಿಸಲು ತಗಲುವ ವೆಚ್ಚ ಎಷ್ಟು; ಕ್ರಿಯಾ ಯೋಜನೆಯನ್ನು ಒದಗಿಸುವುದು ;

(ಉ) ಸದರಿ ಯೋಜನೆಯ ಗುತ್ತಿಗೆಯನ್ನು ಮುಖ್ಯ ಗುತ್ತಿಗೆದಾರರು ಟೆಂಡರ್ ಸಲ್ಲಿಸಿ, ಗುತ್ತಿಗೆಯನ್ನು ಪಡೆದು ಬದಲಿ ಗುತ್ತಿಗೆದಾರರಿಗೆ

ಉಪ ಗುತ್ತಿಗೆಯನ್ನು ನೀಡುತ್ತಿರುವುದರಿಂದ ಕಳಪೆ ಗುಣಮಟ್ಟದ ಕಾಮಗಾರಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ?

## ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆಯ ಬಗ್ಗೆ

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೪ (೪೪೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು ; ಮತ್ತು ಅವು ಯಾವುವು ;

(ಆ) ಗ್ರಾಮ ಪಂಚಾಯಿತಿಗಳಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುತ್ತಿರುವ ಯೋಜನೆಗಳು ಯಾವುವು ; (ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಇ) ಗ್ರಾಮ ಪಂಚಾಯಿತಿಗಳ ಕಾರ್ಯನಿರ್ವಹಣೆಯ ಬಗ್ಗೆ ವಿಸ್ತೃತವಾದ ವಿವರಣೆ ಜೊತೆಗೆ ಯೋಜನೆಗಳನ್ನು ಜನರಿಗೆ ತಲುಪಿಸುವ ಸಂಬಂಧ ಅನುದಾನವನ್ನು ಯಾವ ರೀತಿ ಉಪಯೋಗಿಸಿಕೊಳ್ಳುತ್ತದೆಂಬ ಬಗ್ಗೆ ಮಾಹಿತಿಯನ್ನು ನೀಡುವುದು ;

(ಈ) ಗ್ರಾಮ ಪಂಚಾಯಿತಿಗಳಿಗೆ ಸರ್ಕಾರದಿಂದ ನೀಡಲಾಗುವ ಅನುದಾನ ಎಷ್ಟು ; ಎಷ್ಟು ತಿಂಗಳಿಗೊಮ್ಮೆ ಸದರಿ ಪಂಚಾಯಿತಿಗಳಿಗೆ ಎಷ್ಟು ಮೊತ್ತದ ಅನುದಾನವನ್ನು ನೀಡಲಾಗುತ್ತದೆ ; ರಾಜ್ಯ ಹಾಗೂ ಕೇಂದ್ರ ಸರ್ಕಾರದ ವತಿಯಿಂದ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಲಾಗುವುದೇ ; ಹಾಗಿದ್ದಲ್ಲಿ, ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಅನುದಾನದ ವಿವರವನ್ನು ಒದಗಿಸುವುದು ?

# ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ೨೦೨೦-೨೧ ಹಾಗೂ ೨೦೨೧-೨೨ನೇ ಸಾಲಿನಲ್ಲಿ ನಡೆದಿರುವ ಅವ್ಯವಹಾರದ ಬಗ್ಗೆ

**ಶ್ರೀ ಹೆಚ್.ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು) :-**

೪೫೫ (೩೨೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಭೋವಿ ಅಭಿವೃದ್ಧಿ ನಿಗಮದಲ್ಲಿ ೨೦೨೦-೨೧ ಹಾಗೂ ೨೦೨೧-೨೨ನೇ ಸಾಲಿನಲ್ಲಿ ನಡೆದಿರುವ ಬೃಹತ್ ಅವ್ಯವಹಾರಕ್ಕೆ ಸಂಬಂಧಿಸಿದಂತೆ ಸಿ.ಐ.ಡಿ. ತನಿಖಾ ವರದಿಯಲ್ಲಿ ಹೆಸರಿಸಲಾದ ಆರೋಪಿಗಳು ಯಾರು ; (ಹೆಸರು, ಹುದ್ದೆ ಹಾಗೂ ಅವ್ಯವಹಾರಕ್ಕೆ ಸಂಬಂಧಿಸಿದಂತೆ, ದುರ್ಬಳಕೆಗೊಂಡ ಸರ್ಕಾರದ ಒಟ್ಟು ಹಣದ ವಿವರ ಒದಗಿಸುವುದು)

(ಆ) ದುರ್ಬಳಕೆಯಾದ ಒಟ್ಟು ಹಣದಲ್ಲಿ ಇದುವರೆಗೆ ಎಷ್ಟು ಹಣ ವಶಪಡಿಸಿಕೊಳ್ಳಲಾಗಿದೆ ಹಾಗೂ ಆಪಾದಿತರ ವಿರುದ್ಧ ಕೈಗೊಂಡಿರುವ ಕ್ರಮಗಳಾವುವು ; (ವಿವರ ಒದಗಿಸುವುದು)

(ಇ) ಸದರಿ ಅವ್ಯವಹಾರಕ್ಕೆ ಸಂಬಂಧಿಸಿದ ಆಪಾದಿತರು ಸರ್ಕಾರಿ ಸೇವೆಯಲ್ಲಿ ಮುಂದುವರೆದಿದ್ದಾರೆಯೇ ; ಮುಂದುವರೆದಿದ್ದ ಪಕ್ಷದಲ್ಲಿ ಅವರ ಹೆಸರು ಹಾಗೂ ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಇಲಾಖೆ ಹಾಗೂ ಹುದ್ದೆಯ ವಿವರ ಒದಗಿಸುವುದು ;

(ಈ) ಪ್ರಸ್ತುತ ಸಾಲಿನಲ್ಲಿ ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಒದಗಿಸಲಾಗಿರುವ ಒಟ್ಟು ಹಣ ಎಷ್ಟು ಹಾಗೂ ಅವ್ಯವಹಾರ/ ದುರ್ಬಳಕೆ ತಡೆಯುವ ಸಂಬಂಧ ಸರ್ಕಾರದಿಂದ ಕೈಗೊಳ್ಳಲಾಗಿರುವ ಕ್ರಮಗಳು ಯಾವುವು ? (ವಿವರ ಒದಗಿಸುವುದು)

## ಕಲಾಮಂದಿರಗಳ ಅನುದಾನ ಮತ್ತು ಗಡಿನಾಡು ಕನ್ನಡಿಗರ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೭ (೫೦೪) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಡಿ ನಿರ್ಮಿಸಲಾದ ಕಲಾಮಂದಿರಗಳ ಸಂಖ್ಯೆ ಎಷ್ಟು ಎಲ್ಲಾ ಜಿಲ್ಲೆಗಳಲ್ಲಿ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಕಲಾಮಂದಿರ ನಿರ್ಮಾಣ ಆಗಿದೆಯೇ ಆಗಿದ್ದಲ್ಲಿ ಕಲಾಮಂದಿರ ನಿರ್ಮಾಣ ಆಗದಿರುವ ಜಿಲ್ಲೆಗಳ ಅಥವಾ ತಾಲ್ಲೂಕುಗಳು ಯಾವುವು ; (ಮಾಹಿತಿ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ಕಲಾ ಮಂದಿರ ನಿರ್ಮಾಣಕ್ಕಾಗಿ ಒದಗಿಸಲಾದ ಅನುದಾನ ಎಷ್ಟು ಖರ್ಚು ಮಾಡಿರುವ ಅನುದಾನ ಎಷ್ಟು ಯಾವ ಸಂಸ್ಥೆಯಿಂದ ಈ ಕಲಾಮಂದಿರಗಳನ್ನು ನಿರ್ಮಾಣ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಗಡಿನಾಡ ಕನ್ನಡಿಗರು ಮತ್ತು ಹೊರನಾಡ ಕನ್ನಡಿಗರಿಗಾಗಿ ಹಾಗೂ ಕನ್ನಡ ಭಾಷೆ ಅಭಿವೃದ್ಧಿಗಾಗಿ ಜಾರಿಗೆ ತರಲಾದ ಯೋಜನೆಗಳು ಯಾವುವು ; ಇದಕ್ಕೆ ಖರ್ಚು ಮಾಡಲಾದ ಅನುದಾನ ಎಷ್ಟು ; (ಕಳೆದ ಐದು ವರ್ಷಗಳ ಸಂಪೂರ್ಣ ಮಾಹಿತಿ ನೀಡುವುದು)

(ಈ) ರಂಗಮಂದಿರ ಮಾಶಾಸನ ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)

# ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆಯ ತರಬೇತಿ ಕೇಂದ್ರಗಳ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೫೭ (೫೦೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆಯಿಂದ ನಡೆಯುತ್ತಿರುವ ಹೊಲಿಗೆ ತರಬೇತಿ ಕೇಂದ್ರಗಳು ಎಷ್ಟು; ಅವುಗಳಲ್ಲಿ ಸುಸ್ಥಿತಿಯಲ್ಲಿರುವ ಕೇಂದ್ರಗಳು ಎಷ್ಟು ಮುಚ್ಚಲ್ಪಟ್ಟಿರುವ ಕೇಂದ್ರಗಳು ಎಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಕೇಂದ್ರಗಳಲ್ಲಿ ತರಬೇತಿ ಪಡೆಯಲು ನಿಗಧಿಪಡಿಸಿದ ಮಾನದಂಡವೇನು ತರಬೇತಿಯ ಸ್ವರೂಪ ಮತ್ತು ಅವಧಿಯ ಕುರಿತು ಸಂಪೂರ್ಣ ಮಾಹಿತಿ ನೀಡುವುದು ; ಕಳೆದ ಮೂರು ವರ್ಷಗಳಲ್ಲಿ ಈ ತರಬೇತಿ ಕೇಂದ್ರಗಳಿಗೆ ದಾಖಲಾದ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ವರ್ಷಗಳಲ್ಲಿ ಈ ಕೇಂದ್ರಗಳಿಂದ ತರಬೇತಿ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಕೇಂದ್ರಗಳಿಂದ ತರಬೇತಿ ಪಡೆದ ಎಷ್ಟು ಜನ ಫಲಾನುಭವಿಗಳು ಸ್ವ–ಉದ್ಯೋಗ ಮಾಡುತ್ತಿದ್ದಾರೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಈ ಕೇಂದ್ರಗಳಲ್ಲಿ ತರಬೇತಿ ಪಡೆದ ಫಲಾನುಭವಿಗಳಿಗೆ ಸರ್ಕಾರ ನೀಡುವ ಸಹಾಯಧನ ಮೊತ್ತ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಈ ಕೇಂದ್ರಗಳಿಗೆ ಸರ್ಕಾರ ನೀಡಿರುವ ಅನುದಾನ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ಇಲಾಖೆಯ ವಿವಿಧ ಯೋಜನೆಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೮ (೫೦೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಂದು ವರ್ಷಕ್ಕೆ ಬೇಕಾಗುವ ಯೂರಿಯಾ ಗೊಬ್ಬರದ ಬೇಡಿಕೆ ಎಷ್ಟು ; ಪ್ರಸಕ್ತ ವರ್ಷ ಬೇಡಿಕೆಯಂತೆ ಅಗತ್ಯ ಪ್ರಮಾಣದ ಯೂರಿಯಾ ಗೊಬ್ಬರ ರಾಜ್ಯಕ್ಕೆ ಪೂರೈಕೆ ಆಗಿದೆಯೇ: ಯಾವ ಯಾವ ಜಿಲ್ಲೆಗಳಿಗೆ ಎಷ್ಟು ಪ್ರಮಾಣದ ಗೊಬ್ಬರ ಸರಬರಾಜು ಮಾಡಲಾಗಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಪ್ರಸಕ್ತ ವರ್ಷದ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಬೀಜ ಅಗತ್ಯ ಪ್ರಮಾಣದಲ್ಲಿ ಸರಬರಾಜು ಆಗಿದೆಯೇ ; ಉತ್ತರ ಕರ್ನಾಟಕ ಹಾಗೂ ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚಾಗಿ ಬೆಳೆಯುವ ಹತ್ತಿ ಬೀಜ ಮಾರಾಟಗಾರರು ಕೃತಕ ಅಭಾವ ಸೃಷ್ಟಿಸಿ ಸರ್ಕಾರ ನಿಗಧಿಪಡಿಸಿರುವ ಬೆಲೆಗಿಂತ ಎರಡು ಮೂರು ಪಟ್ಟು ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು ; (ಮಾಹಿತಿ ನೀಡುವುದು)

(ಇ) ಕೃಷಿ ಇಲಾಖೆಯ ವಿವಿಧ ಯೋಜನೆಗಳೂ ಯಾವುವು: ಕಳೆದ ಮೂರು ವರ್ಷಗಳಿಂದ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ಜಿಲ್ಲಾವಾರು, ಯೋಜನಾವಾರು ಮಾಹಿತಿ ನೀಡುವುದು)

(ಈ) ರೈತರಿಗೆ ನೀಡುತ್ತಿರುವ ಕೃಷಿ ಉಪಕರಣಗಳನ್ನು ಯಾವ ಮಾನದಂಡದ ಮೇಲೆ ಮತ್ತು ಯಾವ ಸಂಸ್ಥೆಯಿಂದ ಖರೀದಿ

ಮಾಡಲಾಗಿದೆ: ಈ ಉಪಕರಣಗಳಿಗೆ ಸರ್ಕಾರದಿಂದ ಸಬ್ಸಿಡಿ ನೀಡಲಾಗಿದೆಯೇ ; ನೀಡಿದ್ದಲ್ಲಿ, ಅದರ ಪ್ರಮಾಣ ಎಷ್ಟು ; (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

(ಉ) ಕೇಂದ್ರ ಸರ್ಕಾರದ ಪುರಸ್ಕೃತ ಕೃಷಿ ಯೋಜನೆಗಳು ಯಾವುವು ; ಹಾಗೂ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಊ) ರಾಜ್ಯ ಸರ್ಕಾರ ಪುರಸ್ಕೃತ ಮತ್ತು ಕೇಂದ್ರ ಸರ್ಕಾರ ಪುರಸ್ಕೃತ ಜಂಟಿಯಾಗಿ ನಡೆಸುವ ಯೋಜನೆಗಳು ಯಾವುವು ? (ಫಲಾನುಭವಿಗಳ ಹೆಸರು ನೀಡುವುದು)

## ಕಾರ್ಮಿಕರ ಹಾಲಿ ವೇತನ ಹಾಗೂ ಶೈಕ್ಷಣಿಕ ಅಭಿವೃದ್ಧಿ ಕುರಿತು

**ಶ್ರೀ ಸುನೀಲ್ ವಲ್ಯಾಪುರ್(ವಿಧಾನಸಭೆಯಿಂದ ಚುನಾಯಿತರಾದವರು) :-**

೪೫೫ (೫೦೭) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಸಂಘಟಿತ ವಲಯದಲ್ಲಿ ದುಡಿಯುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; ಯಾವ ಯಾವ ವಲಯಗಳಲ್ಲಿ ಎಷ್ಟು ಅಸಂಘಟಿತ ಕಾರ್ಮಿಕರು ದುಡಿಯುತ್ತಿದ್ದಾರೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಾರ್ಮಿಕರ ಹಾಲಿ ನೀಡುತ್ತಿರುವ ವೇತನ ಹಾಗೂ ಅವರ ಅಭ್ಯುದಯಕ್ಕಾಗಿ ಜಾರಿಗೆ ತರಲಾದ ಯೋಜನೆಗಳು ಯಾವುವು ;

(ಇ) ಈ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಸರ್ಕಾರ ಜಾರಿಗೊಳಿಸಿದ ಯೋಜನೆಗಳು ಯಾವುವು ; ಇದಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಎಷ್ಟು ಹಣ ಮೀಸಲಿಡಲಾಗಿದೆ ಹಾಗೂ ಎಷ್ಟು ಹಣ ಖರ್ಚು ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಎಷ್ಟು ಜನ ಜೀತ ಕಾರ್ಮಿಕರನ್ನು ರಕ್ಷಿಸಲಾಗಿದೆ ; ಈ ಪೈಕಿ ಎಷ್ಟು ಕಾರ್ಮಿಕರಿಗೆ ಪುನರ್ ವಸತಿ ಕಲ್ಪಿಸಲಾಗಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೬೦ (೫೧೦) ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ಶಾಸಕರ ಕ್ಷೇತ್ರಗಳಿಗೆ ಅನುದಾನ ಬಿಡುಗಡೆಯಾಗುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅನುದಾನ ಬಿಡುಗಡೆಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಕಳೆದ ೫ ವರ್ಷಗಳಲ್ಲಿ ಬಯಲು ಸೀಮೆ ಅಭಿವೃದ್ಧಿ ಮಂಡಳಿಯಿಂದ ವಿಜಯಪುರ-ಬಾಗಲಕೊಟೆ ಮತ ಕ್ಷೇತ್ರಗಳ ವ್ಯಾಪ್ತಿಯ ಶಾಸಕರುಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವಿವರಗಳನ್ನು ಶಾಸಕರುಗಳವಾರು ನೀಡುವುದು)

(ಇ) ವಿಜಯಪುರ-ಬಾಗಲಕೊಟೆ ಮತಕ್ಷೇತ್ರಗಳ ಸ್ಥಳೀಯ ಸಂಸ್ಥೆಗಳ ಚುನಾವಣಾ ಕ್ಷೇತ್ರಗಳಲ್ಲಿ ಕಳೆದ ೫ ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳಾವುವು ? (ವಿವರ ನೀಡುವುದು)

## ೧೫ನೇ ಹಣಕಾಸು ಯೋಜನೆಯ ಅನುದಾನ ಬಿಡುಗಡೆಯ ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೬೧ (೫೦೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೧೫ನೇ ಹಣಕಾಸು ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಬಿಡುಗಡೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ವಿಳಂಬ ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ೧೫ನೇ ಹಣಕಾಸು ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಬಿಡುಗಡೆ ಮಾಡಲು ಅನುದಾನದ ಕೊರತೆ ಏನಾದರೂ ಇದೆಯೇ ; (ವಿವರ ನೀಡುವುದು)

(ಇ) ವಿಜಯಪುರ-ಬಾಗಲಕೋಟೆ ಜಿಲ್ಲೆಗಳಿಗೆ ೧೫ನೇ ಹಣಕಾಸು ಯೋಜನೆಯಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ? (ವಿವರಗಳನ್ನು ವರ್ಷವಾರು ಮತ್ತು ಗ್ರಾಮ ಪಂಚಾಯತಿವಾರು ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ತಾಲ್ಲೂಕು ಪಂಚಾಯತ್ ಜಿಲ್ಲಾ ಪಂಚಾಯತ್ ಚುನಾವಣೆಗಳ ಬಗ್ಗೆ

**ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೬೨ (೫೫೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕ್ಷೇತ್ರಗಳ ಸಂಖ್ಯೆ ಎಷ್ಟು; ಚುನಾಯಿತ ಪ್ರತಿನಿಧಿಗಳಿಲ್ಲಿದಿರುವುದರಿಂದ ಸಾಮಾನ್ಯ ನಾಗರಿಕರ ಕೆಲಸ ಕಾರ್ಯಗಳಿಗೆ ಅಡಚಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ರೀತಿ ಪರ್ಯಾಯ ವ್ಯವಸ್ಥೆ ಮಾಡಿದೆ ; (ವಿವರ ನೀಡುವುದು)

(ಆ) ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್‌ಗಳಿಗೆ ಚುನಾವಣೆ ನಡೆಸಲು ಸರ್ಕಾರಕ್ಕಿರುವ ಅಡೆ–ತಡೆಗಳೇನು ; ಇದನ್ನು ನಿವಾರಣೆ ಮಾಡಲು ಸರ್ಕಾರಕ್ಕೆ ಸಾಧ್ಯವಿಲ್ಲವೇ ; ಕಾನೂನಾತ್ಮಕ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಶೀಘ್ರ ಚುನಾವಣೆ ನಡೆಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ವಸತಿ ಯೋಜನೆಯಲ್ಲಿ ಗ್ರಾಮ ಪಂಚಾಯತ್‌ಗಳಿಗೆ ಮನೆಗಳ ಮಂಜೂರು ಕುರಿತು

**ಶ್ರೀ ಸುನೀಲ್‌ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬೩ (೫೦೮) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಗ್ರಾಮ ಪಂಚಾಯತ್‌ಗಳಿಗೆ ವಿವಿಧ ವಸತಿ ಯೋಜನೆ ಗಳಡಿಯಲ್ಲಿ ಮನೆಗಳು ಮಂಜೂರು ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮನೆಗಳನ್ನು ಮಂಜೂರು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಸ್ತುತ ಪ್ರತಿ ಗ್ರಾಮ ಪಂಚಾಯಿತಿಗೆ ೧೦೦ ಮನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಯಾವ ಕಾಲಮಿತಿಯೊಳಗೆ ಮನೆಗಳನ್ನು ಮಂಜೂರು ಮಾಡಲಾಗುವುದು ;

(ಇ) ಕಳೆದ ೫ ವರ್ಷಗಳಲ್ಲಿ ವಿಜಯಪುರ-ಬಾಗಲಕೋಟೆ ಜಿಲ್ಲೆಗಳ ಗ್ರಾಮ ಪಂಚಾಯತಿಗಳಿಗೆ ಮಂಜೂರು ಮಾಡಲಾದ ಮನೆಗಳೆಷ್ಟು; ಸದರಿ ಮನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ? (ಗ್ರಾಮ ಪಂಚಾಯತವಾರು ವಿವರ ನೀಡುವುದು)

## ಗೃಹಲಕ್ಷ್ಮಿ ಯೋಜನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೪೬೪ (೫೨೩) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಇದುವರೆಗೂ ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿಸಿಕೊಂಡ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿಸಿಕೊಳ್ಳಲು ಇರುವ ನಿಯಮ ಹಾಗೂ ಮಾನದಂಡಗಳೇನು ;

(ಇ) ಇದುವರೆಗೂ ಗೃಹಲಕ್ಷ್ಮಿ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಸಹಾಯ ಧನವನ್ನು ನೀಡಲಾಗಿದೆ ; ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಈ) ಗೃಹಲಕ್ಷ್ಮಿ ಯೋಜನೆಗೆ ಸರ್ಕಾರ ವಿನಿಯೋಗಿಸುತ್ತಿರುವ ಅನುದಾನ ಎಷ್ಟು ;

(ಉ) ಕಳೆದ ಲೋಕಸಭಾ ಚುನಾವಣೆಯಿಂದ ರಾಜ್ಯದ ಫಲಾನುಭವಿಗಳಿಗೆ ಸಹಾಯ ಧನ ಜಮೆಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಹಾಯಧನ ವಿಳಂಬಕ್ಕೆ ಕಾರಣವೇನು ; ಸರ್ಕಾರದಲ್ಲಿ ಅನುದಾನದ ಕೊರತೆ ಇದೆಯೇ ;

(ಊ) ಈ ಯೋಜನೆಗೆ ಅನುದಾನವನ್ನು ಹೇಗೆ ಬಳಸಲಾಗುತ್ತಿದೆ ; ಬೇರೆ ಬೇರೆ ಅಭಿವೃದ್ಧಿ ಕಾರ್ಯಗಳಿಗೆ ಹಾಗೂ ಗೃಹಲಕ್ಷ್ಮಿ ಯೋಜನೆಗೆ ಅನುದಾನದ ಜೋಡಣೆ ಹೇಗೆ ಮಾಡಲಾಗುತ್ತಿದೆ ;

(ಋ) ಯಾವ ಕಾಲಮಿತಿಯಲ್ಲಿ ಫಲಾನುಭವಿಗಳ ಖಾತೆಗಳಿಗೆ ಹಣವನ್ನು ಜಮಾ ಮಾಡಲಾಗುವುದು ? (ವಿವರ ನೀಡುವುದು)

## ರಾಜ್ಯದಲ್ಲಿನ ತೊಗರಿ ಬೆಳೆ ಉತ್ಪಾದನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೪೬೫ (೫೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಒಂದು ವರ್ಷದಲ್ಲಿ ರಾಜ್ಯದಲ್ಲಿ ಉತ್ಪಾದನೆಯಾದ ತೊಗರಿ ಪ್ರಮಾಣವೆಷ್ಟು ;

(ಆ) ಕಳೆದ ಒಂದು ವರ್ಷದಲ್ಲಿ ಕಲಬುರಗಿ ಜಿಲ್ಲೆಯೊಂದರಲ್ಲೇ ಬೆಳೆದ ತೊಗರಿ ಪ್ರಮಾಣ ಎಷ್ಟು ಹಾಗೂ ದರ ಹಾಗೂ ನಿಗದಿಪಡಿಸಿರುವ ಕನಿಷ್ಠ ಬೆಂಬಲ ಬೆಲೆ ಎಷ್ಟು ;

(ಇ) ರಾಜ್ಯದಲ್ಲಿ ತೊಗರಿ ಬೆಳೆಯ ಉತ್ಪಾದನೆಯನ್ನು ಹೆಚ್ಚಿಸಲು ಮತ್ತು ತೊಗರಿ ಬೆಳೆ ಆಮದನ್ನು ಕಡಿಮೆಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ತೊಗರಿ ಬೇಳೆಗೆ ಸಂಬಂಧಿಸಿದಂತೆ ತೊಗರಿ ಬೆಳೆಯುವ ಭಾಗದಿಂದ ಸರ್ಕಾರಕ್ಕೆ ಸಲ್ಲಿಸಿರುವ ಬೇಡಿಕೆಗಳು ಯಾವುವು ; ಈ ಬೇಡಿಕೆಗಳಲ್ಲಿ ಸರ್ಕಾರ ಇದುವರೆಗೂ ಎಷ್ಟು ಭರವಸೆಗಳನ್ನು ಈಡೇರಿಸಿದೆ ;

(ಉ) ಕಲಬುರಗಿ, ಬೀದರ್ ಜಿಲ್ಲೆಗಳಲ್ಲಿ ಕಳೆದ ವರ್ಷ ಸಿಡಿ ರೋಗದಿಂದ ಎಷ್ಟು ಪ್ರಮಾಣದ ಬೆಳೆ ನಾಶವಾಗಿದೆ ; ಸಿಡಿ ರೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುತ್ತಿರುವ ಉಚಿತ ತರಬೇತಿಯನ್ನು ಕೆಲವು ಅಭ್ಯರ್ಥಿಗಳು ದುರುಪಯೋಗ ಪಡಿಸಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :-**

೪೬೬ (೫೨೫) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನೀಡುವ ಉಚಿತ IAS, KAS, ಗ್ರೂಪ್ 'ಸಿ' ಹಾಗೂ ಬ್ಯಾಂಕಿಂಗ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತಿದೆಯೇ ; ಹಾಗಿದ್ದಲ್ಲಿ, ಪ್ರಸಕ್ತ ವರ್ಷದಲ್ಲಿ ಎಷ್ಟು ಜನ ವಿದ್ಯಾರ್ಥಿಗಳು ಉಚಿತ ತರಬೇತಿಯನ್ನು ಪಡೆಯುತ್ತಿದ್ದಾರೆ ;

(ಆ) ಕೆಲವು ಅಭ್ಯರ್ಥಿಗಳು ಇಲಾಖೆಯಿಂದ ಈಗಾಗಲೇ ಉಚಿತ ತರಬೇತಿಯನ್ನು ಪಡೆದಿದ್ದರೂ ಸಹ ಮತ್ತೊಮ್ಮೆ ಅವಕಾಶ ಪಡೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇಂತಹ ಪ್ರಕರಣಗಳಿಂದಾಗಿ ನಿಜವಾದ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗುವುದಿಲ್ಲವೇ ; (ವಿವರ ನೀಡುವುದು)

(ಇ) ಈ ಯೋಜನೆಯಡಿ ತರಬೇತಿ ಪಡೆಯುವ ವಿದ್ಯಾರ್ಥಿಗಳಿಗೆ ತರಬೇತಿ ಸಂದರ್ಭದಲ್ಲಿ ನೀಡುತ್ತಿರುವ ಸೌಲಭ್ಯಗಳೇನು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಈ ಯೋಜನೆಯಡಿ ತರಬೇತಿ ಪಡೆಯುತ್ತಿರುವ ಕೆಲವು ಅಭ್ಯರ್ಥಿಗಳು ಪ್ರತೀ ತಿಂಗಳು ಕೇವಲ (ಸ್ಟೈಫಂಡ್) ಸಹಾಯಧನವನ್ನು ಪಡೆದು ತರಗತಿಗಳಿಗೆ ಹಾಜರಾಗದೇ ಬಯೋಮೆಟ್ರಿಕ್ ಯಂತ್ರಗಳಲ್ಲಿ ತಮ್ಮ ಹಾಜರಾತಿಯನ್ನು ಸರ್ಕಾರಕ್ಕೆ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಇಂತಹ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸಮಾಜ ಕಲ್ಯಾಣ ಇಲಾಖೆಯಲ್ಲಿ ವಸತಿ ನಿಲಯಗಳ ದುಸ್ಥಿತಿ ಬಗ್ಗೆ

**ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೪೬೭ (೩೧೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿನ ಎಷ್ಟು ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ ;

(ಆ) ಈ ಪೈಕಿ ಯಾವ ವಸತಿ ನಿಲಯಗಳು ಸ್ವಂತ ಕಟ್ಟಡದಲ್ಲಿ ನಡೆಯುತ್ತಿವೆ ; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ವಸತಿ ನಿಲಯಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಲು ಸರ್ಕಾರ ಯಾವ ಕ್ರಮವನ್ನು ಕೈಗೊಳ್ಳಲಾಗಿದೆ ;

(ಇ) ಸದರಿ ವಸತಿ ನಿಲಯಗಳಿಗೆ ನಿಗದಿತ ಪ್ರಮಾಣದಲ್ಲಿ ಆಹಾರ ಸರಬರಾಜು ಆಗುತ್ತಿಲ್ಲವಾದ್ದರಿಂದ ವಸತಿ ನಿಲಯಗಳ ಮೇಲ್ವಿಚಾರಕರು ವಿದ್ಯಾರ್ಥಿಗಳನ್ನು ಸಮಾಧಾನಪಡಿಸಲು ಸಾಧ್ಯವಾಗುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ವಸತಿ ನಿಲಯಗಳಿಗೆ ಸರಬರಾಜು ಮಾಡುವ ಟೆಂಡರ್ ಪ್ರಕ್ರಿಯೆಯು ನಿಗದಿತ ಸಮಯದಲ್ಲಿ ನಡೆಯದೆ ಇರುವುದರಿಂದ ನಿಗದಿತ ಸಮಯದಲ್ಲಿ ನಡೆಸಲು ಯಾವ ಕ್ರಮಗಳನ್ನು ಸರ್ಕಾರ ತೆಗೆದುಕೊಂಡಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಉ) ಇಲಾಖಾ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳಲ್ಲಿನ ಖಾಲಿಯಿರುವ ಮೇಲ್ವಿಚಾರಕರ ಹುದ್ದೆಗಳನ್ನು ತುಂಬುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಸದರಿ ಪ್ರಸ್ತಾವನೆ ಯಾವ ಹಂತದಲ್ಲಿದೆ ? (ಮಾಹಿತಿ ನೀಡುವುದು)

## ಬುಡಕಟ್ಟು ಸಿದ್ದಿ ಜನಾಂಗದ ಸಂಸ್ಕೃತಿಯನ್ನು ಉಳಿಸಲು ತರಬೇತಿ ಕೇಂದ್ರಗಳ ಸ್ಥಾಪನೆ ಬಗ್ಗೆ

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೪೬೮ (೩೧೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬುಡಕಟ್ಟು ಸಿದ್ದಿ ಜನಾಂಗದವರಿಗೆ ಪರಿಸರ, ಕಲೆ ಮತ್ತು ಸಂಸ್ಕೃತಿಯ ಕುರಿತು ಹೆಚ್ಚಿನ ಮಾಹಿತಿ ಮತ್ತು ತರಬೇತಿಗಳನ್ನು ನೀಡಲು ತಾಲ್ಲೂಕು ಮಟ್ಟದಲ್ಲಿ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗುವುದೇ ;

(ಆ) ಬುಡಕಟ್ಟು ಸಿದ್ದಿ ಜನಾಂಗದ ಸಂಸ್ಕೃತಿ, ಪಾರಂಪರಿಕ ಕಲೆ ಮತ್ತು ಆಚಾರ ಪದ್ಧತಿಗಳನ್ನು ಉಳಿಸಿ ಬೆಳೆಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳು ಯಾವುವು ?

## ಕ್ರಿಮಿನಾಶಕಗಳ ಬಳಕೆ ಮತ್ತು ಕೊಟ್ಟಿಗೆ ಗೊಬ್ಬರ ಬಳಕೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೪೬೯ (೪೮೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಿಷೇಧಿತ ಕ್ರಿಮಿ ನಾಶಕಗಳ ಮತ್ತು ಕಳೆ ನಾಶಕಗಳ ಬಳಕೆ ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕೃಷಿ ಭೂಮಿಯಲ್ಲಿ ರಾಸಾಯನಿಕ ಗೊಬ್ಬರ ಬದಲು ಉತ್ತಮ ಬೆಳೆ ಪಡೆಯಲು ನ್ಯೂ ಯೂರಿಯಾ ಕೊಟ್ಟಿಗೆ ಗೊಬ್ಬರ ಬಳಕೆ ಮಾಡುವಂತೆ ರೈತರಿಗೆ ಜಾಗೃತಿ ಕಾರ್ಯಕ್ರಮಗಳನ್ನು ರೂಪಿಸಲು ಸರ್ಕಾರವು ಕ್ರಮವಹಿಸುವುದೆ ? (ಮಾಹಿತಿ ನೀಡುವುದು)

## ಧನಗರ ಗೌಳಿ ಜನಾಂಗದ ಜಾತಿಯ ಸಮಸ್ಯೆ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :–**

೪೭೦ (೪೮೨) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ, ಧಾರವಾಡ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಮತ್ತು ದಾವಣಗೆರೆ ಜಿಲ್ಲೆಗಳಲ್ಲಿ ವಾಸಿಸುವ ಪಾರಂಪಾರಿಕ ಅರಣ್ಯ ವಾಸಿಗಳಾದ ಪ್ರವರ್ಗ ೧ ರಲ್ಲಿ ಬರುವ ಗೌಳಿ (ಧನಗರ ಗೌಳಿ) ಜನಾಂಗವು ಅನೇಕ ವರ್ಷಗಳಿಂದ ಅನಕ್ಷರಸ್ಥರಾಗಿರುವ ಕಾರಣ ಗೊಲ್ಲ, ಕಾಡುಗೊಲ್ಲ, ಕಚ್ಚೆಗೌಳಿ, ಧನಗರ, ಮುಂತಾದ ಅನೇಕ ಬೇರೆ ಬೇರೆ ಜಾತಿಗಳ ಹೆಸರಿನಲ್ಲಿ ಜಾತಿ ಪ್ರಮಾಣ ಪತ್ರಗಳು ಪಡೆಯುತ್ತಿದ್ದು ಇದನ್ನು ಬಗೆಹರಿಸಲು ಇರುವ ಮಾರ್ಗಗಳು ಯಾವುವು ; (ಸಂಪೂರ್ಣವಿವರ ನೀಡುವುದು)

(ಆ) ಸದರಿ ಜಿಲ್ಲೆಗಳಲ್ಲಿ ಈ ಜನಾಂಗವು ಪ್ರವರ್ಗ ೧ ರಲ್ಲಿ ಇದ್ದರೆ ಬೆಳಗಾವಿ ಜಿಲ್ಲೆಯಲ್ಲಿ ಮಾತ್ರ ಕೆಲವು ಹಳ್ಳಿಗಳ ಜನರಿಗೆ ೨ಎ ನಲ್ಲಿ ಬರುವ ಧನಗರ ಎಂದು ಜಾತಿ ಪ್ರಮಾಣಪತ್ರ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು ; (ಮಾಹಿತಿ ನೀಡುವುದು)

(ಇ) ಗೌಳಿ ಸಮಾಜದ ಜಾತಿಯ ಬಗ್ಗೆ ಕುಲಶಾಸ್ತ್ರ ಅಧ್ಯಯನ ಮಾಡಿ ಎಲ್ಲರನ್ನೂ ಒಂದೆ ಜಾತಿಯಡಿ ತರಲು ಅವಕಾಶವಿದೆಯೇ ಇದ್ದಲ್ಲಿ, ಇದಕ್ಕಿರುವ ಸರ್ಕಾರದ ಮಾನದಂಡಗಳೇನು ? (ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ಕುಣಬಿ ಜನಾಂಗವನ್ನು ಪರಿಶಿಷ್ಠ ಪಂಗಡಕ್ಕೆ ಸೇರಿರುವ ಕುರಿತು

**ಶ್ರೀ ಶಾಂತಾರಾಮ್ ಬುಡ್ನ ಸಿದ್ದಿ (ನಾಮನಿರ್ದೇಶನ ಹೊಂದಿದವರು) :-**

೪೭೧ (೪೮೩) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಕುಣಬಿ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಪ್ರಯತ್ನಗಳು ಅನೇಕ ವರ್ಷಗಳಿಂದ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸ್ತುತ ಇದು ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಕಾರ್ಮಿಕ ಇಲಾಖೆಯ ಕಾರ್ಮಿಕ ಕಲ್ಯಾಣ ಮಂಡಳಿಯ ಹಣಕಾಸಿನ ದುರ್ಬಳಕೆ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೪೭೨ (೩೧೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರ್ಮಿಕ ಇಲಾಖೆಯ ಕಾರ್ಮಿಕ ಕಲ್ಯಾಣ ಮಂಡಳಿಗೆ ಕಳೆದ ೫ ವರ್ಷಗಳ ಸಾಲಿನಲ್ಲಿ ಕಟ್ಟಡ ನಿರ್ಮಾಣಗಳಿಂದ ಸೆಸ್ ರೂಪದಲ್ಲಿ ಸಂಗ್ರಹವಾದ ಹಣ ಎಷ್ಟು ; (ವಿವರ ನೀಡುವುದು)

(ಆ) ಸೆಸ್ ರೂಪದಲ್ಲಿ ಸಂಗ್ರಹವಾದ ಹಣವನ್ನು ಯಾವ ಯೋಜನೆಗಳಿಗೆ ಖರ್ಚು ಮಾಡಲಾಗಿದೆ ; (ವಿವರ ನೀಡುವುದು)

(ಇ) ಶ್ರಮ ಪಡುವ ಕಟ್ಟಡ ಕಾರ್ಮಿಕರ ಮಕ್ಕಳ ಕಲ್ಯಾಣಕ್ಕೆ/ವಿದ್ಯಾಭ್ಯಾಸಕ್ಕೆ ಖರ್ಚಾಗಬೇಕಾದ ಹಣವನ್ನು ಅಧಿಕಾರಿಗಳು ದುರ್ಬಳಕೆ/ದುಂದು ವೆಚ್ಚ ಮಾಡುತ್ತಿದ್ದಾರೆಂಬ ಆರೋಪಗಳಿಗೆ ಸರ್ಕಾರಕ್ಕೆ ಕೈಗೊಂಡ ಕ್ರಮಗಳೇನು ;

(ಈ) ಇತ್ತೀಚೆಗೆ ಕಾರ್ಮಿಕ ಇಲಾಖೆಗೆ ರಾಜ್ಯದ ಮಾನ್ಯ ಹೈಕೋರ್ಟ್ ಖಡಕ್ ತಾಕೀತ್ ಮಾಡಿದ ಮೇಲೆ ಕಾರ್ಮಿಕರ ಕಲ್ಯಾಣ ಮಂಡಳಿಯ ಹಣವನ್ನು ಸದುಪಯೋಗಪಡಿಸಲು ಕೈಗೊಂಡ ಕ್ರಮಗಳೇನು ?

## ಕರ್ನಾಟಕ ರಾಜ್ಯದಲ್ಲಿನ ವಸತಿ ಶಾಲೆಗಳಲ್ಲಿ ಪೋಕ್ಸೋ ಕೇಸ್ ದಾಖಲಾಗುತ್ತಿರುವ ಕುರಿತು

**ಡಾ॥ ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) :-**

೪೭೩ (೩೧೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಸುಮಾರು ೮೫೦ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರ ಮೇಲೆ ಆಗಿರುವ ಲೈಂಗಿಕ ಶೋಷಣೆಗಳು ಇಲ್ಲಿಯವರೆಗೆ ಎಷ್ಟು ದಾಖಲಾಗಿವೆ ;

(ಆ) ವಸತಿ ಶಾಲೆಗಳಲ್ಲಿ ವಿದ್ಯಾರ್ಥಿನಿಯರ ಮೇಲೆ ಹೆಚ್ಚು ಪೋಕ್ಸೋ ಕೇಸ್‌ಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಅದಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ವಸತಿ ಶಾಲೆಗಳಲ್ಲಿ ಹೆಚ್ಚು ಪೋಕ್ಸೋ ಕೇಸ್‌ಗಳು ದಾಖಲಾಗಲು ಕಾರಣಗಳೇನು ; ಇಲ್ಲಿಯವರೆಗೆ ಎಷ್ಟು ಪ್ರಕರಣಗಳಲ್ಲಿ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಈ) ವಸತಿ ಶಾಲೆಗಳಲ್ಲಿನ ವಿದ್ಯಾರ್ಥಿನಿಯರ ಸಂರಕ್ಷಣೆಗಾಗಿ ಸರ್ಕಾರವು ಕೈಗೊಂಡ ಮುಂಜಾಗ್ರತಾ ಕ್ರಮಗಳು ಯಾವುವು ? (ವಿವರ ನೀಡುವುದು)

# ಕೋಲಿ, ಕಬ್ಬಲಿಗ, ಬೆಸ್ತರನ್ನು ಎಸ್.ಟಿ. ಗೆ ಸೇರಿಸುವ ವಿಚಾರ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೪ (೩೧೦) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೋಲಿ, ಕಬ್ಬಲಿಗ, ಬೆಸ್ತರನ್ನು ಎಸ್.ಟಿ ಗೆ ಸೇರಿಸುವ ಕುರಿತು ಪ್ರಸ್ತಾವನೆಯು ಎಷ್ಟು ಬಾರಿ ರಾಜ್ಯದಿಂದ ಕೇಂದ್ರಕ್ಕೆ ಶಿಫಾರಸ್ಸು ಮಾಡಲಾಗಿದೆ ; (ಶಿಫಾರಸ್ಸು ಮಾಡಿದ ದಿನಾಂಕ ಮತ್ತು ಶಿಫಾರಸ್ಸಿನ ವಿವರ ಒದಗಿಸುವುದು)

(ಆ) ಸದರಿ ಪ್ರಸ್ತಾವನೆ ಕೇಂದ್ರದಿಂದ ರಾಜ್ಯ ಸರ್ಕಾರಕ್ಕೆ ಪುನಃ ವಾಪಾಸ್ಸು ಬಂದಿದ್ದು, ಕೇಂದ್ರ ಕೋರಿರುವ ಮಾಹಿತಿಯ ವಿವರಗಳೇನು ;

(ಇ) ಈ ಪ್ರಸ್ತಾವನೆಯನ್ನು ರಾಜ್ಯ ಸರ್ಕಾರ ಶೀಘ್ರವಾಗಿ ಕೇಂದ್ರಕ್ಕೆ ಕಳುಹಿಸಿ ಈ ಸಮಾಜದ ಬಹುದಿನದ ಈ ಬೇಡಿಕೆಯನ್ನು ಈಡೇರಿಸಲು ಆದ್ಯತೆಯ ಮೇಲೆ ಕ್ರಮ ಕೈಗೊಳ್ಳುವುದೇ ?

# ಅರಿವು ಶೈಕ್ಷಣಿಕ ಸಾಲ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೫ (೩೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಂಬಿಗರ ಚೌಡಯ್ಯ ನಿಗಮದಲ್ಲಿ ಅರಿವು ಶೈಕ್ಷಣಿಕ ಸಾಲಕ್ಕೆ ಬೆಸ್ತ, ಕೋಲಿ, ಕಬ್ಬಲಿಗ, ಅಂಬಿಗ ಈ ರೀತಿ ಬೆಸ್ತ ಸಮುದಾಯದ ಒಟ್ಟು ಎಷ್ಟು ವಿದ್ಯಾರ್ಥಿ/ವಿದ್ಯಾರ್ಥಿಯರು ಅರ್ಜಿ ಸಲ್ಲಿಸಿದ್ದಾರೆ ; (ಕಳೆದ ೩ ವರ್ಷದ ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಈ ಶೈಕ್ಷಣಿಕ ಸಾಲಕ್ಕೆ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವುದಕ್ಕೆ ಇರುವ ಮಾನದಂಡಗಳೇನು ; ಎಷ್ಟು ವಿದ್ಯಾರ್ಥಿಗಳಿಗೆ ಸಾಲ ಮಂಜೂರು ಮಾಡಲಾಗಿದೆ ; ಎಷ್ಟು ವಿದ್ಯಾರ್ಥಿಗಳಿಗೆ ಸಾಲ ಮಂಜೂರು ಮಾಡಿರುವುದಿಲ್ಲ ಈ ಯೋಜನೆಗೆ ಮೀಸಲಿಟ್ಟ ಹಣವೆಷ್ಟು ; ಈ ಹಣ ಸಂಪೂರ್ಣವಾಗಿ ಬಳಕೆಯಾಗಿದೆಯೇ ; (ವಿವರವಾದ ಮಾಹಿತಿ ಒದಗಿಸುವುದು)

(ಇ) ಸದರಿ ನಿಗಮಕ್ಕೆ ಬಿಡುಗಡೆಯಾದ ಹಣವೆಷ್ಟು ; ಈ ಮೊತ್ತವನ್ನು ಯಾವ ಯಾವ ಬ್ಯಾಂಕಿನಲ್ಲಿ ಇಡಲಾಗಿದೆ ; (ಹಣದ ಸಮೇತ ವಿವರ ಒದಗಿಸುವುದು)

(ಈ) ಸಮಾಜ ಕಲ್ಯಾಣ ಇಲಾಖೆ ಅಡಿ ಬರುವ ಯಾವ ಯಾವ ನಿಗಮದಲ್ಲಿ ಎಷ್ಟೆಷ್ಟು ಹಣದ ದುರ್ಬಳಕೆಯಾಗಿದೆ ? (ವಿವರವಾದ ಮಾಹಿತಿ ಒದಗಿಸುವುದು)

## ಕಲಬುರಗಿ ESI ಆಸ್ಪತ್ರೆ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :-**

೪೭೬ (೪೪೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲಬುರಗಿಯಲ್ಲಿ ಯಾವಾಗಿನಿಂದ ಇ.ಎಸ್.ಐ ಆಸ್ಪತ್ರೆ ಕಾರ್ಯನಿರ್ವಹಿಸುತ್ತಿದೆ ; ಈ ಆಸ್ಪತ್ರೆಯ ಧ್ಯೇಯೋದ್ದೇಶಗಳೇನು ;

(ಆ) ಈ ಆಸ್ಪತ್ರೆಗೆ ಪ್ರತಿ ವರ್ಷ ಸರಬರಾಜಾಗುತ್ತಿರುವ ಔಷಧಿ/ಸಲಕರಣೆಗೆ ತಗಲುವ ಮೊತ್ತವೆಷ್ಟು ; ಔಷಧಿಗಳ ಅವಧಿ ಮೀರಿ ಹಂಚಿಕೆಯಾಗದೆ ಉಳಿದಿವೆಯೇ ;

(ಇ) ಸದರಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಎಷ್ಟು ಹುದ್ದೆಗಳು ಖಾಲಿ ಇವೆ ; ಖಾಲಿ ಹುದ್ದೆಗಳನ್ನು ತುಂಬಲು ಕೂಡಲೇ ಕ್ರಮ ಜರುಗಿಸಲಾಗುವುದೆ ?

## ಕಲಬುರಗಿ ಜಿಲ್ಲೆಯಲ್ಲಿ ಮ್ಯಾನ್ ಪವರ್ ಏಜೆನ್ಸಿಗಳು ಕಾರ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೭೭ (೪೯೩) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಮ್ಯಾನ್ ಪವರ್ ಏಜೆನ್ಸಿಗಳು ಕಾರ್ಯನಿರ್ವಹಿಸುತ್ತಿವೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಎಷ್ಟು ಮ್ಯಾನ್ ಪವರ್ ಏಜೆನ್ಸಿಗಳು ಸರ್ಕಾರದಿಂದ ಮಾನ್ಯತೆ ಪಡೆದು ಕಾರ್ಯನಿರ್ವಹಿಸುತ್ತಿವೆ ; ಮಾನ್ಯತೆ ಪಡೆಯದೆ ಕಾರ್ಯನಿರ್ವಹಿಸುತ್ತಿರುವ ಏಜೆನ್ಸಿಗಳು ಯಾವುವು ; (ಅವುಗಳ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಏಜೆನ್ಸಿಗಳು ಮಾನ್ಯತೆ ಅವಧಿ ಮುಗಿದರೂ ಸಕ್ರಿಯವಾಗಿರುವ ಮ್ಯಾನ್ ಪವರ್ ಏಜೆನ್ಸಿಗಳು ಎಷ್ಟು ಮತ್ತು ಮಾನ್ಯತೆ ನವೀಕರಣಗೊಂಡಿರುವ ಏಜೆನ್ಸಿಗಳ ವಿವರ ನೀಡುವುದು ;

(ಈ) ಈ ಜಿಲ್ಲೆಯಲ್ಲಿ ಮನೀಶ್ ಮ್ಯಾನ್ ಪವರ್ ಏಜೆನ್ಸಿಯು ಸರ್ಕಾರದಿಂದ ಮಾನ್ಯತೆ ಪಡೆದಿದೆಯೇ ; ಇದ್ದಲ್ಲಿ, ಸದರಿ ಏಜೆನ್ಸಿಯ ಮೂಲಕ ಎಷ್ಟು ಹೊರಗುತ್ತಿಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ; ಈ ಸಿಬ್ಬಂದಿಗಳಿಗೆ ಸರ್ಕಾರದ

ಸುತ್ತೋಲೆ/ಆದೇಶದಂತೆ ಮಾಸಿಕ ಸಂಭಾವನೆ, ಇ.ಎಸ್.ಐ ಮತ್ತು ಪಿ.ಎಫ್ ಸಮಯಕ್ಕನುಸಾರವಾಗಿ ಸರ್ಕಾರದ ನಿಯಮಾನುಸಾರ ಕಡತವಾಗಿ ಆಯಾ ಸಿಬ್ಬಂದಿಗಳ ಖಾತೆಗೆ ಜಮೆಯಾಗುತ್ತಿದೆಯೇ ? (ಈ ಎಲ್ಲಾ ಅಂಶಗಳ ಕುರಿತು ಸಂಪೂರ್ಣ ವಿವರ ನೀಡುವುದು)

## ನೆನೆಗುದಿಗೆ ಬಿದ್ದಿರುವ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೭೮ (೫೪೨) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭಾರತ ಸಂವಿಧಾನ ೭೩ನೇ ತಿದ್ದುಪಡಿ ಪ್ರಕಾರ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆಯನ್ನು ನಿಯತಕಾಲಿಕವಾಗಿ ಜರುಗಿಸಬೇಕಾಗಿರುವುದು ರಾಜ್ಯ ಸರ್ಕಾರದ ಜವಬ್ದಾರಿಯಲ್ಲವೇ ;

(ಆ) ಹಾಗಿದ್ದಲ್ಲಿ, ಕಳೆದ ೪ ವರ್ಷಗಳಿಂದ ಪಂಚಾಯತ್ ರಾಜ್ ಸಂಸ್ಥೆಗಳ ಚುನಾವಣೆಯನ್ನು ನಡೆಸದೆ ನೆನೆಗುದಿಗೆ ಬಿದ್ದಿರಲು ಕಾರಣವೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯ ಸರ್ಕಾರ ಕರ್ನಾಟಕ ಹೈಕೋರ್ಟ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನು ನಿಗದಿತ ಅವಧಿಯಲ್ಲಿ ನಡೆಸುವುದಾಗಿ ಮುಚ್ಚಳಿಕೆ ಬರೆದುಕೊಟ್ಟು, ಹೈಕೋರ್ಟ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಬಾಕಿಯಿದ್ದ ರಿಟ್ ಅರ್ಜಿ ತೀರುವಳಿಯಾಗಿರುವುದು ನಿಜವೇ ;

ಹಾಗಿದ್ದಲ್ಲಿ, ಸರ್ಕಾರ ನೀಡಿರುವ ಮುಚ್ಚಳಿಕೆಯಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಜರುಗಿಸಲು ಸರ್ಕಾರಕ್ಕೆ ಇರುವ ಸಮಸ್ಯೆಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ಕರ್ನಾಟಕ ಚುನಾವಣಾ ಆಯೋಗ ಕರ್ನಾಟಕ ಹೈಕೋರ್ಟ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದ ಹಿನ್ನಲೆಯಲ್ಲಿ, ಕರ್ನಾಟಕ ಚುನಾವಣಾ ಆಯೋಗವನ್ನು ರದ್ದುಪಡಿಸಿ, ಚುನಾವಣಾ ಕಾರ್ಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ವಹಿಸಲು ನಿರ್ಧರಿಸಿರುವುದು ನಿಜವೇ ; (ವಾಸ್ತವಾಂಶ ಒಳಗೊಂಡ ಪೂರ್ಣ ಮಾಹಿತಿ ನೀಡುವುದು)

(ಉ) ರಾಜ್ಯ ಸರ್ಕಾರಕ್ಕೆ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲು ಇಚ್ಛಾಶಕ್ತಿ ಇದೆಯೇ ; ಇದ್ದಲ್ಲಿ, ಸಂವಿಧಾನದ ಆಶಯದಂತೆ ಚುನಾವಣೆಗಳನ್ನು ಯಾವಾಗ ನಡೆಸಲಾಗುವುದು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದ ಪ್ರಮುಖ ನಗರ ಪ್ರದೇಶಗಳಿಗೆ ಉದ್ಯೋಗ ಆರಸಿ ಯುವತಿ/ಮಹಿಳೆಯವರಿಗೆ ಟ್ರಾನ್ಸಿಟ್ ಹಾಸ್ಟೆಲ್ ವ್ಯವಸ್ಥೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೭೯ (೫೪೬) ಮಾನ್ಯ ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರಾಜಧಾನಿ ಮತ್ತು ಇತರ ಪ್ರಮುಖ ನಗರ ಪ್ರದೇಶಗಳಿಗೆ ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆಗಳಿಗೆ ಬರುವಂತಹ ಯುವತಿ/ಮಹಿಳೆಯರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ

ಯೋಜನೆಗಳ ಅಡಿಯಲ್ಲಿ ಒದಗಿಸಿರುವ ಟ್ರಾನ್ಸೀಟ್ ಹಾಸ್ಟೆಲ್ ವ್ಯವಸ್ಥೆಗಳು ಯಾವುವು ; ಈ ಟ್ರಾನ್ಸೀಟ್ ಹಾಸ್ಟೆಲ್ ವ್ಯವಸ್ಥೆ ಕಾರ್ಯ ಸ್ವರೂಪ ಮತ್ತು ನೀಡುವ ಸೌಲಭ್ಯಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಈ ಟ್ರಾನ್ಸೀಟ್ ಹಾಸ್ಟೆಲ್ ವ್ಯವಸ್ಥೆಯಲ್ಲಿ ಸೌಲಭ್ಯ ಪಡೆದ ಯುವತಿಯರ/ಮಹಿಳೆಯರ ಸಂಖ್ಯೆ ಎಷ್ಟು ; (ವರ್ಷವಾರು ಮತ್ತು ಹಾಸ್ಟೆಲ್‌ವಾರು ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಟ್ರಾನ್ಸೀಟ್ ಹಾಸ್ಟೆಲ್ ವ್ಯವಸ್ಥೆ ಕೇವಲ ರಾಜ್ಯದ ಯುವತಿಯರು/ಮಹಿಳೆಯರಿಗೆ ಸೀಮಿತವಾಗಿದೆಯೇ ಅಥವಾ ಇತರೆ ರಾಜ್ಯದವರಿಗೂ ನೀಡುವ ವ್ಯವಸ್ಥೆ ಇದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿರುವ ಇಂತಹ ಟ್ರಾನ್ಸೀಟ್ ಹಾಸ್ಟೆಲ್ ವ್ಯವಸ್ಥೆ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಸರ್ಕಾರವು ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ಕಟ್ಟಡ ಕಾರ್ಮಿಕರ ಆರೋಗ್ಯ ಪರೀಕ್ಷೆ ಹೆಸರಿನಲ್ಲಿ ಅವ್ಯವಹಾರದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೮೦ (೫೪೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಲ್ಯಾಣ ಮಂಡಳಿಯ ಪ್ರೆವೆಂಟಿವ್ ಹೆಲ್ತ್ ಕೇರ್ ಮತ್ತು ಚೆಕ್ ಅಪ್ ಯೋಜನೆ ಅಡಿ

ಕಟ್ಟಡ ಕಾರ್ಮಿಕರಿಗೆ ವಿವಿಧ ರೀತಿಯ ಆರೋಗ್ಯ ತಪಾಸಣೆಗಳು ಯಾವುವು ; ಈ ಯೋಜನೆಗಳನ್ನು ವಿವಿಧ ಇಲಾಖೆಗಳಲ್ಲಿ ಯಾವ ರೀತಿ ಅನುಷ್ಠಾನಗೊಳಿಸಲಾಗುತ್ತಿದೆ ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಾದ್ಯಂತ ಈ ಯೋಜನೆಗಳನ್ನು ಪ್ರಚುರಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದ ಚಿತ್ರದುರ್ಗ ಜಿಲ್ಲೆ ಒಳಗೊಂಡಂತೆ ವಿವಿಧ ಜಿಲ್ಲೆಗಳಲ್ಲಿ ಆರೋಗ್ಯ ತಪಾಸಣೆಯಲ್ಲಿ ಅಕ್ರಮ ಮತ್ತು ಅವ್ಯವಹಾರ ಎಸಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅಕ್ರಮಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಅನುಷ್ಠಾನದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೮೧ (೫೪೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯನ್ನು ಯಾವ ವರ್ಷದಿಂದ ಜಾರಿಗೊಳಿಸಲಾಗಿದೆ ಮತ್ತು ಈ ಯೋಜನೆಯ ಧ್ಯೇಯೋದ್ದೇಶಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಫಸಲ್ ಭೀಮಾ ಯೋಜನೆ ಬಗ್ಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅಧ್ಯಯನ ಕೈಗೊಂಡಿವೆಯೇ ; ಹಾಗಿದ್ದಲ್ಲಿ, ಈ ಅಧ್ಯಯನದ ಸಾರಾಂಶಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಫಸಲ್ ಭೀಮಾ ಯೋಜನೆಯನ್ನು ನಿರ್ವಹಣೆ ಮಾಡುತ್ತಿರುವ ಸರ್ಕಾರಿ ಮತ್ತು ಖಾಸಗಿ ಇನ್ಸೂರೆನ್ಸ್ ಕಂಪನಿಗಳು ಯಾವುವು ಮತ್ತು ಕಳೆದ ಮೂರು ವರ್ಷಗಳಲ್ಲಿ ಈ ಕಂಪನಿಗಳು ತೊಡಗಿಸಿದ ಪ್ರೀಮಿಯಂ ಮೊತ್ತ ಎಷ್ಟು ; ರೈತರಿಗೆ ನೀಡಿದ ಬೆಳೆ ಪರಿಹಾರವೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಈ) ಫಸಲ್ ಭೀಮಾ ಯೋಜನೆಯನ್ನು ತುಲನಾತ್ಮಕವಾಗಿ ಪರಿಶೀಲಿಸಿದಾಗ ಖಾಸಗಿ ಇನ್ಸೂರೆನ್ಸ್ ಕಂಪನಿಗಳು ಸಾಕಷ್ಟು ಲಾಭಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ನ್ಯೂನ್ಯತೆಯನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗುಜರಾತ್ ಮಾದರಿಯಲ್ಲಿ ಕೇಂದ್ರಿಯ ವಾಣಿಜ್ಯ ಜಿಲ್ಲೆ ಸ್ಥಾಪನೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೪೮೨ (೫೪೩) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಸರ್ಕಾರ, ಕೇಂದ್ರ ಸರ್ಕಾರಕ್ಕೆ ಗುಜರಾತ್ ರಾಜ್ಯದ ಅಹ್ಮದಾಬಾದ್‌ನಲ್ಲಿ ಸ್ಥಾಪಿತವಾಗಿರುವ ಅಂತರಾಷ್ಟ್ರೀಯ ಹಣಕಾಸು ತಂತ್ರಜ್ಞಾನ ನಗರ (GIFT) ಮಾದರಿಯಲ್ಲಿ ರಾಜ್ಯದಲ್ಲಿ ಕೇಂದ್ರೀಯ ವಾಣಿಜ್ಯ ಜಿಲ್ಲೆ (CBD) ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆ ರೂಪುರೇಷಗಳು ಯಾವುವು ; ಮತ್ತು ಈ ಕೇಂದ್ರಿಯ ವಾಣಿಜ್ಯ ಜಿಲ್ಲೆಯನ್ನು (CBD) ರಾಜ್ಯದ ಯಾವ ಭಾಗದಲ್ಲಿ ಸ್ಥಾಪಿಸಲು ಉದ್ದೇಶಿಸಿದೆ; (ಪೂರ್ಣ ಮಾಹಿತಿ ನೀಡುವುದು)

(ಇ) ಈ ಕೇಂದ್ರಿಯ ವಾಣಿಜ್ಯ ಜಿಲ್ಲೆ (CBD) ಸ್ಥಾಪನೆಗೆ ಕೇಂದ್ರ ಸರ್ಕಾರದಿಂದ ದೊರೆಯುವ ನೆರವು ಮತ್ತು ಸೌಲಭ್ಯಗಳು ಯಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಉದ್ದೇಶಿತ ಕೇಂದ್ರಿಯ ವಾಣಿಜ್ಯ ಜಿಲ್ಲೆ (CBD) ಸ್ಥಾಪನೆಯಿಂದ ಉದ್ಭವಿಸುವ ಉದ್ಯೋಗಾವಕಾಶಗಳು ಮತ್ತು ಸ್ಥಳೀಯ ಉದ್ಯಮಿಗಳಿಗೆ ದೊರೆಯುವ ಸೌಲಭ್ಯಗಳು ಯಾವುವು ? (ಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಕೃಷಿ ಭೂಮಿಯಲ್ಲಿ ಅತಿಯಾದ ರಾಸಾಯನಿಕ ರಸಗೊಬ್ಬರಗಳ ಬಳಕೆಯಿಂದಾಗಿ ಮಣ್ಣಿನ ಫಲವತ್ತತೆ ಕಳೆದುಕೊಳ್ಳುತ್ತಿರುವ ಬಗ್ಗೆ

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೮೩ (೫೨೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಕೃಷಿ ಭೂಮಿಯಲ್ಲಿ ಹೆಚ್ಚುತ್ತಿರುವ ರಾಸಾಯನಿಕ ರಸಗೊಬ್ಬರಗಳ ಬಳಕೆ ಏಕ ರೀತಿಯ ಬೆಳೆ ಪದ್ಧತಿ, ತ್ಯಾಜ್ಯವನ್ನು ಸುಡುವುದು ಹಾಗೂ ಕಾಂಪೋಸ್ಟ್ ಗೊಬ್ಬರದ ಬಗ್ಗೆ ನಿರ್ಲಕ್ಷಿಸುತ್ತಿರುವುದರಿಂದಾಗಿ ಫಲವತ್ತತೆ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಮಣ್ಣಿನ ಫಲವತ್ತತೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ೧೯೭೦ ರ ದಶಕದಲ್ಲಿ ರಾಜ್ಯದ ಭೂಮಿಯನ್ನು ಶೇ.೧%ರಷ್ಟಿದ್ದ ಸಾವಯವ ಇಂಗಾಲದ ಪ್ರಮಾಣ ಈಗ ಶೇ.೦.೩೨ ರಷ್ಟಾಗಿದ್ದು ಇದಕ್ಕೆ ಮೂಲ ಕಾರಣಗಳು ಯಾವುವು ; ಸಾವಯವ ಇಂಗಾಲಯದ ಪ್ರಮಾಣದಲ್ಲಿ ಇಳಿಕೆ ಕಂಡಿರುವ ರಾಜ್ಯದ ಜಿಲ್ಲೆಗಳು ಯಾವುವು ;

(ಇ) ರಾಜ್ಯದಲ್ಲಿ ರಸಾಯನಿಕ ರಸಗೊಬ್ಬರಗಳನ್ನು ಮಾರಾಟ ಮಾಡುತ್ತಿರುವ ಕಂಪನಿಗಳು ಯಾವುವು ; ಈ ಕಂಪನಿಯ ಒಳ್ಳೆಯ ಗುಣಮಟ್ಟದಲ್ಲದ ಉತ್ಪನ್ನಗಳಿಂದಾಗಿ ರೈತರ ಕೃಷಿ ಭೂಮಿಯ ಫಲವತ್ತತೆ ಕಳೆದುಕೊಂಡು ಉತ್ತಮ ಇಳುವರಿ ಪಡೆಯುವಲ್ಲಿ ವಿಫಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತಹ ಯಾವ ಯಾವ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಾಜ್ಯದ ರೈತರಲ್ಲಿ ಸಾವಯವ ಕೃಷಿ ವ್ಯವಸಾಯದ ಬಗ್ಗೆ ಅರಿವು ಮಾಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

# ರಾಜ್ಯದಲ್ಲಿ ದಿನೇ ದಿನೇ ಕ್ಷೀಣಿಸುತ್ತಿರುವ ಆಹಾರ ಧಾನ್ಯ ಬೆಳೆ ಪ್ರದೇಶದ ಕುರಿತು

**ಶ್ರೀಮತಿ ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :-**

೪೮೪೪ (೫೨೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಒಟ್ಟು ಆಹಾರ ಧಾನ್ಯಗಳನ್ನು ಬೆಳೆಯುತ್ತಿರುವ ಕೃಷಿ ಪ್ರದೇಶದ ಪ್ರಮಾಣವೆಷ್ಟು ; ಕಳೆದ ಐದು ವರ್ಷಗಳಲ್ಲಿ ಕೃಷಿ ಪ್ರದೇಶದ ಪ್ರಮಾಣದಲ್ಲಿ ಆದ ಬದಲಾವಣೆಗಳೇನು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಇತ್ತೀಚಿಗೆ ರಾಜ್ಯದಲ್ಲಿ ಭತ್ತ, ಜೋಳ ಹಾಗೂ ತೊಗರಿಯಂತಹ ಬೆಳೆಗಳನ್ನು ಬೆಳೆಯುವ ಪ್ರದೇಶದ ಪ್ರಮಾಣದಲ್ಲಿ ಗಣನೀಯ ಇಳಿಕೆ ಕಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕಾರಣಗಳಿಂದಾಗಿ ಇಳಿಕೆಯಾಗುತ್ತಿದೆ ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಆಹಾರ ಧಾನ್ಯಗಳನ್ನು ಬೆಳೆಯುತ್ತಿರುವ ಕೃಷಿ ಪ್ರದೇಶಗಳನ್ನು ಅಡಿಕೆಯಂತಹ ವಾಣಿಜ್ಯ ಬೆಳೆಗಳು ಹಾಗೂ ಇತರೆ ಉದ್ದೇಶಗಳಿಗೆ ಪರಿವರ್ತನೆಯಾಗುತ್ತಿರುವುದರಿಂದ, ಆಹಾರ ಧಾನ್ಯ ಬೆಳೆ ಪ್ರದೇಶದ ಪ್ರಮಾಣದಲ್ಲಿ ಗಣನೀಯ ಇಳಿಕೆ ಕಂಡು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಿಂದಿನ ಸರ್ಕಾರದ ಅವಧಿಯಲ್ಲಿ ಭೋವಿ ಅಭಿವೃದ್ಧಿ ನಿಗಮಕ್ಕೆ ನೀಡಿರುವ ಅನುದಾನ ಕುರಿತು

**ಶ್ರೀ. ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದರು) :-**

೪೮೫ (೩೦೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಿಂದಿನ ಸರ್ಕಾರದ ಅವಧಿಯಲ್ಲಿ ಭೋವಿ ಅಭಿವೃದ್ಧಿ ನಿಗಮಕ್ಕೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಸದರಿ ಅನುದಾನವನ್ನು ಯಾವ ಯಾವ ಕಾರ್ಯಕ್ರಮ/ಯೋಜನೆಗಳಿಗಾಗಿ ಬಳಕೆ ಮಾಡಲಾಗಿದೆ ;

(ಆ) ಅನುದಾನ ಬಳಕೆಯಲ್ಲಿ ಗುರಿ ಸಾಧಿಸಲಾಗಿದೆಯೇ ; ನಿಗಮದ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಅವ್ಯವಹಾರ ಪ್ರಕರಣಗಳು ಜರುಗಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಕ್ರಮಗಳ ಬಗ್ಗೆ ತನಿಖೆ ಕೈಗೊಳ್ಳಲಾಗಿದೆಯೇ ?

## NOC ವಿತರಿಸದಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ

**ಶ್ರೀ ಸಿ.ಪಿ. ಯೋಗೇಶ್ವರ್ (ನಾಮನಿರ್ದೇಶನ ಹೊಂದಿದವರು) :-**

೪೮೬ (೪೬೯) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕು ವಿರುಪಸಮುದ್ರ ಗ್ರಾಮದ ಸರ್ವೇ ನಂ.೨೩೬/೧, ೨೩೬/೨ ಮತ್ತು ೨೩೬/೩ ರಲ್ಲಿ ದಿನಾಂಕ: ೨೫-೦೯-೨೦೨೩ ರಂದು ದಸ್ತಾವೇಜು ಸಂಖ್ಯೆ:೩೧೫೭/

೨೦೨೩-೨೪ರ ಲೀಸ್‌ಡೀಡ್ ಮಾಡಿರುವುದು ಕಾನೂನು ಬಾಹಿರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೇ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ಸದರಿ ಲೀಸ್ ಡೀಡ್ ಬಗ್ಗೆ ತಾಲ್ಲೂಕು ಪಂಚಾಯಿತಿ ಕಛೇರಿ ಹಾಗೂ ಗ್ರಾಮ ಪಂಚಾಯಿತಿ ಕಛೇರಿಗಳಿಗೆ ಬಂದಿರುವ ದೂರುಗಳು ಎಷ್ಟು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಬಂದಿರುವ ದೂರುಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಕೃಷಿ ವಿಶ್ವ ವಿದ್ಯಾಲಯದಲ್ಲಿರುವ ಖಾಲಿ ಹುದ್ದೆಗಳ ಕುರಿತು

**ಡಾ: ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೪೮೭ (೪೭೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಯಚೂರಿನ ಕೃಷಿ ವಿಶ್ವವಿದ್ಯಾಲಯದಲ್ಲಿ ೨೦೧೫ ರಲ್ಲಿ ಸಹಾಯಕ ಹುದ್ದೆಗಾಗಿ ३६ (ಹೈ.ಕ) ಅಭ್ಯರ್ಥಿಗಳಿಗೆ ಆಯ್ಕೆ ಮಾಡಿ ಮಾರ್ಚ್-೨೦೨೩ರಲ್ಲಿ ದಾಖಲಾತಿ ಪರಿಶೀಲನೆಗಾಗಿ ಕರೆದು ಇಲ್ಲಿಯವರೆಗೆ ನೇಮಕಾತಿ ಪಟ್ಟಿಯನ್ನು ಪ್ರಕಟಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಕಾರಣಕ್ಕಾಗಿ ನೇಮಕಾತಿ ಪಟ್ಟಿ ಪ್ರಕಟಿಸಿರುವುದಿಲ್ಲ ;

(ಇ) ಯಾವಾಗ ನೇಮಕಾತಿ ಪಟ್ಟಿ ಪ್ರಕಟಿಸಲಾಗುವುದು ?

## ಕಲ್ಯಾಣ ಕರ್ನಾಟದಲ್ಲಿ ಬರುವ ಹಿಂದುಳಿದ ವರ್ಗಗಳ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳ ಬಗ್ಗೆ

**ಡಾ॥ ಚಂದ್ರಶೇಖರ್ ಬಸವರಾಜ ಪಾಟೀಲ್ (ಪದವೀಧರರ ಕ್ಷೇತ್ರ) :-**

೪೮೮ (೪೭೮) ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳೆಷ್ಟು ; ಅಲ್ಲಿ ದೊರೆಯುವ ವಿವಿಧ ಸೌಲಭ್ಯಗಳು ಯಾವುವು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಬೀದರ್ ಮತ್ತು ಕಲಬುರಗಿ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ವಸತಿ ನಿಲಯಗಳೆಷ್ಟು; ಏಪ್ರಿಲ್-೨೦೨೩ ರಿಂದ ಇಲ್ಲಿಯವರೆಗೆ ಲೆಕ್ಕಶೀರ್ಷಿಕೆವಾರು ನಿಗಧಿಯಾದ ಅನುದಾನವೆಷ್ಟು ; (ಖರ್ಚಾಗಿರುವ ಅನುದಾನದ ಮಾಹಿತಿ ನೀಡುವುದು)

(ಇ) ೨೦೨೩–೨೪ನೇ ಸಾಲಿನಲ್ಲಿ ಬೀದರ್ ಮತ್ತು ಕಲಬುರಗಿ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ವಸತಿ ನಿಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ವಿದ್ಯಾರ್ಥಿಗಳಿಗೆ ನಿಯಮಾನುಸಾರ ನೀಡಿದ ಪ್ರವೇಶಗಳೆಷ್ಟು ಹಾಗೂ ಶಿಫಾರಸ್ಸು ಮೇಲೆ ನೀಡಿದ ಪ್ರವೇಶಗಳೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0431/400 ಪ್ರತಿಗಳು/12–07–2024